ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ   Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 106 ಸಂಚಿಕೆ- 106 | PAGE-8 ಪುಟ-8 | ಮಂಗಳವಾರ 03.06.2025 | RS.2/- ಬೆಲೆ 2/-

# ಬೂಕರ್ ಪ್ರಶಸ್ತಿ ಪುರಸ್ಕೃತರಿಗೆ ತಲಾ 10 ಲಕ್ಷ ರೂ.ಗಳ ಪುರಸ್ಕಾರ : ಸಿದ್ದರಾಮಯ್ಯ

ಮಲ್ಲಮ್ಮನುಡಿ ವಾರ್ತೆ ಬೆಂಗಳೂರು, ಜೂನ್ 02 :ಕನ್ನಡ ಸಾಹಿತ್ಯಕ್ಕೆ ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ ದೊರೆಯುವಂತೆ ಮಾಡಿ, ಜಾಗತಿಕ ಮಟ್ಟದಲ್ಲಿ ಖ್ಯಾತಿಗಳಿಸುವಂತೆ ಮಾಡಿದ ನಮ್ಮ ಹೆಮ್ಮೆಯ ಅಂತರರಾಷ್ಟ್ರೀಯ ಬೂಕರ್ ಪ್ರಶಸಿ ಪುರಸ್ಕೃತರಾದ ಶ್ರೀಮತಿ ಬಾನು ಮುಷ್ತಾಕ್ ಹಾಗೂ ಶ್ರೀಮತಿ ದೀಪಾ ಭಾಸ್ತಿ ಅವರಿಗೆ ತಲಾ 10 ಲಕ್ಷ ರೂಗಳಂತೆ 20 ಲಕ್ಷ ರೂಗಳ ಪುರಸ್ಕಾರ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಇಂದು ಕನ್ನಡ ಸಂಸ್ಕೃತಿ ಇಲಾಖೆಯ ವತಿಯಿಂದ ವಿಧಾನಸೌಧ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮಿಕೊಂಡಿದ್ದ ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ ಪುರಸ್ಕೃತರಾದ ಶ್ರೀಮತಿ ಬಾನು ಮುಷ್ತಾಕ್ ಹಾಗೂ ಶ್ರೀಮತಿ ದೀಪಾ ಭಾಸ್ತಿ ರವರಿಗೆ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ, ಪ್ರಶಸ್ತಿ ಪುರಸ್ಕೃತರನ್ನು ಸನ್ಮಾನಿಸಿ ಮಾತನಾಡಿದ ಮುಖ್ಯಮಂತ್ರಿಗಳು, ಇನ್ನು ಮುಂದೆ ಕನ್ನಡ ಸಾಹಿತ್ಯವನ್ನು ಇಂಗ್ಲೀಷಗೆ ಅನುವಾದ ಮಾಡಲು ಸರ್ಕಾರದಿಂದ ಅನುದಾನ ಬಿಡುಗಡೆ ಮಾಡಲಾಗುವುದು ಎಂದರು. ಇತ್ತೀಚೆಗೆ ಬೂಕರ್ ಪ್ರಶಸ್ತಿ ವಿಜೇತರಾದ ಶ್ರೀಮತಿ ಬಾನು ಮುಷ್ತಾಕ್ ಅವರ 12 ಆಯ್ದ ಕಥೆಗಳನ್ನು "ಹಾರ್ಟ್ ಲ್ಯಾಂಪ್" ಹೆಸರಿನ ಪುಸ್ತಕವನ್ನಾಗಿ ಅನುವಾದ ಮಾಡಿದ ಶ್ರೀಮತಿ ದೀಪಾ ಭಾಸ್ತಿ ಇಬ್ಬರಿಗೂ ಸರ್ಕಾರದಿಂದ ಅಭಿನಂದನೆ ಸಲ್ಲಿಸಲು ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಸರ್ಕಾರದ ಪರವಾಗಿ ಹೃದಯಪೂರ್ವಕವಾಗಿ ಅಭಿನಂದನೆ ಸಲ್ಲಿಸುತ್ತೇನೆ. 2025ನೇ ಸಾಲಿನಲ್ಲಿ ಬಾನು ಮುಷ್ತಾಕ್ ಅವರ "ಹಸೀನ" ಹಾಗೂ ಇತರ ಕಥೆಗಳು ಪುಸ್ತಕಕ್ಕೆ ಹಾಗೂ ಅನುವಾದಿತ "ಹೃದಯದ ಹಣತೆ"ಗೆ ಬೂಕರ್ ಪ್ರಶಸ್ತಿ ದೊರೆತಿದೆ. ಕನ್ನಡದಲ್ಲಿ ಬರೆದಿರುವ ಕಥೆಗೆ ಇಂಗ್ಲೀಷನಲ್ಲಿ ಅನುವಾದ ಮಾಡಿರುವ ಪುಸ್ತಕಕ್ಕೆ ಪ್ರಶಸ್ತಿ ದೊರೆತಿರುವುದು ವಿಶೇಷವಾಗಿದ್ದು, ಇಬ್ಬರು ಸಾಹಿತಿಗಳನ್ನು ಅಭಿನಂದಿಸುತ್ತೇವೆ ಎಂದರು. ಶ್ರೀಮತಿ ಬಾನು ಮುಷ್ತಾಕ್ ಅವರು ಪತ್ರಕರ್ತೆಯಾಗಿ ಲೇಖಕಿಯಾಗಿ, ವಕೀಲರಾಗಿ ಎಲ್ಲಕ್ಕಿಂತ ಮುಖ್ಯವಾಗಿ ಹೋರಾಟಗಾರರಾಗಿ ತಮ್ಮನ್ನು ಈ ಸಮಾಜದಲ್ಲಿ ಗುರುತಿಸಿಕೊಂಡಿದ್ದಾರೆ. ಬಹಳಷ್ಟು ಜನ ಹೆಣ್ಣು ಮಕ್ಕಳು ಅವರ



ವಯಸ್ಸಿನಲ್ಲಿ ಮದುವೆ ಸಂಭ್ರಮದಲ್ಲಿದ್ದರೆ, ಇವರು ಕಾಲೇಜು ಶಿಕ್ಷಣ ಪಡೆದು ಬಿಎಸ್ಸಿ, ಎಎಬಿ ಪದವಿ ಪಡೆದು ತಮ್ಮನ್ನು ಸಮಾಜಕ್ಕೆ ಸಂಪೂರ್ಣವಾಗಿ ಅರ್ಪಿಸಿಕೊಂಡಿದ್ದಾರೆ. ವಕೀಲೆಯಾಗಿ ಬಹಳಷ್ಟು ಜನ ಹೆಣ್ಣು ಮಕ್ಕಳಿಗೆ ನ್ಯಾಯ ದೊರಕಿಸಿ ಕೊಟ್ಟಿದ್ದಾರೆ. ಕರ್ನಾಟ ರಾಜ್ಯೋತ್ಸವ ಪ್ರಶಸ್ತಿ, ಅತ್ತಿಮಬ್ಬೆ, ಕರ್ನಾಟಕ ಸಾಹಿತ್ಯ ಅಕಾಡೆಮಿಯ ಗೌರವ ಪ್ರಶಸ್ತಿ ಇನ್ನೂ ಅನೇಕ ಪ್ರಶಸ್ತಿಗಳನ್ನು ಪಡೆದಿದ್ದಾರೆ. ಅವರ ಬರಹದಲ್ಲಿ ಸಾಮಾಜಿಕ ಕಳಕಳಿ, ಸಾಮಾಜಿಕ ಸಂದೇಶ ಇರುವುದರಿಂದ ಶಕ್ತಿಯುತ ಬರಹಗಾರರಾಗಿ ಹೊರಹೊಮ್ಮಿದ್ದಾರೆ. ಅವರ ಕಥೆಗಳ ಮೂಲಕ ಇಡೀ ಜಗತ್ತಿನ ಲೇಖನದ ಮೂಲಕ ಅವರ ಮನಸ್ಸಿನ ನೋವನ್ನು ತಿಳಿಸುವ ಪ್ರಯತ್ನ ಮಾಡಿದ್ದಾರೆ. ಸಮಾಜದಲ್ಲಿನ ಶೋಷಿತ ಮಹಿಳೆಯರ ಅದರಲ್ಲೂ ಮುಸ್ಲಿಂ ಮಹಿಳೆಯರ ಧ್ವನಿಯಾಗಿ ಕೆಲಸ ಮಾಡಿದ್ದಾರೆ. ಅವರಲ್ಲಿ ವೈಚಾರಿಕತೆ ಇರುವುದರಿಂದ ಗೊಡ್ಡು ಸಂಪ್ರದಾಯ ಮತ್ತು ಕಂದಾಚಾರಗಳ ವಿರುದ್ಧ ಗುರುತಿಸಿಕೊಂಡಿದ್ದಾರೆ. ಮನುಷ್ಯ ಸಮಾಜದಲ್ಲಿ ಹೇಗಿರಬೇಕೆಂಬ ಎಂಬ ಬಗ್ಗೆ ಸಾಹಿತ್ಯದ ಮೂಲಕ ಇಡೀ ಸಮಾಜಕ್ಕೆ ಸಂದೇಶ ಕೊಟ್ಟಿದ್ದಾರೆ. ಬೂಕರ್ ಪ್ರಶಸ್ತಿ ಬಂದಿರುವದರಿಂದ ಸಾಹಿತ್ಯ ಕ್ಷೇತ್ರ ಇನ್ನೂ ಹೆಚ್ಚು ಜವಾಬ್ದಾರಿಯುತವಾಗಿ ಕೆಲಸ ಮಾಡುವಂತೆ ನಿರ್ಮಾಣವಾಗಿದ್ದು, ಸಾಹಿತ್ಯಕ್ಕೆ ಮೊದಲಿಗಿಂತ ಜವಾಬ್ದಾರಿ ಹೆಚ್ಚಾಗಿದೆ ಎಂದರು. ಕನ್ನಡ ಸಾಹಿತ್ಯಕ್ಕೆ ದೀರ್ಘವಾದ ಇತಿಹಾಸವಿದ್ದು, 1200 ವರ್ಷಗಳಿಂದ ಜನರನ್ನು ಒಟ್ಟುಗೂಡಿಸುವ ಕೆಲಸ ಮಾಡುತ್ತಿದೆ. ಕನ್ನಡದಲ್ಲಿ ಲಭ್ಯವಿರುವ ಕೃತಿ ಕವಿರಾಜ ಮಾರ್ಗ ಇದರಲ್ಲಿ ಪರಧರ್ಮ, ಪರವಿಚಾರಗಳನ್ನು ಸಹನಾಭೂತಿಯಿಂದ ನೋಡುವುದೆ ನಿಜವಾದ ಒಡವೆ ಎಂದಿದ್ದಾರೆ. ಆದಿಕವಿ ಪಂಪ ಅವರು ಮನುಷ್ಯ ಜಾತಿ ತಾನೊಂದೆ ವಲಂ ಎಂದು ಹೇಳಿದ್ದಾರೆ ಬಸವಣ್ಣ ಇವನಾರವ ಎಂದು ಹೇಳಬೇಡ, ಇವ ನನ್ನವ ಎಂದರು. ಅಕ್ಕಮಹಾದೇವಿಯೂ ಸಹ ಹೆಣ್ಣು ಮಕ್ಕಳ ಪರವಾಗಿ ಧ್ವನಿ ಎತ್ತಿದರು ಎಂದರು.

ಇನ್ನು ಮುಂದೆ ಬಾನು ಮುಷ್ತಾಕ್ ಅವರ ಪುಸ್ತಕಗಳನ್ನು ಗ್ರಂಥಾಲಯಗಳಿಗೆ ಕೊಂಡುಕೊಳ್ಳಲಾಗುವುದು. ಶ್ರೀಮತಿ ದೀಪಾ ಭಾಸ್ತಿ ಅವರು ಬಾನು ಮುಷ್ತಾಕ್ ಅವರ ಕಥೆಗಳನ್ನು ಇಂಗ್ಲೀಷಿಗೆ ಅನುವಾದ ಮಾಡಿರುವುದರಿಂದ ಬೂಕರ್ ಪ್ರಶಸ್ತಿ ದೊರೆತಿದೆ. ಆದ್ದರಿಂದ ಇವರಿಗೆ ವಿಶೇಷ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಾತನಾಡಿ,

ಶ್ರೀಮತಿ ಬಾನು ಮುಷ್ತಾಕ್ ಹಾಗೂ ಶ್ರೀಮತಿ ದೀಪಾ

ಭಾಸ್ತಿ ಅವರು ವಿಶ್ವಮಟ್ಟದಲ್ಲಿ ರಾಯಭಾರಿಯಾಗಿ ಬೆಳೆದಿದ್ದಾರೆ. ನಮ್ಮ ಜಗತ್ತಿಗೆ ಕನ್ನಡದ ಜ್ಯೋತಿ ಬೆಳಗಿದ್ದಾರೆ. ಕನ್ನಡ ಉಳಿಸಿದ್ದಾರೆ. ಸಪ್ತಸಾಗರದ ಆಚೆ ಇಂದು

ಕನ್ನಡಕ್ಕೆ ಗೌರವ ತಂದಿರುವ ಇವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.


ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ ಅವರು ಪ್ರಾಸ್ತಾವಿಕ

(2ನೇ ಪುಟ ನೋಡಿ)

## ರಾಜಕೀಯ ಲಾಭಕ್ಕಾಗಿ ಮಾತನಾಡುವುದು ನೋಡಿ ಬೇಸರ:ಸಲ್ಮಾನ ಖುರ್ಷಿದ್

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.2:ಭಯೋತ್ಪಾದನೆಯ ವಿರುದ್ಧ ಕೆಲಸ ಮಾಡುವಾಗ ದೇಶಭಕ್ತನಾಗುವುದು ಅಷ್ಟು ಕಷ್ಟವೇ. ಇಂದು 'ಜನರು ರಾಜಕೀಯ ಲಾಭಕ್ಕಾಗಿ ಮಾತನಾಡುತ್ತಿದ್ದಾರೆ' ಎಂಬುದನ್ನು ನೋಡಿ ಬೇಸರವಾಗಿದೆ ಎಂದು ಕಾಂಗ್ರೆಸ್ ನಾಯಕ ಸಲ್ಮಾನ್ ಖುರ್ಷಿದ್ ಹೇಳಿದ್ದಾರೆ. ಪ್ರಸ್ತುತ ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದನೆಯ ವಿರುದ್ಧದ ಕಾರ್ಯಾಚರಣೆಯಲ್ಲಿ ಸಲ್ಮಾನ್ ಖುರ್ಷಿದ್ ಸರ್ವಪಕ್ಷ ನಿಯೋಗದ ಭಾಗವಾಗಿದ್ದು ವಿದೇಶ ಪ್ರವಾಸದಲ್ಲಿದ್ದಾರೆ.

ಸಲ್ಮಾನ್ ಖುರ್ಷಿದ್ ಜನತಾದಳ (ಯು) ಸಂಸದ ಸಂಜಯ್ ಕುಮಾರ್ ಝಾ ನೇತೃತ್ವದ ಸರ್ವಪಕ್ಷ ನಿಯೋಗದ ಭಾಗವಾಗಿದ್ದಾರೆ. ಇಂಡೋನೇಷ್ಯಾ, ದಕ್ಷಿಣ ಕೊರಿಯಾ, ಜಪಾನ್ ಮತ್ತು ಸಿಂಗಾಪುರಕ್ಕೆ ಭೇಟಿ ನೀಡಿದ ನಂತರ ಈ ನಿಯೋಗ ಪ್ರಸ್ತುತ ಮಲೇಷ್ಯಾದಲ್ಲಿದೆ. ನಿಯೋಗದಲ್ಲಿ ಬಿಜೆಪಿ ಸಂಸದರಾದ ಬ್ರಿಜ್ ಲಾಲ್, ಪ್ರದಾನ್ ಬರುವಾ, ಹೇಮಾಂಗ್ ಜೋಶಿ ಮತ್ತು ಅಪರಾಜಿತಾ



ಸಾರಂಗಿ, ತೃಣಮೂಲ ಕಾಂಗ್ರೆಸ್ ನಾಯಕ ಅಭಿಷೇಕ್ ಬ್ಯಾನರ್ಜಿ, ಸಿಪಿಎಂನ ಜಾನ್ ಬ್ರಿಟ್ಟಾಸ್ ಮತ್ತು ಮೋಹನ್ ಕುಮಾರ್ ಸೇರಿದ್ದಾರೆ. 'ಭಯೋತ್ಪಾದನೆಯ ವಿರುದ್ಧದ ಕಾರ್ಯಾಚರಣೆಯಲ್ಲಿ, ಜಗತ್ತಿಗೆ ಭಾರತದ ಸಂದೇಶವನ್ನು ನೀಡಲು, ಜನರು ರಾಜಕೀಯ ಲಾಭಕ್ಕಾಗಿ ಮಾತನಾಡುತ್ತಿರುವುದನ್ನು ನೋಡುವುದು ದುಃಖಕರವಾಗಿದೆ. ದೇಶಭಕ್ತನಾಗುವುದು ತುಂಬಾ ಕಷ್ಟವೇ?' ಎಂದು ಸಲ್ಮಾನ್ ಖುರ್ಷಿದ್ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಖುರ್ಷಿದ್ ಅವರು, ತಮ್ಮ ಎಕ್ಸ್ ಪೋಸ್ಟ್ ಬಗ್ಗೆ ನಿರಂತರವಾಗಿ ಅನೇಕ ಪ್ರಶ್ನೆಗಳನ್ನು ಕೇಳಲಾಗುತ್ತಿದೆ. ಅದು 'ನೀವು ದೇಶಕ್ಕಾಗಿ ಏನಾದರೂ ಮಾಡಲು ಬಯಸಿದಾಗ ಕೇಳುವುದಿಲ್ಲ' ಎಂದು ಹೇಳಿದರು. 'ಜನರು ಬಿಜೆಪಿ ಸಂಸದರ ನಿಯೋಗದಲ್ಲಿ ನೀವು ಏನು ಮಾಡುತ್ತಿದ್ದೀರಿ ಎಂದು ಹೇಳುತ್ತಲೇ ಇರುತ್ತಾರೆ. ನೀವು ಅಲ್ಲಿ ಏನು ಮಾಡುತ್ತಿದ್ದೀರಿ? ನಾವು ಇಲ್ಲಿ ದೇಶಕ್ಕೆ ಅಗತ್ಯವಾದದ್ದನ್ನು ಮಾಡುತ್ತಿದ್ದೇವೆ. ನೀವು ಯಾವ ಪಕ್ಷಕ್ಕೆ ಸೇರಿದವರು ಎಂಬುದು ಮುಖ್ಯವಲ್ಲ, ಇಂದು ಅಗತ್ಯವಾಗಿರುವುದು ದೇಶವನ್ನು ಬೆಂಬಲಿಸುವ ಧ್ವನಿ ಮತ್ತು ಅದನ್ನೇ ನಾವು ಮಾಡುತ್ತಿದ್ದೇವೆ. ದೇಶಭಕ್ತನಾಗುವುದು ತುಂಬಾ ಕಷ್ಟನಾ? – ದೇಶಕ್ಕಾಗಿ ಏನಾದರೂ ಮಾಡಲು ಬಯಸಿದಾಗ ಪ್ರೋತ್ಸಾಹಿಸದ ವಿಷಯಗಳನ್ನು ಟ್ವೀಟ್ ಮಾಡುವ ಮತ್ತು ಹೇಳುವವರಿಗೆ ಈ ಪ್ರಶ್ನೆಯನ್ನು ಕೇಳಬೇಕು ಎಂದರು.

ಜನರು ಸರ್ಕಾರವನ್ನು ಬೆಂಬಲಿಸುತ್ತಿದ್ದಾರೆ ಎಂದು ಖುರ್ಷಿದ್ ಹೇಳಿದರು. ಭಯೋತ್ಪಾದನಾ ವಿರೋಧಿ ಅಭಿಯಾನವನ್ನು 'ಭಾರತ ಮೊದಲು' ಎಂದು ಅವರು ಹೇಳುತ್ತಿರುವುದರಿಂದ ಅವರು

(2ನೇ ಪುಟ ನೋಡಿ)

## ಇಬ್ಬರ ಪ್ರಾಣ ರಕ್ಷಿಸಿದ ಕನ್ಯಾಕೋಳೂರು ಗ್ರಾಮದ ಸ್ನೇಹಿತರು





ಮಲ್ಲಮ್ಮ ನುಡಿ ವಾರ್ತೆ ಶಹಾಪುರ:ಜೂ.2: ಈಜು ಬಾರದ ಯುವಕರು ಬಾವಿಯಲ್ಲಿ ಬಿದ್ದಾಗ ರಕ್ಷಣೆ ಮಾಡಿದ ಸುನಿಲ್ ಹನುಮಂತ ಅನಿಲ್ ಕನ್ಯಕೋಳೋರ್ ಯುವಕರು.

ಇಲ್ಲಿನ ಕನ್ಯಾಕೋಳೂರು ಗ್ರಾಮದ ತಾಂಡಾದ ಪಕ್ಕದಲ್ಲಿರುವ ಬಾವಿಯಲ್ಲಿ ಈಜು ಬಾರದ ಹುಡುಗರಾದ ವಿಕ್ಕಿ 8 ವರ್ಷದ ಬಾಲಕ ಹಾಗೂ ಕುನಾಲ್ 9 ವರ್ಷದ ಬಾಲಕ ಇಬ್ಬರು ಈಜಲು ಹೋಗಿ ಬಾವಿಯಲ್ಲಿ ಬಿದ್ದು ಈಜು ಬರದೇ ಚಿರಾಡುತ್ತಿದ್ದರು. ದಾರಿಯಲ್ಲಿ ಹೋಗುತ್ತಿರುವ ಸುನಿಲ್ ಹಾಗೂ ಅನೀಲ್ ಎಂಬ ಯುವಕರು ಏನೋ ಶಬ್ದವಾಗುತ್ತದೆ ನೋಡೋಣ ಬನ್ನಿ ಎಂದು ಸ್ಥಳಕ್ಕೆ ಧಾವಿಸಿ, ನೀರಲ್ಲಿ ತೇಲಾಡುತ್ತಿರುವ ಬಾಲಕರನ್ನು ಕೂಡಲೇ ಹೊರ ತೆಗೆದು. ಇಬ್ಬರ ಪ್ರಾಣ ರಕ್ಷಣೆ ಮಾಡಿದ್ದಾರೆ.

ಬಾಲಕರು ತಾಲೂಕ ಆಸ್ಪತ್ರೆ ಶಹಪುರ್‌ದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಸುನಿಲ್ ಹಾಗೂ ಆತನ ಸ್ನೇಹಿತರು ಕೂಡಲೇ ಬಾಲಕರನ್ನು ಹೊರತೆಗೆದು ಪ್ರಾಣ ರಕ್ಷಿಸಿರುವ ಸಾಹಸ ತಾಲೂಕಿನಲ್ಲಿ ಅತ್ಯಂತ ಮೆಚ್ಚುಗೆಗೆ ಪಾತ್ರವಾಗಿದೆ.

## ರಾಜ್ಯದ ಕೆಲ ಭಾಗಗಳನ್ನು ದ್ವೇಷದ ಪ್ರಯೋಗಾಲಯಗಳನ್ನಾಗಿ ಮಾಡುತ್ತಿರುವ ಬಿಜೆಪಿ-ಆರ್‌ಎಸ್‌ಎಸ್: ಪ್ರಿಯಾಂಕ್ ಖರ್ಗೆ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.2: ಬಿಜೆಪಿ ಮತ್ತು ಆರ್‌ಎಸ್‌ಎಸ್ ರಾಜ್ಯದ ಕೆಲವು ಭಾಗಗಳನ್ನು ದ್ವೇಷದ ಪ್ರಯೋಗಾಲಯಗಳನ್ನಾಗಿ ಮಾಡುತ್ತಿದೆ. ಕೋಮುದ್ವೇಷವನ್ನು ಹರಡುತ್ತಿವೆ ಎಂದು ಸಚಿವ ಪ್ರಿಯಾಂಕ್ ಖರ್ಗೆಯವರು ಶನಿವಾರ ವಾಗ್ದಾಳಿ ನಡೆಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಬಿಜೆಪಿ ಹಾಗೂ ಆರ್‌ಎಸ್‌ಎಸ್ ನಾಯಕರ ಷಡ್ಯಂತ್ರಕ್ಕೆ ಪ್ರತಿಯಾಗಿ ಕಲಬುರಗಿಯ ಪ್ರಜ್ಞಾವಂತ ನಾಗರೀಕರು ನನ್ನನ್ನು ಬೆಂಬಲಿಸುವ ಮೂಲಕ ತಕ್ಕ ಉತ್ತರ ನೀಡಿದ್ದಾರೆಂದೂ ಹೇಳಿದ್ದಾರೆ.

ರಾಜಕೀಯವಾಗಿ ಸೈದ್ಧಾಂತಿಕವಾಗಿ, ವೈಚಾರಿಕವಾಗಿ ನನ್ನನ್ನು ಎದುರಿಸಲು ಸಾಧ್ಯವಾಗದ ಬಿಜೆಪಿಯವರು ವೈಯಕ್ತಿಕ ದಾಳಿಗಳ ಮೂಲಕ ನನ್ನ ತೇಜೋವಧೆಗೆ ಪ್ರಯತ್ನಿಸಿದರು. ಇದನ್ನು ಕಂಡು ಸಹಿಸದೇ ಪ್ರಜ್ಞಾವಂತ ನಾಗರೀಕರಾದ ನೀವು ಸಿಡಿದೆದಿದ್ದೀರಿ ಎಂದು ಧನ್ಯವಾದ ಹೇಳಿದ್ದಾರೆ.

ವಚನ ಚಳವಳಿಯ ಮೂಲಕ ನಾಡಿಗೆ ವಿಚಾರ ಕ್ರಾಂತಿಯನ್ನು ಪರಿಚಯಿಸಿದ ಕಲ್ಯಾಣ ಕರ್ನಾಟಕವು ಅಂದಿನಿಂದ ಇಂದಿನವರೆಗೂ ವೈಚಾರಿಕ



ಪ್ರಜ್ಞೆಯಲ್ಲಿ ಸದಾ ಮುಂದಿದ್ದಾರೆ. ಇಂತಹ ಕಲ್ಯಾಣ ಶರಣರ ನಾಡು ಎಂದಿಗೂ ಆರ್‌ಎಸ್‌ಎಸ್ ಬಿಜೆಪಿಯವರ ಮಲಿನ ಚಿಂತನೆಗಳಿಗೆ ಅವಕಾಶ ಕೊಡುವುದಿಲ್ಲ. ಪ್ರಜಾಪ್ರಭುತ್ವ ಹಾಗೂ ಸಂವಿಧಾನದ ಶಕ್ತಿಯನ್ನು ನಂಬಿರುವ ಕಲಬುರಗಿಯ ಜನರು ಇಂದು ನನ್ನ ಪರವಾಗಿ ಬೃಹತ್ ಮಟ್ಟದ ವೈಚಾರಿಕ ಬೆಂಬಲವನ್ನು ದಾಖಲಿಸಿದ್ದು ನನ್ನ ಋಣಭಾರವನ್ನು ಇನ್ನಷ್ಟು ಹೆಚ್ಚಿಸಿದೆ.

ಕಲಬುರಗಿಯ ಪ್ರಬುದ್ಧ ಜನರೇ, ಸತ್ಯದ ಹಾದಿಯಲ್ಲಿ ನಡೆಯುವವರಿಗೆ, ಜನಹಿತಕ್ಕಾಗಿ ಬದುಕುವವರಿಗೆ ಎಂದಿಗೂ ಬೆಂಬಲ ಇದ್ದೇ ಇರುತ್ತದೆ ಎಂಬುದನ್ನು ನೀವು ಮತ್ತೊಮ್ಮೆ ಸಾಬೀತುಪಡಿಸಿದ್ದೀರಿ. ನನ್ನನ್ನು ಕೇವಲ ರಾಜಕಾರಣಿಯನ್ನಾಗಿ ನೋಡದೆ, ನಿಮ್ಮಲ್ಲಿ ಒಬ್ಬ ಎಂದು ಪರಿಗಣಿಸಿ ತೋರಿಸ ಮಲ್ಲಮ್ಮ ನುಡಿ ವಾರ್ತೆ ೆತ್ತಿರುವ ಪ್ರೀತಿ, ಕಾಳಜಿ ನನ್ನನ್ನು ಮೂಕವಿಸ್ಮಿತನನ್ನಾಗಿಸಿದೆ.

ರಾಜಕೀಯವಾಗಿ, ಸೈದ್ದಂತಿಕವಾಗಿ, ವೈಚಾರಿಕವಾಗಿ ನನ್ನನ್ನು ಎದುರಿಸಲು ಸಾಧ್ಯವಾಗದ ಬಿಜೆಪಿಯವರು ವೈಯಕ್ತಿಕ ದಾಳಿಗಳ ಮೂಲಕ ನನ್ನ ತೇಜೋವಧೆಗೆ ಪ್ರಯತ್ನಿಸುತ್ತಿರುವುದನ್ನು ಕಂಡು ಸಹಿಸದೇ ಪ್ರಜ್ಞಾವಂತ ನಾಗರಿಕರಾದ ನೀವು ಸಿಡಿದೆದ್ದಿದ್ದೀರಿ. ನನ್ನ ಮೇಲೆ ಅಪಾರ ವಿಶ್ವಾಸ ಇರಿಸಿರುವ ನೀವು, ನನ್ನಲ್ಲಿನ ಸ್ಥೈರ್ಯ ಕೊಂಚವೂ ಕುಗ್ಗದಂತೆ ಬಲ ತುಂಬಿದ್ದೀರಿ. ನಿಮ್ಮ ಈ ಅಭಿಮಾನ, ಪ್ರೀತಿಯನ್ನು ವರ್ಣಿಸಲು ನನ್ನಲ್ಲಿ ಪದಗಳಿಲ್ಲ.

ನನ್ನ ಮೇಲಿನ ಪ್ರತಿ ದಾಳಿಗೂ ಸಾವಿರಾರು ವಿರೋಧದ ಧ್ವನಿಗಳು ಅನುರಣಿಸುತ್ತವೆ, ಕೀಳು ತಂತ್ರಗಳಿಗೆ ಎದಿರೇಟು ನೀಡುವ ಜನಶಕ್ತಿ ನನ್ನೊಂದಿಗೆ ಇದೆ ಎಂಬುದನ್ನು ಮನುವಾದಿಗಳಿಗೆ ಮನವರಿಕೆ ಮಾಡಿದ್ದೀರಿ. ನಾವೆಲ್ಲರೂ ಬಾಬಾ ಸಾಹೇಬರ ಆದರ್ಶಗಳು, ಸಂವಿಧಾನದ ತತ್ವಗಳನ್ನು ಪಾಲಿಸುವವರು. ನಮ್ಮ

(2ನೇ ಪುಟ ನೋಡಿ)

## ಹಿಂದೂ ಕಾರ್ಯಕರ್ತರನ್ನು ಟಾರ್ಗೆಟ್ ಮಾಡಿದರೆ ಸುಮ್ಮನಿರಲ್ಲ : ವಿಜಯೇಂದ್ರ

ಮಲ್ಲಮ್ಮನುಡಿ ವಾರ್ತೆ ಕೊಪ್ಪಳ:ಜೂ.2: ಕರಾವಳಿ ಭಾಗದಲ್ಲಿ ನಡೆಯುತ್ತಿರುವ ಕೊಲೆ ಪ್ರಕರಣದಲ್ಲಿ ಹಿಂದೂ ಕಾರ್ಯಕರ್ತರನ್ನು ಟಾರ್ಗೆಟ್ ಮಾಡಿ, ಬಂಧಿಸಲಾಗುತ್ತಿದೆ. ಇದರಿಂದ ಮುಂದೆ ಆಗುವ ಎಲ್ಲಾ ಅನಾಹುತಗಳಿಗೆ ರಾಜ್ಯ ಸರ್ಕಾರವೇ ಹೊಣೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದರು.

ಕೊಪ್ಪಳದ ಕುಷ್ಟಗಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಪೊಲೀಸರ ಮೇಲೆ ಒತ್ತಡ ಹಾಕಿ, ಅಮಾಯಕ ಹಿಂದೂ ಕಾರ್ಯಕರ್ತರನ್ನು ಬಂಧಿಸುತ್ತಿದೆ. ಮಧ್ಯರಾತ್ರಿ ಬಿಜೆಪಿ ಕಾರ್ಯಕರ್ತರು ಹಾಗೂ ಸಂಘ ಪರಿವಾರದ ಮುಖಂಡರ ಮನೆಗೆ ಹೋಗಿ ಬಾಗಿಲು ತಟ್ಟುತ್ತಿದ್ದಾರೆ. ಕೆಲವರನ್ನು ಓಲೈಕೆ ಮಾಡಲು ರಾಜ್ಯ ಸರ್ಕಾರ ಹೀಗೆ ಮಾಡುತ್ತಿದೆ. ತಪ್ಪಿತಸ್ಥರನ್ನು ಬಂಧಿಸಲು ನಮ್ಮ ಅಭ್ಯಂತರ ಇಲ್ಲ. ಆದರೆ ಹಿಂದೂ ಪರ



ಸಂಘಟನೆಯ ಕಾರ್ಯಕರ್ತರನ್ನು ಟಾರ್ಗೆಟ್ ಮಾಡುವುದು ಸರಿಯಲ್ಲ. ಟಾರ್ಗೆಟ್ ಮಾಡಿದರೆ ಅದಕ್ಕೆ ರಾಜ್ಯ ಸರ್ಕಾರವೇ ನೇರ ಹೊಣೆ ಎಂದು ಕಿಡಿಕಾರಿದರು.

ಕರಾವಳಿಯಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಕೆಟ್ಟುಹೋಗಿದೆ. ಮೇಲಿಂದ ಮೇಲೆ ಕೊಲೆ ಪ್ರಕರಣಗಳು ನಡೆಯುತ್ತಿದ್ದು, ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ. ಸದ್ಯದ ರಾಜ್ಯ ಸರ್ಕಾರದ ನಡವಳಿಕೆಯಿಂದ ಮತ್ತಷ್ಟು ಸಮಸ್ಯೆ ಹೆಚ್ಚಾಗಲಿದೆ ಎಂದು ದೂರಿದರು.

'ಆಪರೇಷನ್‌ಸಿಂಧೂರ'ದಿಂದ ದೇಶಕ್ಕೆ ಆಗಿರುವ ನಷ್ಟದ ಬಗ್ಗೆ ಕೇಂದ್ರ ಸರ್ಕಾರ ಮಾಹಿತಿ ನೀಡಬೇಕು ಎಂಬ ಸಚಿವ ಪ್ರಿಯಾಂಕಾ ಖರ್ಗೆ ಹೇಳಿಕೆಗೆ ಪ್ರತಿಕ್ರಿಯಿಸಿ, ಪ್ರಿಯಾಂಕಾ ಖರ್ಗೆ ತಮ್ಮ ಖಾತೆಯ ಜವಾಬ್ದಾರಿ ನೋಡಿಕೊಳ್ಳಲಿ. 'ಆಪರೇಷನ್ ಸಿಂಧೂರ'ದ ಬಗ್ಗೆ ಇಡೀ ದೇಶಕ್ಕೆ ಹೆಮ್ಮೆ ಇದೆ. ಲೆಕ್ಕ ಕೇಳಲು ಕೇಂದ್ರದಲ್ಲಿ ಮಲ್ಲಿಕಾರ್ಜುನ ಖರ್ಗೆ ಇದ್ದಾರೆ. ತಿರಂಗಾ ಯಾತ್ರೆಯಲ್ಲಿ ಬಿಜೆಪಿ ಮತ್ತು ಪ್ರಧಾನಿ ಮೋದಿ ಫೋಟೋ ಬಳಕೆ ಮಾಡಿಕೊಂಡಿಲ್ಲ. ಇದು ನಮ್ಮ ಬದ್ಧತೆ ಎಂದು ತಿರುಗೇಟು ನೀಡಿದರು. ಕಮಲ್ ಹಾಸನ್‌ಗೆ ತಮಿಳಿನ ಬಗ್ಗೆ ಅಭಿಮಾನ ಇರಲಿ. ಆದರೆ, ತಪ್ಪು ಮಾಹಿತಿಯಿಂದ ಕನ್ನಡ ಭಾಷೆ ಬಗ್ಗೆ ಮಾತನಾಡುವುದು ಸರಿಯಲ್ಲ. ಇನ್ನೂ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಹೆಸರಿನಲ್ಲಿ ಒಂದು ಕೈಯಿಂದ ಕೊಡುವುದು, ಇನ್ನೊಂದು ಕೈಯಿಂದ ಕಿತ್ತುಕೊಳ್ಳುವ ಕೆಲಸ ಮಾಡುತ್ತಿದೆ. ಅನುಷ್ಠಾನ ಸಮಿತಿ ಹೆಸರಿನಲ್ಲಿ ಕಾಂಗ್ರೆಸ್ ಕಾರ್ಯಕರ್ತರನ್ನು ಸಾಕುವ ಕೆಲಸ ಮಾಡುತ್ತಿದ್ದಾರೆ. ಬೆಲೆ ಏರಿಕೆಯಿಂದ ಜನರು ಪರದಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು

## ಉನ್ನತ ಶಿಕ್ಷಣ ಸಮಗ್ರ ಮಾಹಿತಿಗಾಗಿ ಮುಖ್ಯಮಂತ್ರಿಗಳಿಂದ ಪತ್ರಿಕೆ ಬಿಡುಗಡೆ

ಮಲ್ಲಮ್ಮನುಡಿ ವಾರ್ತೆ ಬೆಂಗಳೂರು, ಜೂನ್ 02:ರಾಜ್ಯದ ಎಲ್ಲಾ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಶೈಕ್ಷಣಿಕ ಮಾಹಿತಿ ನೀಡುವ ದೃಷ್ಟಿಯಲ್ಲಿ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಹೊರತಂದಿರುವ ಕರ್ನಾಟಕ ಉನ್ನತ ಶಿಕ್ಷಣ ತ್ರೈಮಾಸಿಕ ಪತ್ರಿಕೆ ಕಾರ್ಯನಿರ್ವಹಿಸಲಿದೆ ಎಂದು ಉನ್ನತ ಶಿಕ್ಷಣ ಸಚಿವರಾದ ಡಾಕ್ಟರ್ ಎಂ ಸಿ ಸುಧಾಕರ್ ಹೇಳಿದ್ದಾರೆ.

ಕರ್ನಾಟಕ ಉನ್ನತ ಶಿಕ್ಷಣ ತ್ರೈಮಾಸಿಕ ಪತ್ರಿಕೆಯನ್ನು ಮುಖ್ಯಮಂತ್ರಿಗಳ ನಿವಾಸ ಕಾವೇರಿಯಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿಡುಗಡೆಗೊಳಿಸಿ ಶುಭ ಕೋರಿದರು.

ಈ ಸಂದರ್ಭದಲ್ಲಿ ಮಾತನಾಡಿದ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ



ಸುಧಾಕರ್ ಮುಂಬರುವ ದಿನಗಳಲ್ಲಿ ಈ ಪತ್ರಿಕೆ ಮೂಲಕ ಉನ್ನತ ಶಿಕ್ಷಣ ಇಲಾಖೆಯ ಆದೇಶಗಳು, ಸೂಚನೆಗಳು, ನಿಯಮಾವಳಿಗಳನ್ನು ಕಾಲಕಾಲಕ್ಕೆ ರಾಜ್ಯದ ಎಲ್ಲಾ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಮಾಹಿತಿ ನೀಡುವ ಉದ್ದೇಶ ಹೊಂದಲಾಗಿದೆ. ರಾಜ್ಯದ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ನಡೆಯುವ ಕಾರ್ಯ ಚಟುವಟಿಕೆಗಳು ಹಾಗೂ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ವಿಶ್ವವಿದ್ಯಾಲಯಗಳ ಶೈಕ್ಷಣಿಕ ಪ್ರಗತಿ, ತಂತ್ರಜ್ಞಾನ ಬಳಕೆ ಸೇರಿದಂತೆ ಶಿಕ್ಷಣ ವ್ಯವಸ್ಥೆಯಲ್ಲಿನ ಜಾಗತಿಕ ನಡೆಯನ್ನು ಈ ಪತ್ರಿಕೆಯಲ್ಲಿ ದಾಖಲಿಸಿ ಎಲ್ಲಾ ಶಿಕ್ಷಣ ಸಂಸ್ಥೆಗಳಿಗೆ ಮಾಹಿತಿ ನೀಡಲಾಗುವುದು. ಖ್ಯಾತ ಶಿಕ್ಷಣ ತಜ್ಞರು, ಸಂಶೋಧಕರು ಪತ್ರಿಕೆಗೆ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## 10 ಲಕ್ಷ ರೂ.ಗಳ ಪುರಸ್ಕಾರ : ಮುಖ್ಯಮಂತ್ರಿ ಸಿದ್ದರಾಮಯ್ಯ

ಮಾತನಾಡಿ, ನಮ್ಮ ಕನ್ನಡ ಭಾಷೆ, ಕನ್ನಡ ನಾಡು ನುಡಿ, ಸಂಸ್ಕೃತಿ ಅತ್ಯಂತ ಪ್ರಾಚೀನವುಳ್ಳದಾಗಿದೆ. ಮೈಸೂರು ರಾಜ್ಯಕ್ಕೆ ಕರ್ನಾಟಕ ರಾಜ್ಯ ಎಂದು ನಾಮಕರಣ ಮಾಡಿ 50 ವರ್ಷ ಪೂರೈಸಿದ ವರ್ಷದಲ್ಲಿ ಇಬ್ಬರು ಹೆಣ್ಣು ಮಕ್ಕಳಿಗೆ ವಿಶೇಷ ಪ್ರಶಸ್ತಿ ಬಂದಿರುವುದು ಭುವನೇಶ್ವರಿ ತಾಯಿಯನ್ನು ನೋಡಿದ ಅನುಭವವಾಗಿದೆ. 8 ಜ್ಞಾನ ಪೀಠ ಪ್ರಶಸ್ತಿ ಪಡೆದ ಕನ್ನಡ ಭಾಷೆಗೆ, ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ ಪಡೆಯುವ ಮೂಲಕ ನಮ್ಮ ನಾಡಿನ ಹೆಣ್ಣು ಮಕ್ಕಳು ಕನ್ನಡ ನಾಡಿಗೆ ಹಿರಿಮೆ ತಂದು ಕೊಟ್ಟಿದ್ದಾರೆ. ಶ್ರೀಮತಿ ದೀಪಾ ಭಾಸ್ತಿ ಅವರು ಆಂಗ್ಲ ಭಾಷೆಗೆ ವಿಶೇಷ ಅನುವಾದ ಮಾಡುವ ಮೂಲಕ ಕನ್ನಡ ಭಾಷೆಗೆ ಹೆಮ್ಮೆ ತರುವ ಕೆಲಸ ಮಾಡಿದ್ದಾರೆ. ಜಗತ್ತಿನಲ್ಲಿ ಕನ್ನಡದ ಹಣತೆ ಬೆಳಗಿಸಿದ್ದಾರೆ ಎಂದರು.

ವಿಧಾನಪರಿಷತ್ತಿನ ಸಭಾಪತಿಗಳಾದ ಬಸವರಾಜ ಶಿವಲಿಂಗಪ್ಪ ಹೊರಟ್ಟಿ ಅವರು ಮಾತನಾಡಿ, ನಮ್ಮ ನಾಡಿನ ಹಿರಿಯ ಹಾಗೂ ಕಿರಿಯ ಸಾಹಿತಿಗಳನ್ನು ಒಂದೇ ವೇದಿಕೆಯಲ್ಲಿ ನೋಡುವ ಸೌಭಾಗ್ಯವನ್ನು ಕ್ನನಡ ಮತ್ತು ಸಂಸ್ಕೃತಿ ಇಲಾಖೆಯು ಕಲ್ಪಿಸಿದೆ. ಇಡೀ ಜಗತ್ತಿಗೆ ಕರ್ನಾಟಕವನ್ನು ಗುರುತು ಮಾಡಿರುವ ಅಂತರರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರಾದ ಶ್ರೀಮತಿ ಬಾನು ಮಷ್ತಾಕ್ ಹಾಗೂ ಶ್ರೀಮತಿ ದೀಪಾ ಭಾಸ್ತಿ ಅವರನ್ನು ಕರ್ನಾಟಕ ವಿಧಾನ ಮಂಡಲವು ಹೃದಯಪೂರ್ವಕವಾಗಿ ಅಭಿನಂದಿಸುತ್ತದೆ. ಇದೇ ರೀತಿ ಇನ್ನೂ ಹೆಚ್ಚಿನ ಪ್ರಶಸ್ತಿ ಲಭಿಸುವಂತಾಗಲಿ ಎಂದು ಹೃದಯಪೂರ್ವಕ ಅಭಿನಂದಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಿವಾಜಿನಗರದ ಶಾಸಕರಾದ ರಿಜ್ವಾನ್ ಅರ್ಷದ್ ಅವರು, ಕನ್ನಡ ಭಾಷೆಗೆ ಸಾವಿರಾರು ವರ್ಷದ ಇತಿಹಾಸವಿದ್ದು. ಈ ಐತಿಹಾಸಿಕ ಭಾಷೆಗೆ ಇಂದು ಇತಿಹಾಸ ಸೃಷ್ಟಿಸಿರುವ ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ ವಿಜೇತರಿಗೆ ಅಭಿನಂದನೆ ಸಲ್ಲಿಸಿದರು.

ಅಂತರರಾಷ್ಟ್ರೀಯ ಪ್ರಶ್ತಸ್ತಿ ಪುರಸ್ಕೃತರಾದ ಶ್ರೀಮತಿ ಬಾನು ಮುಷ್ತಾಕ್ ಅವರು ಮಾತನಾಡಿ, ನಾನು ಇಂದು ನಿಮ್ಮ ಮುಂದೆ ನಿಂತಿರುವುದು ಅಪಾರ ಕೃತಜ್ಞತೆ ಮತ್ತು ವಿನಯದಿಂದ. ನನಗೆ ಇದು ಸುವರ್ಣ ಸಂಭ್ರಮದ ವರ್ಷ ಎಂದು ನೆನಪಿರಲಿಲ್ಲ. ಸಚಿವರಾದ ಶಿವರಾಜ ತಂಗಡಿಯವರು ಹೇಳಿದ ಮೇಲೆ ಇದು ಒಂದು ವಿಶೇಷ ಎನಿಸಿತು. ಜಾಗತಿಕ ಮನ್ನಣೆಗಿಂತ ಹೆಚ್ಚಿನ ಗೌರವ ಮತ್ತು ಪ್ರೀತಿಯನ್ನು ನನ್ನ ಸ್ವಂತ ಕರ್ನಾಟಕ ರಾಜ್ಯದಿಂದ ದೊರಕಿದೆ. ನನ್ನ ತವರು ನೆಲ ನನ್ನ ಆಲೋಚನೆ ಮತ್ತು ಸೃಜನ ಶೀಲತೆಗೆ ಪ್ರೇರಣೆ ನೀಡಿತು. ಬೂಕರ್ ಪ್ರಶಸ್ತಿ ಪಡೆಯುವುದು ನನ್ನ ಕನಸ್ಸಾಗಿತ್ತು. ನಾವು 8 ಜ್ಞಾನಪೀಠ ಪ್ರಶಸ್ತಿಗಳೊಂದಿಗೆ ಒಂದು ಬೂಕರ್ ಪ್ರಶಸಿಯನ್ನು ಪಡೆದಿದ್ದೇವೆ. ಇದು ನಮ್ಮ ಕನ್ನಡಕ್ಕೆ ದಕ್ಕಿರುವ ಸಂಭ್ರಮ. ಎರಡು ಜ್ಞಾನಪೀಠ ಪ್ರಶಸ್ತಿಗೆ ಸುಸ್ತಾಗಿರುವ ಭಾಷೆಯ ದೇಶಗಳನ್ನು ನೋಡಿದ್ದೇವೆ. ಆದರೆ ಕನ್ನಡ ಚಿರ ನೂತನ ಎಂದ ಅವರು, ಪ್ರಶಸ್ತಿ ಪುರಸ್ಕೃತರಿಗೆ ಕರ್ನಾಟಕ ನೀಡಿರುವ ಅದ್ಭುತ ಗೌರವಕ್ಕೆ ಹೃದಯಂತಾರಳದ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದರು.

ಶ್ರೀಮತಿ ದೀಪಾ ಭಾಸ್ತಿ ಅವರು ಮಾತನಾಡಿ ಬೂಕರ್ ಸಿಕ್ಕಿರುವುದರಿಂದ ಕನ್ನಡದ ಹಿರಿಮೆ ಹೆಚ್ಚಾಗಿದೆ. ಅನುವಾದ ಕೃತಿಗೆ ಪ್ರಶಸ್ತಿ ಸಿಕ್ಕಿದೆ ಎನ್ನುವುದಕ್ಕಿಂತಲೂ ಕನ್ನಡದ ಮೂಲಕ್ಕೆ ಕನ್ನಡದ ಸಂಪತ್ತಿಗೆ ಗೌರವ ಸಂದಿದೆ. ಬೂಕರ್ ಪ್ರಶಸ್ತಿಯನ್ನು ಪ್ರತಿಯೊಬ್ಬರು ತಮಗೆ ಸಿಕ್ಕಿರುವಂತೆ ಸಂಭ್ರಮಿಸುತ್ತಿರುವದನ್ನು ನೋಡಲು ಸಂತೋಷವಾಗುತ್ತಿದೆ ಎಂದರು

ಸಮಾರಂಭದಲ್ಲಿ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಬಿ.ಝಡ್.ಜಮೀರ್, ವಿಧಾನ ಸಭೆಯ ಮುಖ್ಯ ಸಚೇತಕರಾದ ಅಶೋಕ್ ಮಹದೇವಪ್ಪ ಪಟ್ಟಣ್, ವಿಧಾನಪರಿಷತ್ ಮುಖ್ಯ ಸಚೇತಕ ಸಲೀಂ ಅಹಮದ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ಡಾ.ಕೆ.ಗೋವಿಂದರಾಜ್, ನಸೀರ್ ಅಹಮದ್, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಪುರುಷೋತ್ತಮ ಬಿಳಿಮಲೆ, ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರಾದ ಉಮಾ ಮಹಾದೇವನ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿ ಡಾ.ವೆಂಕಟೇಶ್ ಎಂ.ವಿ, ಹಾಗೂ ಹಿರಿಯ ಮತ್ತು ಕಿರಿಯ ಸಾಹಿತಿಗಳು, ಎದೆಯ ಹಣತೆ ಪ್ರಕಾಶನ ಸಂಸ್ಥೆಯ ಪದಾಧಿಕಾರಿಗಳು ಮತ್ತು ಇತರ ಗಣ್ಯರು ಉಪಸ್ಥಿತರಿದ್ದರು.

## ಮುಖ್ಯಮಂತ್ರಿಗಳಿಂದ ಪತ್ರಿಕೆ ಬಿಡುಗಡೆ

ಬರೆಯಲಿದ್ದಾರೆ ಎಂದರು.ಎಡಿಬಿ ಬ್ಯಾಂಕ್ ಸಾಲ:

ನಮ್ಮ ತಾಂತ್ರಿಕ ಶಿಕ್ಷಣವನ್ನು ಬಲಗೊಳಿಸಲು ಏಷಾ?? ಡೆವಲಪ್ಮೆಂಟ್ ಬ್ಯಾಂಕ್ನಿಂದ 2600 ಕೋಟಿ ಸಾಲ ಪಡೆಯಲು ರಾಜ್ಯ ಸರ್ಕಾರ ಒಪ್ಪಿಗೆ ನೀಡಿದೆ. ಈ ಬಗ್ಗೆ ಕೇಂದ್ರ ಸರ್ಕಾರದ ಆರ್ಥಿಕ ವ್ಯವಹಾರಗಳ ನಿರ್ವಹಣೆಯ ಇಲಾಖೆ ಕೂಡ ಒಪ್ಪಿಗೆ ಸೂಚಿಸಿದ್ದು, ಈ ಸಂಬಂಧ ಎಡಿಬಿ ಬ್ಯಾಂಕ್ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಲಾಗಿದೆ ಎಂದು ಉನ್ನತ ಶಿಕ್ಷಣ ಸಚಿವರು ತಿಳಿಸಿದರು.

ಈಗಾಗಲೇ ಎಡಿಬಿ ಬ್ಯಾಂಕ್ ಅಧಿಕಾರಿಗಳು ನಮ್ಮ ತಾಂತ್ರಿಕ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿ ಪರಿಶೀಲಿಸಿದ್ದು ಸದ್ಯದಲ್ಲೇ ಸಾಲ ಬಿಡುಗಡೆಯಾಗಲಿದೆ ಈ ಹಣದಿಂದ ನಮ್ಮ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳನ್ನು ಉತ್ತಮವಾಗಿ ಸುಧಾರಣೆ ಮಾಡಿ ವಿದ್ಯಾರ್ಥಿಗಳಿಗೆ ಕೌಶಲ್ಯಧಾರಿತ ಶಿಕ್ಷಣಕ್ಕೆ ಆದ್ಯತೆ ನೀಡುವ ಉದ್ದೇಶ ಹೊಂದಲಾಗಿದೆ ಎಂದರು.

ನೂತನ ಶಿಕ್ಷಣ ನೀತಿ ವರದಿ:

ರಾಜ್ಯ ನೂತನ ಶಿಕ್ಷಣ ನೀತಿ ಆಯೋಗವು ತನ್ನ ಕಾರ್ಯವನ್ನು ಮುಗಿಸಿದ್ದು ಜೂನ್ ಎರಡನೇ ವಾರದಲ್ಲಿ ವರದಿ ಸಲ್ಲಿಸಲಿದೆ. ಈ ಸಂಬಂಧ ಮಾನ್ಯ ಮುಖ್ಯಮಂತ್ರಿಗಳ ಬೇಟಿ ದಿನಾಂಕವನ್ನು ಕೋರಲಾಗಿದೆ ಎಂದು ಸುಧಾಕರ್ ತಿಳಿಸಿದರು. 2025 ಮೇ 31ರವರೆಗೆ ಸುಖದೇವ್ ತೋರಟ್ ಅವರ ರಾಜ್ಯ ನೂತನ ಶಿಕ್ಷಣ ನೀತಿ ಆಯೋಗಕ್ಕೆ ಅವಕಾಶ ನೀಡಲಾಗಿತ್ತು ಎಂದರು.

ಉದ್ಯೋಗ ಖಾತ್ರಿ ಶಿಕ್ಷಣ:

ರಾಜ್ಯದಲ್ಲಿ ಉನ್ನತ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳಿಗೆ ಉದ್ಯೋಗ ಖಾತ್ರಿ ಶಿಕ್ಷಣವನ್ನು ಕಲ್ಪಿಸಬೇಕು. ಈ ನಿಟ್ಟಿನಲ್ಲಿ ಕಲಿಕೆಯ ಸಮಯದಲ್ಲೇ ಕೈಗಾರಿಕಾ ಪೂರಕ ಹಾಗೂ ಉದ್ಯೋಗ ದೊರಕುವಂತಹ ಕೌಶಲ್ಯಾಧಾರಿತ ಶಿಕ್ಷಣವನ್ನು ನೀಡುವ ಉದ್ದೇಶ ಹೊಂದಲಾಗಿದೆ ಈ ನಿಟ್ಟಿನಲ್ಲಿ ಸರ್ಕಾರದ ನಿಲುವು ಮತ್ತು ಉದ್ದೇಶಗಳ ಮಾಹಿತಿ ನೀಡಲು ಪತ್ರಿಕೆ ಸಹಕಾರಿಯಾಗಲಿದೆ ಎಂದರು.

ಈ ಸಂದರ್ಭದಲ್ಲಿ ಇಲಾಖೆ ಕಾರ್ಯದರ್ಶಿ ಕೆ.ಜಿ .ಜಗದೀಶ್, ಕೆಇಎ ಕಾರ್ಯಕಾರಿ ನಿರ್ವಾಹಕರಾದ ಹೆಚ್ ಪ್ರಸನ್ನ, ಉನ್ನತ ಶಿಕ್ಷಣ ಪರಿಷತ್ ಉಪಾಧ್ಯಕ್ಷರಾದ ಎಸ್. ಆರ್ ನಿರಂಜನ್, ಕಾರ್ಯಕಾರಿ ನಿರ್ವಾಹಕ ಕೆ.ಜಿ ಚಂದ್ರಶೇಖರ್ ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು.

## ನೋಡಿ ಬೇಸರ:ಸಲ್ಮಾನ ಖುರ್ಷಿದ್

ಮುನ್ನಡೆಸುತ್ತಿದ್ದಾರೆ ಎಂದು ಸಲ್ಮಾನ್ ಹೇಳಿದರು. ಸಲ್ಮಾನ್ ಖುರ್ಷಿದ್ ಇದನ್ನು ಬೆಂಬಲಿಸುತ್ತಿದ್ದಾರೆ ಮತ್ತು ಅದನ್ನು ಬೆಂಬಲಿಸುತ್ತಿಲ್ಲ ಎಂದು ಜನರು ಹೇಳುತ್ತಿದ್ದಾರೆ. ನಾನು ಭಾರತ ಸರ್ಕಾರವನ್ನು ವಿರೋಧಿಸಲು ಇಲ್ಲಿಗೆ ಬಂದಿದ್ದೇನೆಯೇ? ನಾನು ಹಾಗೆ ಮಾಡಲು ಬಯಸಿದರೆ, ನಾನು ಮನೆಯಲ್ಲೇ ಇರುತ್ತಿದ್ದೆ. ನಾನು ಭಾರತಕ್ಕಾಗಿ ಮಾತನಾಡಲು ಇಲ್ಲಿಗೆ ಬಂದಿದ್ದೇನೆ, ಭಾರತಕ್ಕಾಗಿ ಯಾರು ಮಾತನಾಡುತ್ತಾರೆ ಮತ್ತು ಅವರು ಭಾರತಕ್ಕಾಗಿ ಯಾವುದೇ ರೀತಿಯಲ್ಲಿ ಮಾತನಾಡುತ್ತಾರೆ, ಭಾರತಕ್ಕಾಗಿ ಏನು ಹೇಳಿದರೂ, ನಾವು ಬೆಂಬಲಿಸಲು ಇಲ್ಲಿದ್ದೇವೆ. ಇದು ಕೇವಲ 10–12 ದಿನಗಳ ಅವಧಿ, ನಂತರ ನೀವು ಮನೆಗೆ ಹಿಂತಿರುಗಿ ಮನೆಯಲ್ಲಿ ನೀವು ಮಾಡಬೇಕಾದದ್ದನ್ನು ಮಾಡಬೇಕು. ಆದರೆ ಇಲ್ಲಿ ಭಾರತ ಮೊದಲು, ಭಾರತ ಮತ್ತು ಭಾರತ ಮಾತ್ರ. ಸಲ್ಮಾನ್ ಖುರ್ಷಿದ್ ತಮ್ಮ ಮಾತನ್ನು ಯಾರಿಗೆ ಹೇಳುತ್ತಿದ್ದೇನೆ ಎಂಬುದನ್ನು ಬಹಿರಂಗಪಡಿಸದಿದ್ದರೂ, ಈ ನಿಯೋಗದಲ್ಲಿ ತಮ್ಮ ಪಕ್ಷದ ನಾಯಕರನ್ನು ಸೇರಿಸಿರುವುದು ಕಾಂಗ್ರೆಸ್ ಪಕ್ಷವೇ ಸ್ವಾಗತಿಸಿಲ್ಲ. ಕಾಂಗ್ರೆಸ್ ಸಂಸದ ಜೈರಾಮ್ ರಮೇಶ್ ಕಳೆದ ವಾರ ವಿವಾದಾತ್ಮಕ ಹೇಳಿಕೆ ನೀಡಿದ್ದರು, 'ನಮ್ಮ ಸಂಸದರು ಸುತ್ತಾಡುತ್ತಿದ್ದಾರೆ ಮತ್ತು ಭಯೋತ್ಪಾದಕರು ಕೂಡ ಸುತ್ತಾಡುತ್ತಿದ್ದಾರೆ ಎಂದು ಹೇಳಿದ್ದರು.

## ಮಾಡುತ್ತಿರುವ ಬಿಜೆಪಿ-ಆರ್‌ಎಸ್‌ಎಸ್: ಪ್ರಿಯಾಂಕ್ ಖರ್ಗೆ

ಹೋರಾಟಗಳು ಸತ್ಯದ ಪರವಾಗಿರುತ್ತದೆ. ಆಚಾರವಿಲ್ಲದ ನಿಮ್ಮ ನಾಲಿಗೆ ಆಡುವ ಹೊಲಸು ಮಾತುಗಳಿಂದ ನಮ್ಮನ್ನು ಹಣಿಯಲು ಸಾಧ್ಯವಿಲ್ಲ ಎಂಬುದನ್ನು ಮನುಸ್ಮೃತಿ ಆರಾಧಕರಿಗೆ ಮತ್ತೊಮ್ಮೆ ಅರ್ಥಮಾಡಿಸಿದ್ದೀರಿ.

ಸಮಾಜದ ಸ್ವಾಸ್ಥ್ಯ ಕೆಡಿಸುವ ಮನುವಾದದ ಮನಸ್ಥಿತಿಯವರ ಕುತಂತ್ರಗಳು ಸಫಲವಾಗುವುದಿಲ್ಲ. ಪ್ರಿಯಾಂಕ್ ಖರ್ಗೆ ಒಂಟಿಯಲ್ಲ, ನನ್ನೊಂದಿಗೆ ಬಾಬಾ ಸಾಹೇಬರನ್ನು ಅನುಸರಿಸುವ ಹಾಗೂ ಬಸವಣ್ಣನನ್ನು ಆರಾಧಿಸುವ ಸಾವಿರಾರು ಪಡೆಗಳಿವೆ ಎನ್ನುವ ಸಂಗತಿ ನನ್ನಲ್ಲಿ ಮತ್ತಷ್ಟು ಶಕ್ತಿ, ಆತ್ಮವಿಶ್ವಾಸ ತುಂಬಿದೆ. ನಿಮ್ಮೆಲ್ಲರ ಈ ಪ್ರೀತಿ, ಈ ಅಭಿಮಾನ, ಈ ಅಭೂತಪೂರ್ವ ಬೆಂಬಲವು ನನ್ನಲ್ಲಿ ಮತ್ತಷ್ಟು ಶಕ್ತಿ ತುಂಬಿದೆ, ಸಾಮಾಜಿಕ ಪಿಡುಗಿನಂತಾಗಿರುವ ಮನುವಾದಿಗಳನ್ನು ಎದುರಿಸುವ ಕೆಲಸವನ್ನು ನಿಮ್ಮೆಲ್ಲರ ಬೆಂಬಲದೊಂದಿಗೆ ನಾನು ಮುಂದುವರೆಸುತ್ತಲೇ ಇರುತ್ತೇನೆ, ಅಸಹಾಯಕರ, ಶೋಷಿತರ ಏಳಿಗೆಗಾಗಿ ನನ್ನ ಪ್ರಾಮಾಣಿಕ ಪ್ರಯತ್ನವನ್ನು ಮುಂದುವರೆಸುತ್ತಿರುತ್ತೇನೆಂದು ತಿಳಿಸಿದ್ದಾರೆ.

ಇದೇ ವೇಳೆ ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿರುವ ಅವರು, ಅಮೆರಿಕದ ಹಿತಾಸಕ್ತಿಗಳಿಗೆ ಅನುಗುಣವಾಗಿ ಭಾರತದ ವಿದೇಶಾಂಗ ನೀತಿಯಲ್ಲಿ ರಾಜಿ ಮಾಡಿಕೊಳ್ಳಲಾಗಿದೆಯೇ ಎಂದು ಪ್ರಶ್ನಿಸಿದ್ದಾರೆ.

ಪ್ರಧಾನಿ ಮೋದಿ ಒಮ್ಮೆ ತಮ್ಮ "ಸ್ನೇಹಿತ" ಎಂದು ಕರೆದಿದ್ದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಈಗ ಕಾಶ್ಮೀರ ವಿಷಯದ ಬಗ್ಗೆ ಏಕೆ ಪ್ರತಿಕ್ರಿಯಿಸುತ್ತಿದ್ದಾರೆ? ಕಾಶ್ಮೀರ ನಮ್ಮ ಆಂತರಿಕ ವಿಚಾರ ಎಂದು ಮೋದಿಯವರೇ ಒತ್ತಿ ಹೇಳಿದ್ದರು. ಇದೀಗ ಸರ್ಕಾರವೇಕೆ ಅಂತರರಾಷ್ಟ್ರೀಯಗೊಳಿಸುತ್ತಿದೆ?

ಪ್ರಧಾನಿ ಮೋದಿ ಇದರ ಬಗ್ಗೆ ಮೌನವಾಗಿದ್ದಾರೇಕೆ? ಸಾರ್ವಭೌಮ ರಾಷ್ಟ್ರವಾಗಿ ನಮ್ಮ ದೇಶದ ವಿದೇಶಾಂಗ ನೀತಿಯನ್ನು ಅಮೆರಿಕಕ್ಕೆ ಅಡವಿಡಲಾಗಿದೆಯೇ? ಎಂದು ಪ್ರಶ್ನಿಸಿದ್ದಾರೆ. ಇದೇ ವೇಳೆ ಆಡಳಿತ ಪಕ್ಷದ ಸದಸ್ಯರು ಆಗಾಗ್ಗೆ ಮಾಡುವ ವಿದೇಶ ಪ್ರವಾಸಗಳ ಕುರಿತಂತೆಯೂ ಪ್ರಶ್ನೆ ಮಾಡಿದ್ದಾರೆ.

ಹಲವು ದೇಶಗಳಿಗೆ ಹೋಗಿರುವವರೆಲ್ಲರೂ, ಆ ರಾಷ್ಟ್ರಗಳ ಮುಖ್ಯಸ್ಥರನ್ನು ಅಥವಾ ಸರ್ಕಾರದ ಮುಖ್ಯಸ್ಥರನ್ನು ಭೇಟಿಯಾಗುತ್ತಿದ್ದಾರೆಯೇ? ಅವರು ನಿಜವಾಗಿಯೂ ಯಾರನ್ನು ಭೇಟಿಯಾಗುತ್ತಿದ್ದಾರೆ? ಎಂದು ಪ್ರಶ್ನಿಸಿದ್ದಾರೆ.

ಬಿಜೆಪಿ ಹಾಗೂ ಆರ್'ಎ???ಸ್ ಕರಾವಳಿ ಕರ್ನಾಟಕ, ಮಲೆನಾಡು, ಹುಬ್ಬಳ್ಳಿ–ಧಾರವಾಡ ಮತ್ತು ಬೆಳಗಾವಿ ಸೇರಿದಂತೆ ಕರ್ನಾಟಕದ ಕೆಲವು ಭಾಗಗಳನ್ನು ದ್ವೇಷದ ಪ್ರಯೋಗಾಲಯಗಳನ್ನಾಗಿ ಪರಿವರ್ತಿಸುತ್ತಿವೆ.

"ಸಂಘ ಪರಿವಾರ ಮತ್ತು ಅದರ ಅಂಗಸಂಸ್ಥೆಗಳು ಎಂದಿಗೂ ಉದ್ಯೋಗಗಳನ್ನು ಸೃಷ್ಟಿಸಲು ಆದ್ಯತೆ ನೀಡಿಲ್ಲ, ಬದಲಿಗೆ ದ್ವೇಷವನ್ನು ಹರಡುವತ್ತ ಗಮನಹರಿಸಿವೆ. ವಿಪರ್ಯಾಸವೆಂದರೆ ಅವರು ತಮ್ಮ ಮಕ್ಕಳನ್ನು ಈ ದ್ವೇಷದ ಜಾಲದಲ್ಲಿ ಸಿಲುಕಿಸುತ್ತಿಲ್ಲ. ಬದಲಿಗೆ ಬಡವರ ಮತ್ತು ಹಿಂದುಳಿದವರ ಮಕ್ಕಳನ್ನು ರವಾನಿಸುತ್ತಿದ್ದಾರೆಂದು ಕಿಡಿಕಾರಿದ್ದಾರೆ.

## ಛತ್ರಪತಿಯ ಚರಿತ್ರೆ ಮುಂದಿನ ಪೀಳಿಗೆ ತಲುಪಲಿ: ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ

ಔರಾಧ:ಜೂ.2:ಭಾರತದ ವೀರ ಸುಪುತ್ರ, ಪರಾಕ್ರಮಿ, ಹಿಂದವಿ ಸ್ವರಾಜ್ಯದ ಸ್ಥಾಪಕ ಛತ್ರಪತಿ ಶಿವಾಜಿ ಮಹಾರಾಜರ ಚರಿತ್ರೆ ಮುಂದಿನ ಪೀಳಿಗೆಗೆ ತಲುಪಿಸುವ ಕೆಲಸವಾಗಬೇಕಿದೆ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.ಔರಾದ(ಬಿ) ತಾಲ್ಲೂಕಿನ ಜಂಬಗಿಯಲ್ಲಿ ಜೂನ್ 1ರಂದು ನಡೆದ ಛತ್ರಪತಿ ಶಿವಾಜಿ ಮಹಾರಾಜರ ಮೂರ್ತಿ ಅನಾವರಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವೀರಯೋಧರಾಗಿದ್ದ ಶಿವಾಜಿ ಮಹಾರಾಜರು ಅಪ್ಪಟ ದೇಶಭಕ್ತ, ಶಿಸ್ತಿನ ಸಿಪಾಯಿ, ಬಡವರು, ಹಿಂದುಳಿದವರ ಆಶ್ರಯದಾತ. ಶೌರ್ಯ, ಯುದ್ಧ, ಪರಾಕ್ರಮ, ಯುದ್ಧ ತಂತ್ರಗಳಿಗೆ ಹೆಸರುವಾಸಿಯಾಗಿದ್ದ ಅವರು ಎಲ್ಲಾ ರೀತಿಯ ಯುದ್ಧಕಲೆಗಳನ್ನು ಕರಗತ ಮಾಡಿಕೊಂಡಿದ್ದರು. ಭಾಷೆ, ಗಡಿ ಮೀರಿ ಸೈನಿಕರನ್ನು ಸಂಘಟಿಸಿದವರು. ಮೊಘಲರು ಮತ್ತು ಸುಲ್ತಾನರ ದಬ್ಬಾಳಿಕೆಯನ್ನು ದಿಟ್ಟತನದಿಂದ ಹಿಮ್ಮೆಟ್ಟಿಸಿ ಸ್ವತಂತ್ರ್ಯ ಸಾಮ್ರಾಜ್ಯವನ್ನು ಕಟ್ಟಿದರಲ್ಲದೇ ಸನಾತನ ಧರ್ಮವನ್ನು ಸಂರಕ್ಷಿಸಿದ ಧರ್ಮ ರಕ್ಷಕರು ಎಂದರು.

ಸ್ವಾಭಿಮಾನಿ ರಾಷ್ಟ್ರನಿರ್ಮಾಣಕ್ಕೆ ಹೋರಾಡಿದ ಛತ್ರಪತಿ ಶಿವಾಜಿ ಮಹಾರಾಜರು ಹಿಂದೂಸ್ಥಾನವನ್ನು ಒಗ್ಗೂಡಿಸಲು ಬಹುವಾಗಿ ಶ್ರಮಿಸಿದ್ದರು. ದೇಶದ ಅನೇಕ ಕೋಟೆಗಳನ್ನು ಗೆದ್ದು ಸಾಮ್ರಾಜ್ಯವನ್ನು ವಿಸ್ತರಿಸಿದ್ದರು. ಛತ್ರಪತಿ ಶಿವಾಜಿ ಮಹಾರಾಜರ ಹೆಸರು ಭಾರತದ ಚರಿತ್ರೆಯಲ್ಲಿ ಅಗ್ರಪಂಕ್ತಿಯಲ್ಲಿ ನಿಲ್ಲುವಂತಹದ್ದು, ಅವರ ಶೌರ್ಯ, ಸಾಹಸ, ದೇಶಭಕ್ತಿ ಪ್ರತಿಯೊಬ್ಬ ಭಾರತೀಯನಿಗೆ ಪ್ರೇರಣೆಯಾಗಬೇಕು ಎಂದು ತಿಳಿಸಿದರು. ಛತ್ರಪತಿ ಶಿವಾಜಿ ಮಹಾರಾಜರು ಕೇವಲ ಒಂದು ಸಮಾಜಕ್ಕೆ ಸೀಮಿತವಾಗಿಲ್ಲ. ಅವರು ಇಡೀ ಭಾರತೀಯರಿಗೆ ಸೇರಿದವರು. ದೇಶ ಕಂಡ ಅಪರೂಪದ ನಾಯಕರು, ಇಂತಹ ಮಹಾ ಪುರುಷರ ಚರಿತ್ರೆಯನ್ನು, ಸಾಧನೆ ಮತ್ತು ಸಂದೇಶಗಳನ್ನು ಮುಂದಿನ ಯುವ ಪೀಳಿಗೆಗೆ ತಲುಪಿಸುವ ಕೆಲಸವಾಗಬೇಕು. ಇಂತಹ ಕಾರ್ಯಕ್ರಮಗಳು ಎಲ್ಲ ಕಡೆಗಳಲ್ಲಿ ನಡೆಯಬೇಕು. ಧಾರ್ಮಿಕ ಸಾಧಕರ ಸಮಾಗಮವಾಗಬೇಕು. ಎಲ್ಲ ಕಡೆಗಳಲ್ಲಿ ಶಿವಾಜಿಯವರ ಮೂರ್ತಿಗಳಾಗಬೇಕು ಎಂದು ಹೇಳಿದರು. ಜಂಬಗಿ ಗ್ರಾಮದ ಸಮಗ್ರ ಅಭಿವೃದ್ಧಿಗೆ ನಿರಂತರ ಶ್ರಮಿಸುತ್ತಿದ್ದೇನೆ. ಎಲ್ಲ ಅವಶ್ಯಕತೆಗಳನ್ನು ಆದ್ಯತೆಗೆ ಅನುಸಾರವಾಗಿ ಪೂರೈಸುವ ಕೆಲಸ ಮಾಡುತ್ತಿದ್ದೇನೆ. ಅಭಿವೃದ್ಧಿಗೆ ಗ್ರಾಮಸ್ಥರ ಸಹಭಾಗಿತ್ವವು ಪ್ರಮುಖ ಪಾತ್ರವಹಿಸುತ್ತದೆ. ಗ್ರಾಮದ ಅಭಿವೃದ್ಧಿಗಾಗಿ ಒಂದು ಸಮಿತಿಯನ್ನು ರಚಿಸಿ ಹಣಕಾಸು ವ್ಯವಹಾರಕ್ಕೆ ಒಂದು ಬ್ಯಾಂಕ್ ಖಾತೆಯನ್ನು ತೆರೆಯಬೇಕು. ಗ್ರಾಮಸ್ಥರು ಹಣ ಜೋಡಿಸಿ ಬಡವರು, ಅತ್ಯಂತ ಹಿಂದುಳಿದವರ ನೆರವು ಮಾಡುವ ಕೆಲಸ ಮಾಡಬೇಕು.

## ಪ್ರಜ್ಞಾ ಭುವನ ಪ್ರೌಢಶಾಲೆಯಲ್ಲಿ ಗುರುವಂದನ ಮತ್ತು ಸ್ನೇಹ ಸಮ್ಮೇಳನ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.2:ವಿದ್ಯಾ ಕಲಿಸಿದ ಗುರುಗಳನ್ನು ಜೀವನ ಪರಿಯಂತಹ ಮರೆಯಬಾರದು, ಇಂದಿನ ಆಧುನಿಕ ದಿನಗಳಲ್ಲಿ ನಾವು ಹಲವಾರು ಸಂಭ್ರಮಾಚಾರಣೆ ನೋಡುತ್ತೇವೆ, ಹುಟ್ಟಿದ ಹಬ್ಬ, ವಾರ್ಷಿಕೋತ್ಸವದ ಹೀಗೆ ಹಲುವು ಕಾರ್ಯಕ್ರಮದಲ್ಲಿ ನಾವು ಕಂಡಿರುತ್ತೇವೆ, ಆದುಕ್ಕೆಲ್ಲ ಮೀರಿದ ಸಂಭ್ರಮ ಎಂದರು ನಾವು ಕಲಿತ ಶಿಕ್ಷಕರನ್ನು ಗೌರವಿಸುವುದು ಎಂದು ಪ್ರಾಚಾರ್ಯರು ಶಿವಾಜಿ ಆರ್. ಎಚ್ ಅವರು ನುಡಿದರು.

ಪಟ್ಟಣ ಬಸವ ಫಂಕ್ಷನ ಹಾಲನಲ್ಲಿ ಭಾರತಿ ಶಿಕ್ಷಣ ಸಂಸ್ಥೆ ಡಿಗ್ಗಿಯ ಅಡಿಯಲ್ಲಿ ನಡಿಯುತ್ತಿರುವ ಪ್ರಜ್ಞಾಭುವನ ಪ್ರೌಢಶಾಲೆಯ 2002ನೇ ಸಾಲಿನಿ ವಿದ್ಯಾರ್ಥಿ ಒಗ್ಗೂಟದಿಂದ ಆಯೋಜನೆ ಮಾಡಿದ ಗುರುವಂದನ ಮತ್ತು ಸ್ನೇಹ ಸಮ್ಮೇಳನ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕರಾಗಿ ಶಾಂತಿ ವರ್ಧಕ ಪಿಯು ಕಾಲೇಜಿನ ಪ್ರಾಚಾರ್ಯರ ಶಿವಾಜಿ ಆರ್. ಎಚ್ ಮಾತನಾಡಿದರು. ವಿವಿಧ ಕ್ಷೇತ್ರದಲ್ಲಿ ತಮ್ಮ ತಮ್ಮ ಬದುಕನ್ನು ಕಟ್ಟಿಕೊಂಡ ವಿದ್ಯಾರ್ಥಿಗಳು 23 ವರ್ಷದ ನಂತರ ಒಂದೇ ವೇದಿಕೆಯಲ್ಲಿ ಸೇರುವುದು ಸಾಮಾನ್ಯ ವಿಷಯವಲ್ಲ, ಇಂಥ ಒಂದು ಅದ್ಭುತ ಪ್ರಯತ್ನ ಮಾಡಿದ ಎಲ್ಲಾ ವಿದ್ಯಾರ್ಥಿ ಬಳಗಕ್ಕೆ ಅಭಿನಂದನೆ ಸಲ್ಲಿಸಿದರು.

ಇಂತಹ ಕಾರ್ಯಕ್ರಮಗಳಿಂದ ಗುರು ಭಕ್ತಿ ಮತ್ತು ಸ್ನೇಹ ಸಂಬಂಧ ವೃದ್ಧಿಯಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟನೆ ಮಾಡಿ ಪ್ರಸ್ತಾವಿಕವಾಗಿ ಶಾಲೆಯ ನಿವೃತ್ತ ಮುಖ್ಯ ಗುರುಗಳು ದೇವೇಂದ್ರ ಪಾಟೀಲ ಮಾತನಾಡಿದರು, 23 ವರ್ಷದ ತಮ್ಮ ಸಹೋದ್ಯೋಗಿಗಳನ್ನು ನೆನೆದು ಭಾವುಕರಾದರು. ಅಂದಿನ ವಿದ್ಯಾರ್ಥಿಗಳು ಗುರುಗಳ ಬಗ್ಗೆ ಅಪಾರ ಗೌರವ ಪ್ರೀತಿಯನ್ನು ಹೊಂದಿದರು, ನಮ್ಮ ಶಾಲೆಯ ಆಡಳಿತ ಪರಸ್ಪರ ಹೊಂದಾಣಿಕೆಯಿಂದ ಬಹಳ ಅಚ್ಚುಕಟ್ಟಾಗಿ ನಡೆದು ಬಂದಿತು ಎಂದು ತಮ್ಮ ವೃತ್ತಿ ಜೀವನ ಬಗ್ಗೆ ಮತ್ತು ಕಾರ್ಯಕ್ರಮದ ಬಗ್ಗೆ ಹೆಮ್ಮೆ ವ್ಯಕ್ತಪಡಿಸಿದರು.

ಹಳೆ ವಿದ್ಯಾರ್ಥಿಗಳಾದ ಮಾಣಿಕ ಬಿರಾದಾರ, ಅಂಕೋಶ ಚಾಂಡೇಶ್ವರೆ, ಪ್ರದೀಪ ಬಿರಾದಾರ, ಸಂದೀಪ ಪಾಟೀಲ, ಬಾಬುರಾವ ಜಾಧವ,

ಹಳೆ ವಿದ್ಯಾರ್ಥಿನಿಯಾರಾದ ಭಾಗ್ಯಶ್ರೀ, ಸುವರ್ಣ, ಜಗದೇವಿ ತಮ್ಮ 23 ವರ್ಷದ ಶಿಕ್ಷಣ ಬಗ್ಗೆ ಹೇಳಿದರು, ಆಧುನಿಕ ದಿನಗಲ್ಲಿ ಮಕ್ಕಳು ಹೆಚ್ಚು ಮೊಬೈಲ್ ಬಳಕ್ಕೆ ಇಂದ ಶಿಕ್ಷಣದ ರುಚಿಯನ್ನು ಕಳ್ಕೊಂಡಿದ್ದಾರೆ ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಎಲ್ಲಾ ಗುರುಗಳನ್ನು ಸನ್ಮಾನಿಸಿ ಗೌರವಸಿ ನೆನಪಿನ ಕಾಣಿಕೆ ನೀಡಲಾಯಿತು. ಕಾರ್ಯಕ್ರಮ ಅಧ್ಯಕ್ಷತೆ ಸಂಸ್ಥೆಯ ಅಧ್ಯಕ್ಷರಾದ ನಿಲಕಂಠ ಕಾಂಬಳೆ ವಹಿಸಿ ಅಧ್ಯಕ್ಷ ಭಾಷಣ ಮಾಡಿ, ಎಲ್ಲಾ ವಿದ್ಯಾರ್ಥಿಗಳಿಗೆ ಶುಭ ಹಾರೈಕೆ ನೀಡಿದರು.

ಈ ಸಂದರ್ಭದಲ್ಲಿ ಮುಖಂಡರಾದ

ಶಿವಾನಂದ ವಡ್ಡೆ, ರಂಗಾರಾವ ಜಾಧವ, ಆರ್.ವಿ.ಸೂರ್ಯವಂಷಿ, ತಾನಾಜಿ ಸಂಘವೆ, ಎಸ್. ಕೆ ಬಾಲೂರೆ, ಎಸ.ಎನ್ ಭಾಸ್ಕರ, ಎಸ್. ಎ ಪೀಪರ್, ವಿ.ಪಿ. ಪಾಟೀಲ ಪ್ರಚಲಿತ ಮುಖ್ಯ ಶಿಕ್ಷಕ ಸಂಜಯ ಚಾಂಗುಣೆ ಸೇರಿದಂತೆ ಶಾಲೆಯ ಸಿಬ್ಬಂದಿ ವರ್ಗ ಮತ್ತು 2002ನೇ ಸಾಲಿನ ವಿದ್ಯಾರ್ಥಿ ಬಳಗ ಉಪಸ್ಥಿತರಿದ್ದರು.

ಬಂಟಿ ರಾಂಪುರೆ ಸ್ವಾಗತಿಸಿದರು. ಪರಮೇಶ ರಾಂಪುರೆ ಕಾರ್ಯಕ್ರಮ ನಿರೂಪಣೆ ಮಾಡಿದರು.

## ಸರಕು ಶೆಡ್ ನಿರ್ಮಾಣದಿಂದ ಸರಕು ಲೋಡಿಂಗ್‌ಗೆ ಮತ್ತಷ್ಟು ಉತ್ತೇಜನ :ಸಚಿವ ವಿ.ಸೋಮಣ್ಣ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಜೂ.2: ಖಾನಾಪುರ ಜಂಕ್ಷನ್ ರೈಲ್ವೆ ನಿಲ್ದಾಣದಲ್ಲಿ 15 ಕೋಟಿ ರೂ. ವೆಚ್ಚದಲ್ಲಿ ಸರಕು ಶೆಡ್ ನಿರ್ಮಾಣವಾಗುತ್ತಿದ್ದು, ಈ ನಿಲ್ದಾಣವು ಹೊಸ ಸರಕು ಶೆಡ್‌ಗೆ ಸೂಕ್ತವಾಗಿದ್ದು, ಇದು ಈ ಪ್ರದೇಶದಲ್ಲಿ ಸರಕು ಲೋಡಿಂಗ್‌ಗೆ ಮತ್ತಷ್ಟು ಉತ್ತೇಜನ ನೀಡಲಿದೆ. ಮುಂದಿನ 50 ವರ್ಷಗಳ ಅವಶ್ಯಕತೆಗಳನ್ನು ಗಮನದಲ್ಲಿಟ್ಟುಕೊಂಡು ಹೊಸ ಸರಕು ಶೆಡ್‌ನ್ನು ನಿರ್ಮಿಸಲಾಗುತ್ತಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವರಾದ ವಿ. ಸೋಮಣ್ಣ ಹೇಳಿದರು.

ಅವರು ಶನಿವಾರ ಖಾನಾಪುರ ಜಂಕ್ಷನ್ ರೈಲ್ವೆ ನಿಲ್ದಾಣದಲ್ಲಿ ಸರಕು ಶೆಡ್ ನಿರ್ಮಾಣ ಮತ್ತು ಭಾಲ್ಕಿ ಮತ್ತು ಕಲಗುಪುರ ರೈಲ್ವೆ ನಿಲ್ದಾಣಗಳ ನಡುವಿನ ಲೆವೆಲ್ ಕ್ರಾಸಿಂಗ್ ಸಂಖ್ಯೆ.71ರ ಬದಲಿಗೆ ರಸ್ತೆ ಕೆಳಸೇತುವೆ (ಖಗಃ) ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ರಸ್ತೆ ಸಾರಿಗೆಗೆ ಹೋಲಿಸಿದರೆ ರೈಲ್ವೆ ಮೂಲಕ ಸಾರಿಗೆ ವೆಚ್ಚ ಕಡಿಮೆಯಾಗಿದ್ದು, ಸಣ್ಣ ಕೈಗಾರಿಕೆಗಳಿಗೆ ತಮ್ಮ ಉತ್ಪನ್ನಗಳನ್ನು ವಿವಿಧ ಸ್ಥಳಗಳಿಗೆ ಸಾಗಿಸಲು ಸಹಾಯಕವಾಗಿದೆ ಎಂದರು. ಗೌರವಾನ್ವಿತ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರ ಮಾರ್ಗದರ್ಶನ ಮತ್ತು ದೂರದೃಷ್ಟಿಯ ನಾಯಕತ್ವದಲ್ಲಿ ಕರ್ನಾಟಕ ರಾಜ್ಯದಲ್ಲಿ ರೈಲ್ವೆ ಅಭಿವೃದ್ಧಿ ಕಾರ್ಯಗಳು ವೇಗವಾಗಿ ಪ್ರಗತಿಯಲ್ಲಿವೆ ಎಂದರು. ಇದರ ಜೊತೆ–ಗೆ, ಭಾಲ್ಕಿಯಲ್ಲಿ ಲೆವೆಲ್ ಕ್ರಾಸಿಂಗ್ ಸಂಖ್ಯೆ 71 ರ ಬದಲಿಗೆ 10.85 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಕೆಳಸೇತುವೆ ನಿರ್ಮಾಣಕ್ಕೆ ಶಂಕುಸ್ಥಾಪನೆ ಮಾಡಲಾಗಿದೆ. ಈ ಕೆಳಸೇತುವೆ ಕಾಮಗಾರಿ ಪೂರ್ಣಗೊಂಡ ನಂತರ, ವಾಹನ ಸಂಚಾರ–ಕ್ಕೆ ಸುಗಮ ಮತ್ತು ಸುರಕ್ಷತೆ ಹೆಚ್ಚಿಸಲಿದೆ ಎಂದರು.

ಬೀದರ್ ರೈಲ್ವೆ ನಿಲ್ದಾಣದ ಪುನರಾಭಿವೃದ್ಧಿಯನ್ನು 24.35 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ಕಾಮಗಾರಿಗಳು ಪೂರ್ಣಗೊಳ್ಳುವ ಹಂತದಲ್ಲಿವೆ ಎಂದು ತಿಳಿಸಿದರು. ಯಾದಗಿರ್ ನಿಲ್ದಾಣವನ್ನು 26.12 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದ್ದರೆ, ರಾಯಚೂರು ನಿಲ್ದಾಣದ ಪುನರಾಭಿವೃದ್ಧಿಯನ್ನು 21.71 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗಿದೆ ಎಂದರು. ಇವುಗಳ ಜೊತೆಗೆ ಕರ್ನಾಟಕ ರಾಜ್ಯದಲ್ಲಿ ಅಮೃತ ಭಾರತ್ ಸ್ಟೇಷನ್ ಯೋಜನೆಯಡಿ ಒಟ್ಟು 58 ರೈಲ್ವೆ ನಿಲ್ದಾಣಗಳನ್ನು ಪುನರಾಭಿವೃದ್ಧಿಪಡಿಸಲಾಗುತ್ತಿದೆ. ದಕ್ಷಿಣ ಮಧ್ಯ ರೈಲ್ವೆ ವ್ಯಾಪ್ತಿಯಲ್ಲಿ 1465 ರೈಲ್ವೆ ಕಿಲೋಮೀಟರ್‌ಗಳಲ್ಲಿ 'ಕವಚ' ರೈಲು ಸಂರಕ್ಷಣಾ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದ್ದು, ಮುಂದಿನ ಹಂತದಲ್ಲಿ ಇದರ ವಿಸ್ತರಣೆಯನ್ನು ಕೈಗೊಳ್ಳಲಾಗುತ್ತಿದೆ ಎಂದರು. 2025–26ನೇ ಆರ್ಥಿಕ ವರ್ಷಕ್ಕೆ ಕರ್ನಾಟಕ ರಾಜ್ಯಕ್ಕೆ 7,654 ಕೋಟಿ ರೂ. ರೈಲ್ವೆ ಬಜೆಟ್ ಮೀಸಲಿಡಲಾಗಿದೆ ಎಂದು ರೈಲ್ವೆ ರಾಜ್ಯ ಸಚಿವರು ತಿಳಿಸಿದರು.

ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರು ಮಾತನಾಡಿ, ಖಾನಾಪುರ ಜಂಕ್ಷನ್ ರೈಲ್ವೆ ನಿಲ್ದಾಣದಲ್ಲಿ ಸರಕು ಶೆಡ್ ಮತ್ತು ಭಾಲ್ಕಿಯಲ್ಲಿ ರಸ್ತೆ ಕೆಳಸೇತುವೆ ನಿರ್ಮಾಣಕ್ಕಾಗಿ ರೈಲ್ವೆ ಸಚಿವಾಲಯ ಈ ಉಪಕ್ರಮ ಕೈಗೊಂಡಿರುವುದಕ್ಕೆ ಶ್ಲಾಘನೆ ವ್ಯಕ್ತಪಡಿಸಿದರು. ಬೀದರ್‌ನಿಂದ ತಿರುಪತಿ, ಅಜ್ಮೀರ್, ಮುಂಬೈ ಮತ್ತು ಬೆಂಗಳೂರಿಗೆ ನೇರ ರೈಲು ಸಂಪರ್ಕಕ್ಕಾಗಿ ಅವರು ವಿನಂತಿಸಿದರು.


ಬೀದರ ಸಂಸದರಾದ ಸಾಗರ್ ಈಶ್ವರ್ ಖಂಡ್ರೆ ಅವರು ಮಾತನಾಡಿ, ಹೊಸ ಸರಕು ಶೆಡ್ ಸರಕು ಗ್ರಾಹಕರಿಗೆ ಸೂಕ್ತವಾಗಿದ್ದು, ಇದು ಈ ಪ್ರದೇಶದಲ್ಲಿ ಸರಕು ಲೋಡಿಂಗ್‌ಗೆ ಮತ್ತಷ್ಟು ಉತ್ತೇಜನ ನೀಡಲಿದೆ. ಈ ಎರಡೂ ಯೋಜನೆಗಳು ಈ ಪ್ರದೇಶದ ರೈಲ್ವೆ ಮೂಲಸೌಕರ್ಯದ ಬೆಳವಣಿಗೆಗೆ ಕೊಡುಗೆ ನೀಡಲಿವೆ ಎಂದರು. ಅಮೃತ ಭಾರತ್ ಸ್ಟೇಷನ್ ಯೋಜನೆಯಡಿ ರಾಜ್ಯದಲ್ಲಿ ರೈಲ್ವೆ ನಿಲ್ದಾಣಗಳ ಪುನರಾಭಿವೃದ್ಧಿ ಸೇರಿದಂತೆ ಹಲವಾರು ರೈಲ್ವೆ ಅಭಿವೃದ್ಧಿ ಉಪಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದ ಅವರು, ಭಾಲ್ಕಿ ಮತ್ತು ಹುಮನಾಬಾದ್ ನಿಲ್ದಾಣಗಳ ಪುನರಾಭಿವೃದ್ಧಿಗೆ ಸಹ ಒಪ್ಪಿಗೆ ನೀಡುವಂತೆ ಗೌರವಾನ್ವಿತ ರಾಜ್ಯ ಸಚಿವರಿಗೆ ಮನವಿ ಮಾಡಿದರು.

ವಿಧಾನ ಪರಿಷತ್ ಸದಸ್ಯರಾದ ಎಂ.ಜಿ. ಮೂಳೆ ಅವರು ಸಹ ಸಭೆಯನ್ನುದ್ದೇಶಿಸಿ, ಕೇಂದ್ರ ಸರ್ಕಾರ ಮತ್ತು ಗೌರವಾನ್ವಿತ ರಾಜ್ಯ ಸಚಿವರಿಗೆ ಧನ್ಯವಾದ ಅರ್ಪಿಸಿದರು.

ದಕ್ಷಿಣ ಮಧ್ಯ ರೈಲ್ವೆಯ ಮಹಾಪ್ರಬಂಧಕರಾದ ಅರವಿಂದ್ ಕುಮಾರ್ ಜೈನ್ ಅವರು ತಮ್ಮ ಸ್ವಾಗತ ಭಾಷಣದಲ್ಲಿ, ಗೌರವಾನ್ವಿತ ರೈಲ್ವೆ ರಾಜ್ಯ ಸಚಿವರು ಖಾನಾಪುರದಲ್ಲಿ ಸರಕು ಶೆಡ್ ಮತ್ತು ಎಲ್‌ಸಿ ಗೇಟ್ ಸಂಖ್ಯೆ 71 ರ ಬದಲಿಗೆ ರಸ್ತೆ ಕೆಳಸೇತುವೆ ನಿರ್ಮಾಣಕ್ಕೆ ಶಂಕುಸ್ಥಾಪನೆ ಮಾಡುವುದು ಸಂತೋಷದ ಸಂದರ್ಭವಾಗಿದೆ ಎಂದರು. ಇದು ಈ ಪ್ರದೇಶದಲ್ಲಿ ರೈಲ್ವೆ ಮೂಲಸೌಕರ್ಯವನ್ನು ವಿಸ್ತರಿಸುವಲ್ಲಿ ಮತ್ತು ಸುರಕ್ಷತೆಯನ್ನು ಹೆಚ್ಚಿಸುವಲ್ಲಿ ಹೊಸ ಚೈತನ್ಯವನ್ನು ತರುತ್ತದೆ ಎಂದರು.

ಈ ಸಂದರ್ಭದಲ್ಲಿ ಬೀದರ ದಕ್ಷಿಣ ಶಾಸಕ ಡಾ. ಶೈಲೇಂದ್ರ ಕೆ. ಬೆಲ್ದಾಳೆ, ಹುಮನಾಬಾದ ಶಾಸಕ ಡಾ. ಸಿದ್ಧಲಿಂಗಪ್ಪ ಎನ್. ಪಾಟೀಲ್, ಔರಾದ (ಬಿ) ಶಾಸಕ ಪ್ರಭು ಬಿ. ಚೌಹಾಣ್, ಬಸವಕಲ್ಯಾಣ ಶರಣು ಸಲಗರ್, ವಿಧಾನ ಪರಿಷತ್ ಶಾಸಕರಾದ ಡಾ. ಎಂ.ಜಿ. ಮೂಳೆ, ದಕ್ಷಿಣ ಮಧ್ಯ ರೈಲ್ವೆಯ ಹೆಚ್ಚುವರಿ ಮಹಾಪ್ರಬಂಧಕರಾದ ನೀರಜ್ ಅಗರವಾಲ್, ಸಿಕಂದರಾಬಾದ್ ವಿಭಾಗದ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಭಾರತೇಶ್ ಕುಮಾರ್ ಜೈನ್ ಮತ್ತು ಇತರ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸುಧಾಮ ಕಾಂಬಳೆ ಅವರ ಸೇವೆ ಅನನ್ಯ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಸಮಾಜಮುಖಿನಿಸ್ವಾರ್ಥ ಸೇವೆ ಸಲ್ಲಿಸಿದವರಿಗೆ ಸಮಾಜ ಯಾವತ್ತೂ ಋಣಿಯಾಗಿರುತ್ತದೆ ಎಂಬುದಕ್ಕೆ ನಿವೃತ್ತಿಯಾದ ಸುಧಾಮ ಕಾಂಬಳೆ ಅವರೇ ಉದಾಹರಣೆ ಎಂದು ಕಸಾಪ ತಾಲೂಕ ಉಪಾಧ್ಯಕ್ಷ ಮಹಮ್ಮದ್ ಅಸ್ಲಾಂಮಿಯಾ ಹೇಳಿದರು. ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಸುಧಾಮ ಕಾಂಬಳೆ ಅವರ ವಯೋನಿವೃತ್ತಿ ಸಮಾರಂಭದಲ್ಲಿ ಮಾತನಾಡಿ ಅವರು, ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸುದೀರ್ಘ 23 ವರ್ಷಗಳ ಕಾಲ ಸೇವೆ ಸಲ್ಲಿಸಿ ಆಸ್ಪತ್ರೆಗೆ ಬರುವ ಬಡ ಜನರಿಗೆ ಒಳ್ಳೆಯ ರೀತಿಯಿಂದ ಸ್ಪಂದಿಸಿ ರೋಗಿಗಳಿಗೆ ಧೈರ್ಯ ತುಂಬುವ ಕೆಲಸ ಸುಧಾಮ ಅವರು ಮಾಡುತ್ತಿದ್ದರು ಎಂದು ಹೇಳಿದರು. ಪತ್ರಕರ್ತ ರಾಜಕುಮಾರ ಆರ್. ಹಡಪದ ಮಾತನಾಡಿ, ಸುಧಾಮ ಕಾಂಬಳೆ ಅವರು 60ಕ್ಕೆ ವಯೋನಿವೃತ್ತಿ ಹೊಂದುತ್ತಿದರು ಸಹ ಅವರ ಮನಸ್ಸು 6 ವರ್ಷದ ಮುಗ್ದ ಮಗುವಿನಂತ್ತಿದೆ. ಅವರ ನಿವೃತ್ತಿ ಜೀವನ ಸುಖಮಯವಾಗಿರಲಿ ಎಂದು ಶುಭ ಹಾರೈಸಿದರು. ವಯೋನಿವೃತ್ತಿ ಹೊಂದಿದ ಸುಧಾಮ ಕಾಂಬಳೆ ಮಾತನಾಡಿ, ನನ್ನ ಸೇವಾ ವಯೋನಿವೃತ್ತಿ ಸಮಾರಂಭಕ್ಕೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸಹಕರಿಸಿದ ಎಲ್ಲರಿಗೂ ಧನ್ಯವಾದಗಳು ಸಲ್ಲಿಸುತ್ತೇನೆ, ನಿಮ್ಮೆಲ್ಲರ ಪ್ರೀತಿ ವಿಶ್ವಾಸಕ್ಕೆ ಚಿರಋಣಿಯಾಗಿರುತ್ತೇನೆ ಎಂದು ತಿಳಿಸಿದರು. ಆಡಳಿತಾಧಿಕಾರಿ ಡಾ. ವಿಜಯ ಹಿರಸಕ್ಕರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸುಧಾಮ ಕಾಂಬಳೆ ಅವರು ಕ್ರಿಯಾಶೀಲ ವ್ಯಕ್ತಿಯಾಗಿ ಉತ್ತಮ ಸೇವೆ ಸಲ್ಲಿಸಿದ್ದಾರೆ. ಆಸ್ಪತ್ರೆಗೆ ಬರುವ ರೋಗಿಗಳಿಗೆ ಒಳ್ಳೆಯ ರೀತಿಯಿಂದ ಸ್ಪಂದಿಸಿ ಅವರೊಂದಿಗೆ ಮಾತನಾಡುತ್ತಿದರು. ಅವರ ಹಾಗೆ ಸಿಬ್ಬಂದಿ ವರ್ಗದವರು ಕೂಡ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು. ಸಮಯ ಪಾಲನೆ ಮತ್ತು ಸ್ವಚ್ಛತೆ ಕಾಪಾಡುವುದನ್ನು ಎಲ್ಲರೂ ಕಲಿಯಬೇಕು, ಆಸ್ಪತ್ರೆಗೆ ಬರುವ ಜನರಿಗೆ ಒಳ್ಳೆ ರೀತಿಯಿಂದ ಸ್ಪಂದಿಸಬೇಕು ಎಂದು ಸಲಹೆ ನೀಡಿದರು. ಡಾ. ಶುಶೀಲಕುಮಾರ್, ಶಿಕ್ಷಕ ಸಂಜೀವನ ಭೋಸ್ಲೆ, ಕಸಾಪ ತಾಲುಕಾಧ್ಯಕ್ಷ ಅನೀಲಕುಮಾರ ಸಿಂಧೆ, ಹಸನ್ ಲಚ್ಚಿಕೆ, ಶಿವರಾಜ್ ಮುಸ್ತಾಪೂರ್ ಮಾತನಾಡಿದರು. ಈ ಸಂದರ್ಭದಲ್ಲಿ ನಿವೃತ್ತ ವೈದ್ಯಾಧಿಕಾರಿ ರಾಜಶೇಖರ ಕೋರವಾರ, ಡಾ. ಸೈಯದ್ ಜುಬೇರ್, ಡಾ. ನಜೀಮ್ಮ ಪಟೇಲ್, ಡಾ. ಪ್ರೀತಿ ವಾಲಿ, ಡಾ. ವೀರಾರೆಡ್ಡಿ, ಡಾ. ಪ್ರಕಾಶ ಸಿರ್ಕೆ, ಸಿಬ್ಬಂದಿಗಳಾದ ಪ್ರಭು ಮುದನ್ನಾಳಕ್ಕರ್, ನಂದುಕುಮಾರ್, ನಾಗೇಂದ್ರ, ಸುನೀಲ ಮಾನೆ, ರಾಜಶೇಖರ, ಮಹಾದೇವ, ಬುದ್ಧಪ್ರಕಾಶ ಮಾಳಗೆ, ರಾಹುಲ್ ಭಂಡಾರಿ, ಗುಂಡಪ್ಪ, ಅರುಣಕುಮಾರ್, ಅನೀಲಕುಮಾರ್, ಸಿದ್ದಲಿಂಗ, ಹಣಮಂತ ಹಣಕುಣಿ, ಸ್ನೇಹಾ, ಗೀತಾ ತುಳಜೆ, ಸವಿತಾ, ಸುಮಾ, ಸುಜಾತಾ, ವಂದನಾ, ಅಶ್ವಿನಿ, ಪೂಜಾ, ಶಾಂತಮ್ಮಾ, ಹಲಿಮಾ, ಪ್ರಮುಖರಾದ ವಿಜಯಕುಮಾರ್ ಚಿಟಗುಪ್ಪಕ್ಕರ್, ಸಿದ್ರಾಮ ಚಾಂದಗೌಳಿ, ಸೇರಿದಂತೆ ಗ್ರಾಮಸ್ಥರು ಹಾಗೂ ಸುಧಾಮ ಕಾಂಬಳೆ ಕುಟುಂಬಸ್ಥರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ದೇವಿಂದ್ರ ನಾಗನಕೇರಾ ನಿರೋಪಿಸಿ ವಂದಿಸಿದರು.

# ಸಹಕಾರ-ಪ್ರೋತ್ಸಾಹ ಕಾಲೇಜು ಬೆಳವಣಿಗೆಗೆ ಸೋಪಾನ : ಪ್ರೊ. ಬಸವರಾಜ ಎವಲೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:-ಶರಣರ ದಾಸೋಹದ ಪರಿಕಲ್ಪನೆಯ ಕಾಲೇಜು ಅಂಗಳಕ್ಕೆ ತರಲು ಶರಣ ಬಸವೇಶ್ವರ ವಿದ್ಯಾ ವರ್ಧಕ ಸಂಘದ ಆಡಳಿತ ಮಂಡಳಿಯವರ ಪ್ರೋತ್ಸಾಹದಿಂದ ಸಾದ್ಯವಾಯಿತು. ಕಾಲೇಜಿನ ಶೈಕ್ಷಣಿಕ ಬೆಳವಣಿಗೆಯಲ್ಲಿ ಸಹೋದ್ಯೋಗಿಗಳ ಸಹಕಾರ ಎಂದಿಗೂ ಸೋಪಾನವಾಗಿವೆ ಎಂದು ಎಸ್ಎಸ್‌ಕೆಬಿ ಕಾಲೇಜು ನಿವೃತ್ತ ಪ್ರಾಂಶುಪಾಲ ಪ್ರೊ. ಬಸವರಾಜ ಎವಲೆ ಹೇಳಿದರು.

ನಗರದ ಎಸ್ ಎಸ್ ಕೆ ಬಸವೇಶ್ವರ ಪದವಿ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಸೇವಾ ನಿವೃತ್ತಿ ಹೊಂದಿದ ಪ್ರಾಚಾರ್ಯರಾದ ಪ್ರೊ. ಬಸವರಾಜ ಎವಲೆ ಅವರ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು, 36 ವರ್ಷಗಳ ಅಧ್ಯಾಪನ ಮತ್ತು ಆಡಳಿತಾತ್ಮಕ ಕೆಲಸ ತೃಪ್ತಿ ತಂದಿದೆ ಎಂದರು. ಅಧ್ಯಕ್ಷತೆ ವಹಿಸಿದ್ದ ಕಾಲೇಜು ಪ್ರಾಚಾರ್ಯರಾದ ಡಾ. ಶಿವಕುಮಾರ ಪಾಟೀಲ ಮಾತನಾಡಿ, ಕಾಲೇಜಿನ ಶೈಕ್ಷಣಿಕ ಅಭಿವೃದ್ಧಿಗೆ ಪ್ರೊ. ಬಸವರಾಜ ಎವಲೆ ಅವರ ಶ್ರಮ ಮತ್ತು ಸಾಧನೆ ಅನನ್ಯ. ಹೊಸ ಕೋರ್ಸ್‌ಗಳ ಪ್ರಾರಂಭ, ಗ್ರಂಥಾಲಯ ಅಭಿವೃದ್ಧಿ, ಗಣಕಯಂತ್ರ ಪ್ರಯೋಗಾಲಯ ಸೇರಿ ಶೈಕ್ಷಣಿಕ ಏಳಿಗೆಗೆ ನೆರವಾಗುವ ಹಲವು ಅವಿಸ್ಮರಣೀಯ ಕೆಲಸಗಳು ಮಾಡಿದ್ದಾರೆ ಎಂದರು.

ಪ್ರೊ. ಆರ್. ಡಿ. ಬಾಲಕಿಲೆ ಅವರು ಬಸವರಾಜ ಎವಲೆ ಅವರ ಜೀವನ ಮತ್ತು ಸಾಧನೆ ಕುರಿತು ಮಾತನಾಡಿದರು. ಪ್ರೊ. ವಿಠೋಬಾ ಡೊಣ್ಣೇಗೌಡರು ಮಾತನಾಡಿ, ಎವಲೆ ಅವರ ತಾಯ್ತನದ ಪ್ರೀತಿ ಮತ್ತು ದಕ್ಷ ಆಡಳಿತದ ಗುಣ ಎಲ್ಲರಿಗೂ ಮಾದರಿ. ಅವರ ಅಂತಃಕರಣದ ಕಾಳಜಿ ಕಾಲೇಜು ಬೆಳವಣಿಗೆಗೆ ಕಾರಣವಾಗಿದೆ ಎಂದರು.

ಶ್ರೀ ಬಸವೇಶ್ವರ ಪದವಿ ಕಾಲೇಜು ಅಧ್ಯಾಪಕ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ಕಾಲೇಜೊಂದನ್ನು ಬೌದ್ಧಿಕವಾಗಿ, ಸಾಂಸ್ಕೃತಿಕವಾಗಿ, ಸಂಶೋಧನಾತ್ಮಕವಾಗಿ ಕಟ್ಟುವ ಕೆಲಸ ಪ್ರೊ. ಎವಲೆ ಅವರು ಮಾಡಿದ್ದಾರೆ. ಸಾಹಿತ್ಯ, ವಿಜ್ಞಾನ ಸೇರಿ ಹಲವು ವಿಷಯಗಳಲ್ಲಿ ಅಂತರ್ಶಿಸ್ತೀಯ ಮತ್ತು ಬಹುಶಿಸ್ತೀಯ ಅಧ್ಯಯನಕ್ಕೆ ಕ್ಯಾಂಪಸ್ಸನ್ನು ವೇದಿಕೆಯಾಗಿ ರೂಪಿಸಿದ್ದರು ಎಂದರು.

ಹಲವು ಸಂಗತಿಗಳ ಬಗೆಗೆ ವಿಚಾರ ಸಂಕಿರಣ, ಕಮ್ಮಟ ಮಾಡುವ ಮೂಲಕ ನಾಡಿನ ಅನೇಕ ವಿದ್ವಾಂಸರನ್ನು ಕಾಲೇಜಿಗೆ ಕರೆಸಿ ವಿದ್ಯಾರ್ಥಿಗಳನ್ನು ಮುಖಾಮುಖಿಯಾಗಿಸಿದ್ದಾರೆ. ಎಸ್ ಎಸ್ ಕೆ ಬಿ ಕಾಲೇಜು ಒಂದು ಸಾಂಸ್ಕೃತಿಕ ಲೋಕವಾಗಿ ಪ್ರೊ. ಎವಲೆ ಅವರು ರೂಪಿಸಿದ್ದಾರೆ ಎಂದರು. ಕಲಬುರಗಿ ಎಸ್.ಬಿ ಕಾಲೇಜು ಪ್ರಾಚಾರ್ಯರಾದ ಡಾ. ಬಿ. ರಾಮಕೃಷ್ಣ, ಡಾ. ವಿದ್ಯಾಧರ ಪಾಟೀಲ, ಲಕ್ಷ್ಮೀಬಾಯಿ ಬಂಕೂರ, ಡಾ. ಸುರೇಶ ಎಚ್.ಆರ್, ಡಾ. ರಮೇಶ, ಕಲ್ಯಾಣಪ್ಪಾ ನಾವದಗಿ, ಸುಮನ್ ರೆಡ್ಡಿ ಸೂರ್ಯಕಾಂತ ನಾಸೆ, ಸನತರೆಡ್ಡಿ, ಮಾತನಾಡಿದರು. ಈ ಸಂದರ್ಭದಲ್ಲಿ ಭಾಲ್ಕಿಯ ಪ್ರೊ. ವೀರಣ್ಣ ತುಪ್ಪದ್, ಸಿದ್ರಾಮಪ್ಪ ಮಾಲಿಪಾಟೀಲ, ರಾಚಯ್ಯ ಮಠಪತಿ, ಲೋಕೇಶ ಮುನ್ನಳ್ಳಿ, ದೀಪಕ ಕಾಡಾದಿ, ವಿನಾಯಕ ಮುಳ್ಳೂರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಈ ವೇಳೆ ಪ್ರೊ. ಬಸವರಾಜ ಎವಲೆ ಹಾಗೂ ಮಾಲತಿ ಎವಲೆ ಅವರನ್ನು ಸನ್ಮಾನಿಸಲಾಯಿತು. ಭೀಮಾಶಂಕರ ಪೂಜಾರಿ ಸ್ವಾಗತಿಸಿದರು. ಪೂಜಾ ನಿರೂಪಿಸಿದರು. ಶಿಲ್ಪಾ ವಂದಿಸಿದರು.

# ಆಕ್ಷೇಪಣೆ ಸಲ್ಲಿಸಲು 15ದಿನ ಕಾಲ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಕರ್ನಾಟಕ ಸೌಹಾರ್ದ ಕಾಯ್ದೆ 1997 ರಲ್ಲಿ ನೊಂದಣಿಯಾದ ಕೆಲವು ಸಹಕಾರಿಗಳ ನೊಂದಣಿಯನ್ನು ಸಮಾಪನೆಗೊಳಿಸಲಾಗಿದೆ. ಇವುಗಳನ್ನು ಸಮಾಪನೆ ಪೂರ್ವದಲ್ಲಿ ಆಕ್ಷೇಪಣೆಗಳು ಇದ್ದಲ್ಲಿ ಸೌಹಾರ್ದ ಸಹಕಾರಿಗಳ ಸಹಾಯಕ ನಿಬಂಧಕರು, ಬೀದರ ಉಪ ವಿಭಾಗ, ಬೀದರ ಕಛೇರಿಗೆ 15 ದಿನಗೊಳಗಾಗಿ ಆಕ್ಷೇಪಣೆ ಸಲ್ಲಿಸಲು ತಿಳಿಸಲಾಗಿದೆ. ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಬೀದರ ಉಪ ವಿಭಾಗ ಬೀದರ ಈ ಕಛೇರಿಯಲ್ಲಿ ನೊಂದಣಿಯಾಗಿರುವ ಸೌಹಾರ್ದ ಸಹಕಾರಿಗಳಾದ ಜನತಾ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ., ಬೀದರ್ ತಾ!ಜಿ!ಬೀದರ್. ಗ್ರಾಮೀಣ ಅಭಿವೃದ್ಧಿ ಪತ್ತಿನ ಸೌಹಾರ್ದ ಸಹಕಾರ ನಿ., ಸಿರ್ಸಿ(ಎ) ತಾ!ಜಿ!ಬೀದರ್. ಪ್ರಗತಿ ಸೌಹಾರ್ದ ಪತ್ತಿನ ಸಹಕಾರಿ ನಿ. ಬೀದರ್, ತಾ! ಜಿ! ಬೀದರ್. ಆರ್.ಕೆ. ಪತ್ತಿನ ಸೌಹಾರ್ದ ಸಹಕಾರಿ ನಿ. ಬೀದರ್, ತಾ! ಜಿ!ಬೀದರ್, ನಂದಿ ಬಸವ ಸೌಹಾರ್ದ ಸಹಕಾರಿ ನಿ.ಬೀದರ್, ತಾ! ಜಿ!ಬೀದರ್. ಶ್ರೀ ಸಾಯಿ ಕೃಪಾ ವಿವಿದೋದ್ದೇಶ ಸೌಹಾರ್ದ ಸಹಕಾರಿ ನಿ. ಬಸವಕಲ್ಯಾಣ ತಾ! ಬಸವಕಲ್ಯಾಣ ಜಿ! ಬೀದರ್. ಸ್ವಾಮಿ ವೀರಭದ್ರೇಶ್ವ ಸೌಹಾರ್ದ ನಿ. ಬೀದರ್. ತಾ!ಜಿ!ಬೀದರ. ರಬಕಲ ಪತ್ತಿನ ಸೌಹಾರ್ದ ಸಹಕಾರಿ ನಿ. ಬಸವಕಲ್ಯಾಣ ತಾ! ಬಸವಕಲ್ಯಾಣ ಜಿ! ಬೀದರ್. ಕೆ.ಎಚ್.ಪಾಟೀಲ್ ಸೌಹಾರ್ದ ಸಹಕಾರಿ ನಿ. ಔರಾದ(ಎಸ್) ತಾ! ಜಿಲ್ಲಾ ಬೀದರ್. ಸ್ವಾಮಿ ವಿವೇಕಾನಂದ ಪತ್ತಿನ ಸೌಹಾರ್ದ ಸಹಕಾರಿ ನಿ. ಭಾಲ್ಕಿ ತಾ! ಭಾಲ್ಕಿ, ಜೀ ಬೀದರ್. ವೈಭವ ಲಕ್ಷ್ಮಿ ಪತ್ತಿನ ಸೌಹಾರ್ದ ಸಹಕಾರಿ ನಿ. ಬೀದರ್. ತಾ! ಜಿ! ಬೀದರ್. ಆದಿತ್ಯ ಪತ್ತಿನ ಸೌಹಾರ್ದ ಸಹಕಾರಿ ನಿ. ಔರಾದ(ಬಿ) ತಾ! ಔರಾದ ಜಿ! ಬೀದರ್. ಲುಂಬಿನಿ ವಿವಿದೋದ್ದೇಶ ಸೌಹಾರ್ದ ಸಹಕಾರಿ ನಿ. ಬೀದರ್ ತಾ! ಜಿ! ಬೀದರ್. ಜಗತ್ ಜ್ಯೋತಿ ಬಸವೇಶ್ವರ ಪತ್ತಿನ ಸೌಹಾರ್ದ ಸಹಕಾರಿ ನಿ. ಬೀದರ್ ತಾ! ಜಿ! ಬೀದರ್ ಈ ಸಹಕಾರಿಗಳ ನೊಂದಣಿಯನ್ನು ಸಮಾಪನೆಗೊಳಿಸಲಾಗಿದೆ. ಈ ಸೌಹಾರ್ದ ಸಹಕಾರಿ ಸದಸ್ಯರು ಸೌಹಾರ್ದ ಸಹಕಾರಿಗಳ ಲೆಕ್ಕ ಪರಿಶೋಧನೆ ನಡೆಸಿರುವುದಿಲ್ಲ, ಸಭೆಗಳು ಜರುಗಿಸಿರುವುದಿಲ್ಲ ಮತ್ತು ಪ್ರತಿ ವರ್ಷ ವರದಿಗಳು ಸಲ್ಲಿಸಲಾರದೇ ಇರುವುದರಿಂದ ಸ್ಥಗೀತಗೊಂಡಿರುವುತ್ತದೆ. ಆದ್ದ-ರಿಂದ ಇವುಗಳನ್ನು ಸಮಾಪನೆ ಗೊಳಿಸಲಾಗುತ್ತದೆ ಎಂಬ ಮಾಹಿತಿಯನ್ನು ಸೌಹಾರ್ದ ಸಹಕಾರಿಗಳ ಗಮನಕ್ಕೆ ತರಲಾಗಿದೆ ಎಂದು ಸಹಕಾರ ಸಂಘಗಳ ಸಹಾಯಕ ನಿಬಂಧಕರವರ ಕಾರ್ಯಾಲಯ ಬೀದರ, ಉಪ ವಿಭಾಗ ಬೀದರ ಕಚೇರಿಯ ಪ್ರಕಟಣೆಯಲ್ಲಿ ತಿಳಿಸಿದೆ.

# ಬೆಮಳಖೇಡಾ: ಜೂನ್ 10ರಂದು ಗ್ರಾಮ ಸಭೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ತಾಲೂಕಿನ ಬೆಮಳಖೇಡ ಗ್ರಾಮ ಪಂಚಾಯತನಲ್ಲಿ ಜರುಗುವ ಲೆಕ್ಕ ಪರಿಶೋಧನೆಯಲ್ಲಿ ಗ್ರಾಮ ಪಂಚಾಯತ ಎಲ್ಲ ಸಿಬ್ಬಂದ್ದಿಗಳು ಸಹಕರಿಸಬೇಕು ಎಂದು ಸಾಮಾಜಿಕ ಲೆಕ್ಕ ಪರಿಶೋಧನೆ ಕಾರ್ಯಕ್ರಮ ವ್ಯವಸ್ಥಾಪಕ ರಾಹುಲ್ ಕೈವಾರೆ ಹೇಳಿದರು. ಸಾಮಾಜಿಕ ಲೆಕ್ಕ ಪರಿಶೋಧನಾ ನಿರ್ದೇಶನಾಲಯ ಬೆಂಗಳೂರು, ತಾಲೂಕು ಪಂಚಾಯತ, ಗ್ರಾಮ ಪಂಚಾಯತ್ ಬೆಮಳಖೇಡದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಮತ್ತು 15ನೇ ಹಣಕಾಸು ಆಯೋಗದ ಅನುದಾನದ ಸಾಮಾಜಿಕ ಲೆಕ್ಕ ಪರಿಶೋಧನೆಯ ಪೂರ್ವಭಾವಿ ಸಭೆಯಲ್ಲಿ ತಿಳಿಸಿದರು. ಜೂನ್ 06 ರಿಂದ 10ರ ವರೆಗೆ ಸಾಮಾಜಿಕ ಲೆಕ್ಕ ಪರಿಶೋಧನೆ ಜರುಗುತ್ತದೆ. ಆದ್ದರಿಂದ ಎಲ್ಲ ಕಡತಗಳು ನೀಡಬೇಕು. ಜೂನ್ 10 ರಂದು ಬೆಳಗ್ಗೆ 10 ಗಂಟೆಗೆ ಗ್ರಾಮ ಪಂಚಾಯತ ಆವಣದಲ್ಲಿ ಗ್ರಾಮ ಸಭೆ ಜರುಗಲಿದ್ದು ಗ್ರಾಮಸ್ಥರನ್ನು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಒಂದು ದಿನ ಮುಂಚಿತವಾಗಿ ಡಂಗೂರ ಸಾರಿ ಗ್ರಾಮ ಸಭೆ ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷ ಮಂಜುನಾಥ ಸುಣಗಾರ, ಅಭಿವೃದ್ಧಿ ಅಧಿಕಾರಿ ಸುಶಾಂತಕುಮಾರ, ಉಪಾಧ್ಯಕ್ಷರು, ಸದಸ್ಯರು, ಐಇಸಿ ಸಂಯೋಜಕ ವಿಶ್ವನಾಥ, ತಾಂತ್ರಿಕ ಸಹಾಯಕ ಮಹೇಬೂಬ್, ಬಿ.ಎಫ್.ಟಿ ರಜನಿಕಾಂತ ವರ್ಮಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಜೂ. 11ರಂದು ಪುರಸಭೆ ಅಧ್ಯಕ್ಷರ ಉಪಾಧ್ಯಕ್ಷರ ಚುನಾವಣೆ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಚಿಟಗುಪ್ಪ ಪುರಸಭೆಯ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನದ ಚುನಾವಣೆ ಜೂನ್ 11ರಂದು ನಡೆಯಲಿದೆ ಎಂದು ಚುನಾವಣಾಧಿಕಾರಿ ಮಂಜುನಾಥ ಪಂಚಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಧ್ಯಕ್ಷ ಸ್ಥಾನ ಬಿಸಿಬಿ ಹಾಗೂ ಉಪಾಧ್ಯಕ್ಷ ಸ್ಥಾನ ಸಾಮಾನ್ಯ ವರ್ಗಕ್ಕೆ ಮೀಸಲಾಗಿದೆ. ಜೂನ್ 11ರಂದು ಬೆಳಿಗ್ಗೆ 9 ಗಂಟೆಯಿಂದ 11 ಗಂಟೆಯವರೆಗೆ ನಾಮಪತ್ರ ಸಲ್ಲಿಸುವುದು, ಮಧ್ಯಾಹ್ನ 1 ಗಂಟೆಗೆ ಚುನಾವಣೆ ಸಭೆ, 1 ಗಂಟೆಯಿಂದ 1.30ರವರೆಗೆ ನಾಮಪತ್ರ ಪರಿಶೀಲನೆ, 1.30ರಿಂದ 2 ಗಂಟೆಯವರೆಗೆ ನಾಮಪತ್ರ ಹಿಂಪಡೆಯಲು ಅವಕಾಶ, ಮಧ್ಯಾಹ್ನ 2 ಗಂಟೆಗೆ ಅಗತ್ಯ ಬಿದ್ದರೆ ಕೈ ಎತ್ತುವ ಮೂಲಕ ಚುನಾವಣೆ ನಡೆಸಲಾಗುವುದು. ಚುನಾವಣೆಗೆ ಎಲ್ಲ ಸದಸ್ಯರು ಹಾಗೂ ಉಮೇದುದಾರರು ಚುನಾಯಿತ ಪ್ರಮಾಣ ಪತ್ರವನ್ನು ತರಬೇಕು. ಉಮೇದುವಾರರು ನಾಮಪತ್ರಕ್ಕೆ ಕಡ್ಡಾಯವಾಗಿ ಮೂಲ ಜಾತಿ ಪ್ರಮಾಣ ಪತ್ರವನ್ನು ಲಗತ್ತಿಸಬೇಕು. ಗುರುತಿನ ಚೀಟಿ ಕಡ್ಡಾಯವಾಗಿ ತರಬೇಕು. ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಲ್ಕಪಲ್ಲಿ, ಕುಡಿಯುವ ನೀರಿನ ಘಟಕ ದುರಸ್ತಿಗೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಜು, 02 ತಾಲೂಕಿನ ಮಲ್ಕಾಪಲ್ಲಿ ಗ್ರಾಮದ ಹೋರವಲಯದಲ್ಲಿರುವ ನೀರುಶುದ್ಧಿಕರಣ ಮಾಡುವ ಘಟಕ ಕೆಟ್ಟು ನಿಂತಿದ್ದು, ಕುಡಿಯುವ ನೀರಿಗಾಗಿ ಇಲ್ಲಿನ ಗ್ರಾಮಸ್ಥರು ನಿತ್ಯ ಪರದಾಡುವಂತಾಗಿದೆ.

ಇಲ್ಲಿನ ಗ್ರಾಮಸ್ಥರಿಗೆ ಅನುಕೂಲವಾಗಲೂ ಸರಕಾರ ಲಕ್ಷಾಂತರ ರೂಪಾಯಿ ಖರ್ಚು ಮಾಡಿ ,ಇಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣ ಮಾಡಿತ್ತು ಆದರೆ ಕೆಲವು ದಿನಗಳಿಂದ ಶುದ್ದಿಕರಣ ಯಂತ್ರವು ಕಾರ್ಯನಿರ್ವಹಿಸುತ್ತಿಲ್ಲ.

ಆದ ಕಾರಣ ಸ್ಥಳೀಯ ಚುನಾಯಿತ ಪ್ರತಿನಿಧಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಇತ್ತ ಕಡೆ ಗಮನಹರಿಸಿ ನೀರು ಶುದ್ದಿಕರಣ ಯಂತ್ರವನ್ನು ದುರಸ್ತಿ ಮಾಡಿ ಆದಷ್ಟು ಬೇಗನೆ ಜನರಿಗೆ ಶುದ್ಧ ಕುಡಿಯುವ ನೀರು ಸಿಗುವಂತೆ ಮಾಡಬೇಕು ಮತ್ತು ಸ್ವ-ಗ್ರಾಮದವರೆ ಗ್ರಾಮ ಪಂಚಾಯತ್ ಅಧ್ಯಕ್ಷರು ಇದ್ದು ಯಾವುದೇ ರೀತಿಯ ಅಭಿವೃದ್ಧಿಯಾಗಿಲ್ಲಾ ಎಂದು ಗ್ರಾಮಸ್ಥರಾದ ವಿನೋದ ಸಾಹುಕಾರ ಯುವ ಮುಖಂಡರು ಮಾಧ್ಯಮಕ್ಕೆ ತಿಳಿಸಿದ್ದಾರೆ.



ಚಿಟಗುಪ್ಪ:- ದಾಂಪತ್ಯ ಜೀವನ ಸುಖ, ಶಾಂತಿ, ನೆಮ್ಮದಿ, ಆಯುಷ್ಯ, ಆರೋಗ್ಯದಿಂದ ಕುಡಿರಲ್ಲಿ ಎಂದು ಶುಭ ಹಾರೈಸುತ್ತ, ಪಟ್ಟಣದ ಫಾತ್ಮಪುರ್ ಬಡಾವಣೆಯ ಪೂಜಾರಿ ಪರಿವಾರದ ಅಂಬಿಕಾ ದತ್ತಾತ್ರೇಯ ಪೂಜಾರಿ ದಂಪತಿಗಳ 15ನೇ ವರ್ಷದ ಮದುವೆ ವಾರ್ಷಿಕೋತ್ಸವನ್ನು ಕೇಕ್ ಕತ್ತರಿಸುವ ಮೂಲಕ ಆಚರಿಸಲಾಯಿತ್ತು. ಈ ಸಂದರ್ಭದಲ್ಲಿ ಸಂಜೀವನ ಭೋಸ್ಲೆ, ನರಸಪ್ಪ ನರನಾಳ, ರಾಜಕುಮಾರ ಆರ್. ಹಡಪದ್, ಹಸನ್ ಲಚ್ಚಿಕೆ, ರಾಜು ಪೂಜಾರಿ, ನರೇಂದ್ರರೆಡ್ಡಿ ರಾಂಪುರ, ಸಂಗಮೇಶ ಪೂಜಾರಿ, ಶ್ರೀನಿವಾಸ ಪೂಜಾರಿ, ಸಾನವಿ ಪೂಜಾರಿ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

### ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ವಿತರಣೆ

# ಜೀವನದ ಪಾಠ ಕಲಿಸುವ ಸರ್ಕಾರಿ ಶಾಲೆ ಶಿಕ್ಷಣ:- ಬಸವರಾಜ ಮೇತ್ರೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ಪಟ್ಟಣದ ಸರ್ಕಾರಿ ಕನ್ಯಾ ಪ್ರೌಢ ಶಾಲೆಯ್ಲಲಿ ಶೈಕ್ಷಣಿಕ ಸಾಲಿನಲ್ಲಿ ದಾಖಲಾತಿಗೊಂಡ ಮಕ್ಕಳನ್ನು ಸಿಹಿ ನೀಡಿ ಸ್ವಾಗತಿಸಲಾಯಿತು. ಸರ್ಕಾರದಿಂದ ನೀಡಿರುವ ಉಚಿತ ಪಠ್ಯಪುಸ್ತಕಗಳನು ವಿದ್ಯಾರ್ಥಿಗಳಿಗೆ ಮುಖ್ಯಗುರುಗಳಾದ ಬಸವರಾಜ ಮೇತ್ರೆ ವಿತರಿಸಿ ಮಾತನಾಡಿದ ಅವರು, ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡಿದ ಹಲವಾರು ವಿದ್ಯಾರ್ಥಿಗಳು ಉನ್ನತ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿದ್ದು ಸರ್ಕಾರಿ ಶಾಲೆ ಪ್ರತಿಯೊಬ್ಬರಿಗೂ ಜೀವನದ ಪಾಠವನ್ನು ಕಲಿಸುತ್ತದೆ ಸರ್ಕಾರಿ ಶಾಲೆ ಮಕ್ಕಳೆಂಬ ಕೀಳರಿಮೆ ಬಿಟ್ಟು ವಿದ್ಯಾರ್ಥಿಗಳು ಕಲಿಕೆಯಲ್ಲಿ ಪಾಲ್ಗೊಳ್ಳಬೇಕು. ಸರ್ಕಾರ ಬಹಳಷ್ಟು ಸೌಲಭ್ಯಗಳನ್ನು ಒದಗಿಸುತ್ತಿದ್ದೆ, ಇವುಗಳನ್ನು ಸದುಪಯೋಪಡಿಸಿಕೊಂಡು ಶೈಕ್ಷಣಿಕವಾಗಿ ಸಾಧನೆ ಮಾಡಬೇಕು ಎಂದರು. ಸಮಾಜದಲ್ಲಿ ಹಲವಾರು ಸಾಧಕರು ಸರ್ಕಾರಿ ಶಾಲೆಗಳಲ್ಲಿ ಓದಿದವರೇ ಆಗಿದ್ದಾರೆ. ಅಂದಿನ ಪಾಠವನ್ನು ಅಂದೇ ಅಭ್ಯಸಿಸುವ ಮೂಲಕ ಕಠಿಣ ಪರಿಶ್ರಮದೊಂದಿಗೆ ಜ್ಞಾನಾರ್ಜನೆ ಮಾಡಬೇಕು. ಪೋಷಕರೂ ಸಹ ಮಕ್ಕಳ ಅನುಕೂಲಕ್ಕೆ ತಕ್ಕಂತೆ ಓದುವ ವಾತಾವರಣ ನಿರ್ಮಿಸಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಶಿಕ್ಷಕರಾದ ಸಂಜೀವನ ಭೋಸ್ಲೆ, ಗುಂಡಪ್ಪ ಕೋರೆ, ಪಂಚಶೀಲ ಕಟ್ಟಿಮನಿ, ಅಂಬಿಕಾ ಮಾಳಗೆ, ಮಲ್ಲಮ್ಮ ಹುಡಗಿ, ಹಸನ್ ಲಚ್ಚಿಕೆ, ಶಿಲ್ಪಾ, ಬ್ಲೇಸಿರಾಣಿ, ಆಯಿಷ್ಯ, ಸಿರಿನ್ ಬೇಗಂ, ಸುಮಾ ರೆಡ್ಡಿ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಲ್ಲಿ ಶಿಕ್ಷಣದ ಮೌಲ್ಯಗಳ ಅರಿವು ಮೂಡಿಸಿ:ಬಿರಾದಾರ್

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:- ಗ್ರಾಮೀಣ ಭಾಗದ ಸಾಧನೆಗೈದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸುವುದರಿಂದ ಅವರಿಗೆ ಸ್ಫೂರ್ತಿ ತುಂಬಿದಂತಾಗುತ್ತದೆ ಎಂದು ಮಹಾರಾಷ್ಟ್ರ ರಾಜ್ಯ ಶಿಕ್ಷಣ ಸಮಿತಿಯ ರಾಜ್ಯ ಸಂಪರ್ಕ ಮುಖ್ಯಸ್ಥ ಕಿಶನರಾವ್ ಬಿರಾದಾರ್ ನುಡಿದರು.

ಅವರು ಇತ್ತಿಚೇಗೆ ಭಾಲ್ಕಿ ತಾಲೂಕಿನ ಮೇಥಿಮೇಳಕುಂದಾ ಗ್ರಾಮದಲ್ಲಿ ಎಸ್ಎಸ್ಎಲ್‌ಸಿ ಹಾಗೂ ಪಿಯುಸಿಯಲ್ಲಿ ಉತ್ತಮ ಸಾಧನೆ ಗೈದು ಗ್ರಾಮಕ್ಕೆ ಕೀರ್ತಿ ತಂದಿದಕ್ಕೆ ಅವರನ್ನು ಸನ್ಮಾನಿಸಿ ಮಾತನಾಡಿ, ಮಾರ್ಗದರ್ಶನ, ಕಠಿಣ ಪರಿಶ್ರಮ, ಪ್ರಾಮಾಣಿಕತೆ ಮತ್ತು ಶಿಕ್ಷಣದ ಮೌಲ್ಯಗಳ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ಕೆಲಸಗಳು ನಿರಂತರ ನಡೆಯಬೇಕು ಎಂದರು. ಪಿಕೆಪಿಎಸ್ ಅಧ್ಯಕ್ಷ ಬಾಬುರಾವ್ ಬಿರಾದಾರ್, ಲಯನ್ಸ್ ಕ್ಲಬ್ ಅಂತರ ರಾಷ್ಟ್ರೀಯ ಐಟಿ ವಿಭಾಗದ ಜಿಲ್ಲಾಧ್ಯಕ್ಷ ಮತ್ತು ಉದ್ಯಮಿ ಅಶೋಕ್ ಗುರ್ನಾಳೆ, ರಾಷ್ಟ್ರಪತಿ ಪುರಸ್ಕೃತೆ ಲಕ್ಷ್ಮಿ ಮೇತ್ರೆ, ಕಾರ್ಯಕ್ರಮದ ಸಂಘಟಕರಾದ ತುಕಾರಾಮ ಮೋರೆ ಭಾಗವಹಿಸಿದ್ದರು.



ಮೇಥಿ ಮೇಳಕುಂದಾ ಗ್ರಾಮದಲ್ಲಿ ಎಸ್ಎಸ್ಎಲ್‌ಸಿ ಪಿಯುಸಿ ಸಾಧನ ಮಕ್ಕಳಿಗೆ ಸನ್ಮಾನಿಸಿದರು.

ಸಮಾರಂಭಕ್ಕೂ ಮುನ್ನ ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ದೇಶಕ್ಕಾಗಿ ಮಡಿದ ಸೈನಿಕರಿಗೆ ಗೌರವ ಸಲ್ಲಿಸಲಾಯಿತು. 10ನೇ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದವರಿಗೆ ತಲಾ 5 ಸಾವಿರ ರೂಪಾಯಿ ನಗದು ನೀಡಿ ಪ್ರೋತ್ಸಾಹಿಸಲಾಯಿತು. ಗ್ರಾಮದ ಪ್ರಮುಖರಾದ ರಘುನಾಥ್ ಬಿರಾದಾರ್, ದಿಲೀಪ್ ಬಿರಾದಾರ್ ಕಿಶೋರ್ ಕನೆಗಾವೆ, ಮಹಾಲಿಂಗ ಸ್ವಾಮಿ, ಶೇಷರಾವ್ ಬಿರಾದಾರ್, ಮುಖೇಶ್ ಘೋರ್ಪಡೆ ತಾನಾಜಿ ಕೇದಾರೆ, ಗಣಪತರಾವ್ ಗುರೂಜಿ, ವೆಂಕಟ್ ಮೇತ್ರೆ, ಶಿವಾಜಿ ಮೇತ್ರೆ, ಶಿವಾಜಿರಾವ ಕೇದಾರೆ, ಮಧುಸೂದನ್ ಮೋರೆ, ಸಂಜೀವನ್ ಮೋರೆ, ಶಾಮ ಬಿರಾದಾರ್, ಬಾಬುರಾವ್ ಕುಲಕರ್ಣಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



"ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಎಸ್ಎಸ್ಎಲ್‌ಸಿ ಮತ್ತು ಪಿಯುಸಿಯಲ್ಲಿ ಉತ್ತಮ ಸಾಧನೆ ಗೈದು ಗ್ರಾಮಕ್ಕೆ ಕೀರ್ತಿ ತಂದಿದ ವಿದ್ಯಾರ್ಥಿಗಳ ಅಭಿನಂದನಾ ಸಮಾರಂಭವನ್ನು ಶಿಕ್ಷಕ ತುಕರಾಮ ಮೋರೆ, ಅಶೋಕ ಗುರನಾಳೆ ಅವರ ನೇತೃತ್ವದಲ್ಲಿ ಹಮ್ಮಿಕೊಂಡು ಸನ್ಮಾನಿಸಿ ಅಭಿನಂದಿಸಿದ ಗ್ರಾಮಸ್ಥರಿಗೆ ಮತ್ತು ಹಾಗೂ ಸಾಧನೆ ಗೈದು ಗ್ರಾಮಕ್ಕೆ ಕೀರ್ತಿ ತಂದಿದ ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ.

-ಶಿಕ್ಷಕ ಸಂಜೀವನ ಭೋಸ್ಲೆ ಮೇಥಿಮೇಳಕುಂದಾ

## CITATION

**IN THE COURT OF THE PRL. CIVIL JUDGE AND JMFC HUMNABAD AT HUMNABAD**

**CRL. MISC. NO. 506/2025**

PETITIONERS:-

1. Tukaram S/o Haibatti Age; 80, Occu: Agri
2. Kamalakar S/o Tukaram Age; 52 years Occu: Agri
3. Rajamma D/o Tukaram Age; 46 years, Occ: House Hold
4. Surekha D/o Tukaram, Age; 36 years, Occ: House Hold
5. Madhukar S/o Tukram Age; 30 years Occu: House Hold
6. Rekha D/o Tukaram Age; 33 years, Occu: Agri
7. Jaganath S/o Tukaram, Age; 30 years Occu: Agri
8. Mamata D/o Tukaram Age; 29 years Occu: House Hold

All R/o Dhumansur Tq:Humnabad Dist:Bidar

RESPONDENT


The Registration of Birth and Death-through Chief Officer, Tahasildhar, Humnabad.

Whereas, the above named petitioners have filed the petition under section 13(3) of Birth and Death Registration Act 1969 praying this Honorable court to issue Death certificate of their father LATE Gu Jamma W/o Tukaram who died on dated : 15-05-2022 at Dhumansur Tq:Humnabad. The petitioners claiming the death certificate of deceased Tukaram for transfer of property and other official purpose and home record.

Therefore it is hereby proclaimed that if any person or persons have got any objection in this regard he/they may approach to this Honorable court on 19/06/2025 at 11.00 AM in person or authorized pleader to answer such claim otherwise the matter will be HEARD AND determined in your absence as per law.

Given under my hand and seal of he court, this 15th day of Mya-2025.

//By order of the court//
(SMT. MAHANANDA MATHAPATI)
Chief Ministerial Officer
Prl Civil Jdugea nd JMFC Court,
Humnabad.



ಬಸವಕಲ್ಯಾಣ: ನಗರದಲ್ಲಿ ದಲಿತ ರಕ್ಷಣಾ ಹೋರಾಟ ಸಮಿತಿಯ ಯುವ ಘಟಕ ರಾಜ್ಯಾಧ್ಯಕ್ಷರಾದ ನೀಲಕಂಠ ಎಲ್ ಬೆಂಡೆ ರವರ ಸಂಘಟನೆ ವತಿಯಿಂದ ಜನ್ಮದಿನ ಆಚರಣೆ ಮಾಡಲಾಯಿತು.ಈ ಸಂದರ್ಭದಲ್ಲಿ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಪ್ರಕಾಶ್ ಹಳ್ಳಿಖೇಡ್ ರವರು ಶುಭ ಕೋರಿ ಸನ್ಮಾನಿಸಿದರು. ರಮೇಶ್ ಕಟ್ಟಿ ತೋಗಾವ್ ರಾಜು ಮುಗನೂರ್ ತಾಲೂಕ ಅಧ್ಯಕ್ಷರು ಹುಮ್ನಾಬಾದ್. ಪ್ರಮೋದ್ ಮರಕುಂದ. ದೀಪಕ್ ಶಾನೇ. ಚಂದು ಗಾಂಗ್ರೆ. ಲಖನ್ ಮುಜನಾಯಕ್ ತಾಲೂಕ ಅಧ್ಯಕ್ಷರು ಬಸವಕಲ್ಯಾಣ. ಎಲ್ಲರೂ ಸೇರಿ ಶುಭ ಕೋರಿದರು.

# ಗುರು ನಾನಕ ಆಸ್ಪತ್ರೆಯಲ್ಲಿ ಐವಿಎಫ್ ಆರಂಭ : ಡಾ. ರೇಷ್ಮಾ ಕೌರ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 02 : ನಗರದಗುರುನಾನಕಆಸ್ಪತ್ರೆಯಲ್ಲಿ ಮಕ್ಕಳಿಲ್ಲದಮಹಿಳೆಯರಿಗಾಗಿ ನೂತನವಾಗಿ ಐವಿಎಫ್ ಕೇಂದ್ರವನ್ನುಆರಂಭಿಸಲಾಗಿದೆ. ಮಹಾರಾಷ್ಟ್ರದನಾಸಿಕ್‌ನ ಖ್ಯಾತ ಐವಿಎಫ್ ತಜ್ಞ ವೈದ್ಯರಾದ ಡಾ. ರಂಜೀತ್ ಜೋಶಿ ಚಿಕಿತ್ಸೆ ನೀಡಲಿದ್ದಾರೆ. ಬೀದರ ಜಿಲ್ಲೆಯ ಜನತೆ ಸದುಪಯೋಗ ಪಡೆದುಕೊಳ್ಳಬೇಕೆಂದುಉಪಾಧ್ಯಕ್ಷೆ ಡಾ. ರೇಷ್ಮಾ ಕೌರ್ ತಿಳಿಸಿದರು. ನಗರದ ಗುರುದ್ವಾರದಲ್ಲಿರುವ ಫೌಂಡೇಷನ್ ಕಛೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿ ಮಾಹಿತಿ ನೀಡಿದರು.

ಜಿಲ್ಲೆಯ ಹಲವಾರು ಮಹಿಳೆಯರುದೂರದಹೈದ್ರಾಬಾದ, ಪುಣೆ, ಸೋಲಾಪೂರ್ ಹಾಗೂ ಔರಂಗಾಬಾದ ಕಡೆಗೆ ಹೋಗಿ, ಊಟ ವಸತಿ ಜೊತೆಗೆ ಸಮಯ ವ್ಯರ್ಥ ಮಾಡಿಕೊಳ್ಳುತ್ತಿದ್ದರು. ಇದನ್ನು ಮನಗಂಡು ನಮ್ಮ ಆಸ್ಪತ್ರೆಯಲ್ಲಿಯೇ ಐವಿಎಫ್ ಕೇಂದ್ರ ತೆರೆಯಲಾಗಿದೆ. ಜನರು ಭಕ್ತಿ ಮತ್ತು ಶ್ರದ್ಧೆ ಇಟ್ಟುಕೊಂಡು ಗುರು ನಾನಕ ಆಸ್ಪತ್ರೆಗೆ ಬರುತ್ತಾರೆ. ಉತ್ತಮ ಚಿಕಿತ್ಸೆ ನೀಡುವ ಉದ್ದೇಶದಿಂದ ಈ ಹಿಂದೆ ಕ್ಯಾಥ್ ಲ್ಯಾಬ್, ನ್ಯೂರೋ ಸರ್ಜರಿ, ಅತ್ಯಾಧುನಿಕ ಶಸ್ತ್ರಚಿಕಿತ್ಸೆ ಕೇಂದ್ರ ಆರಂಭಿಸಲಾಗಿದೆ. ಐವಿಎಫ್ ಇದು ನಮ್ಮ ಆಸ್ಪತ್ರೆಗೆ ಹೊಸ ಮೈಲುಗಲ್ಲಾಗಿದೆ ಎಂದರು.

ಖ್ಯಾತ ಐವಿಎಫ್ ತಜ್ಞರಾದ ಡಾ.ರಂಜೀತ್ ಜೋಶಿ ಮಾತನಾಡಿ ದೇಶದಲ್ಲಿ ಸುಮಾರು ಐವತ್ತು ವರ್ಷಗಳಿಂದ ಐವಿಎಫ್ ಮೂಲಕ ಕೋಟ್ಯಾಂತರ ಮಕ್ಕಳು ಜನಿಸಿದ್ದಾರೆ. ಹೀಗಾಗಿ ನಗರದ ಗುರು ನಾನಕ್ ಆಸ್ಪತ್ರೆಯಲ್ಲಿ ನೂತನವಾಗಿ ಐವಿಎಫ್ ಕೇಂದ್ರ ಆರಂಭ ಮಾಡಲಾಗಿದೆ. ಶೇಕಡಾ 80 ಪ್ರತಿಶತ ಮಹಿಳೆಯರಿಗೆ ಐವಿಎಫ್ ಮೂಲಕ ಪ್ರಥಮ ಬಾರಿಗೆ ಮಕ್ಕಳಾಗುವ ಸಂಭವವಿದೆ. 20% ಜನತೆಗೆ ಮಾತ್ರ ಎರಡದಿಂದ ಮೂರ್ನಾಲ್ಕು ಬಾರಿ ಪ್ರಯತ್ನ ಮಾಡಬೇಕಾಗುತ್ತದೆ. ಮೂರ್ನಾಲ್ಕು ಬಾರಿ ಐವಿಎಫ್ ಮಾಡಿದರೂ ಮಕ್ಕಳಾಗದಿದ್ದರೆ ಅರ್ಧ ಹಣ ವಾಪಸ್ ಕೊಡಲಾಗುತ್ತದೆ. ಇದರಿಂದ ಚಿಕಿತ್ಸೆ ಪಡೆಯುವವರ ಮಾನಸಿಕ ಸ್ಥಿತಿಗತಿ ಸಮತೋಲನ ಅಗುವುದರ ಜೊತೆಗೆ ಹಣ, ಸಮಯ ಉಳಿತಾಯವಾಗುತ್ತದೆ ಎಂದರು. ಗುರು ನಾನಕ್ ಆಸ್ಪತ್ರೆಯ ಐವಿಎಫ್ ಕೇಂದ್ರದ ಪ್ರಮುಖರಾದ ಡಾ. ಸಂದೀಪ್ ಗಾಯಕವಾಡ ಮಾತನಾಡಿ ಈಗಾಗಲೇ ನಲವತ್ತು ಜನ ಮಹಿಳೆಯರು ಐವಿಎಫ್‌ಗಾಗಿ ನೊಂದಣಿ ಮಾಡಿಸಿಕೊಂಡಿದ್ದು, ಸ್ತ್ರೀಯರಿಗೆ ಐವಿಎಫ್ ಮೂಲಕ ತಾಯಿ ಭಾಗ್ಯ ಕರುಣಿಸುವ, ಅವರಿಗೆ ಫಲಕೊಡುವ ಪ್ರಾಮಾಣಿಕ ಪ್ರಯತ್ನ ಕಾನೂನಿನಡಿಯಲ್ಲಿ ಮಾಡುವ ಗುರಿ ಹೊಂದಿದ್ದೇವೆ. ಆಸ್ಪತ್ರೆಗೆ ಬಂದವರೆಲ್ಲರಿಗೂ ನೇರವಾಗಿ ಐವಿಎಫ್ ಮಾಡಿಸುವಂತೆ ಹೇಳುವುದಿಲ್ಲ. ಮೊದಲು ಅವರಿಗೆ ಸಂದರ್ಶನ ಮಾಡಿ, ಸರಳ ರೀತಿಯಲ್ಲಿ ಪರೀಕ್ಷೆ ನಡೆಸಲಾಗುವುದು. ಕೊನೆಗೆ ಅವಶ್ಯಕತೆ ಇದ್ದರೆ ಐವಿಎಫ್ ಮಾಡಲಾಗುವುದು ಎಂದು ಹೇಳಿದರು. ಈ ಸಂದರ್ಭದಲ್ಲಿ ಗುರು ನಾನಕ ಆಸ್ಪತ್ರೆಯ ಆಡಳಿತಾಧಿಕಾರಿ ಡಾ. ಕಾಮೇಶ್ವರ ರಾವ ಉಪಸ್ಥಿತರಿದ್ದರು.

# ಶತಾಯಷಿ ಡಾ.ಭೀಮಣ್ಣ ಖಂಡ್ರೆ ಕುಶಲೋಪರಿ ವಿಚಾರಿಸಿದ ವಿ.ಸೋಮಣ್ಣ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಜೂ.2:ಶತಾಯಷಿ ಡಾ.ಭೀಮಣ್ಣ ಖಂಡ್ರೆ ಅವರನ್ನು ಕೇಂದ್ರದ ರಾಜ್ಯ ರೈಲ್ವೆ ಮತ್ತು ಜಲಶಕ್ತಿ ಇಲಾಖೆ ಸಚಿವ ವಿ.ಸೋಮಣ್ಣ ಭೇಟಿಯಾಗಿ ಕುಶಲೋಪರಿ ವಿಚಾರಿಸಿದರು.

ರೈಲ್ವೆ ಯೋಜನೆಯ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಲು ಶನಿವಾರ ಬೀದರ್ ಜಿಲ್ಲೆಗೆ ಪ್ರವಾಸ ಕೈಗೊಂಡಿದ್ದ ಕೇಂದ್ರದ ರಾಜ್ಯ ರೈಲ್ವೆ ಸಚಿವ ವಿ.ಸೋಮಣ್ಣ ಅವರು ವಿವಿಧ ಕಾರ್ಯಕ್ರಮಗಳ ಒತ್ತಡದ ನಡುವೆಯು ಪಟ್ಟಣದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರ ನಿವಾಸಕ್ಕೆ ಶನಿವಾರ ಭೇಟಿ ನೀಡಿ ಶತಾಯಷಿ ಡಾ.ಭೀಮಣ್ಣ ಖಂಡ್ರೆ ಅವರ ಕೈಕುಲುಕಿ ಆರೋಗ್ಯ ವಿಚಾರಿಸಿದರು.

ನಂತರ ಸಂಸದ ಸಾಗರ ಖಂಡ್ರೆ ಅವರು ಸಚಿವ ವಿ.ಸೋಮಣ್ಣ ಅವರನ್ನು ಸನ್ಮಾನಿಸಿ ಗೌರವಿಸಿದರು.

ಈಸಂದರ್ಭದಲ್ಲಿ ಬಸವಕಲ್ಯಾಣ ಶಾಸಕ ಶರಣು ಸಲಗರ್, ಹಿರಿಯ ಉದ್ಯಮಿ ಗುರುನಾಥ ಕೊಳ್ಳೂರ ಸೇರಿದಂತೆ ಹಲವರು ಇದ್ದರು.ಗದ್ದುಗೆ ದರುಶನ :

ಇದೇವೇಳೆ ಚನ್ನಬಸವಾಶ್ರಮ ಪರಿಸರದಲ್ಲಿನ ಧ್ಯಾನ ಮಂದಿರಕ್ಕೆ ಕೇಂದ್ರದ ಸಚಿವ ವಿ.ಸೋಮಣ್ಣ ಭೇಟಿ ನೀಡಿ ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ ಗದ್ದುಗೆ ದರುಶನ ಪಡೆದು ಕೊಂಡರು.ನಂತರ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಸಚಿವ ವಿ.ಸೋಮಣ್ಣ ಅವರನ್ನು ಸನ್ಮಾನಿಸಿ, ಆಶೀರ್ವದಿಸಿದರು.

ಈ ಸಂದರ್ಭದಲ್ಲಿ ಸಂಸದ ಸಾಗರ ಖಂಡ್ರೆ, ಹುಮನಾಬಾದ ಶಾಸಕ ಡಾ.ಸಿದ್ಧಲಿಂಗಪ್ಪ ಪಾಟೀಲ್, ಮಾಜಿ ಸಂಸದ ಉಮೇಶ ಜಾಧವ, ಮಾಜಿ ಶಾಸಕ ಪ್ರಕಾಶ ಖಂಡ್ರೆ, ಬುಡಾದ ಮಾಜಿ ಅಧ್ಯಕ್ಷ ಬಾಬು ವಾಲಿ ಸೇರಿದಂತೆ ಹಲವರು ಇದ್ದರು.

# ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಆಕ್ರಮ ಗೋಹತ್ಯೆ ಹಾಗೂ ಗೋಸಾಗಾಟ ತಡೆಯಿರಿ ಚೆಕ್‌ಪೋಸ್ಟಗಳಲ್ಲಿ ತಪಾಸಣೆ ಚುರುಕುಗೊಳಿಸಿ: ಶಿವಕುಮಾರ ಬೋಳಶೆಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜೂ.02:ಜೂನ್ 6 ರಂದು ಬಕ್ರಿದ್ ಹಬ್ಬ ಆಚರಣೆ ನಡೆಯಲಿದೆ.ಈ ಸಂದರ್ಭದಲ್ಲಿ ಆಕ್ರಮ ಗೋಹತ್ಯೆ ಹಾಗೂ ಗೋಸಾಗಾಟ ತಡೆಯಬೇಕೆಂದು ವಿಶ್ವಹಿಂದೂ ಪರಿಷತ್ತಿನ ಪ್ರಾಂತ ಕಾರ್ಯದರ್ಶಿ ಶಿವಕುಮಾರ ಬೋಳಶೆಟ್ಟಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಅಧಿಕಾರಿಗಳು ಈ ಕುರಿತು ಎಚ್ಚರಿಕೆಯಿಂದ ಗೋಹತ್ಯೆ ನಿಷೇಧ ಕಾಯಿದೆ–2020ರ ಪ್ರಕಾರ ತಡೆಹಿಡಿಯಬೇಕು. ಇಲ್ಲದಿದ್ದರೆ ಆ ಕೆಲಸ ನಾವು ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು. ಜಿಲ್ಲಾ ಪೊಲೀಸ್ ಅಧೀಕ್ಷಕರು, ಜಿಲ್ಲಾಧಿಕಾರಿಗಳು, ಆರ್‌ಟಿಓ ಮತ್ತು ಇನ್ನಿತರ ಸಂಬಂಧಪಟ್ಟ ಅಧಿಕಾರಿಗಳು ಬೀದರ ಗಡಿಯಲ್ಲಿ ಆಕ್ರಮ ಗೋ ಸಾಗಾಟ ಕಂಡುಬಂದರೆ ಅವರನ್ನು ಬಂಧಿಸಿ, ವಾಹನಗಳನ್ನು ಜಪ್ತಿ ಮಾಡಿ, ಕಾನೂನಿನ ಅಡಿಯಲ್ಲಿ ಶಿಕ್ಷೆ ವಿಧಿಸಬೇಕೆಂದು ಆಗ್ರಹಿಸಿದರು. ರಾಜ್ಯದಲ್ಲಿ ಗೋಹತ್ಯೆ ನಿಷೇಧ ಜಾರಿಯಲ್ಲಿದೆ.ಅದನ್ನು ಪಾಲಿಸಿದರೆ ಗೋಹತ್ಯೆ ತಡೆಯಬಹುದು. ಚೆಕ್‌ಪೋಸ್ಟಗಳಲ್ಲಿ ತಪಾಸಣೆ ಚುರುಕುಗೊಳಿಸಬೇಕೆಂದು ಆಗ್ರಹಿಸಿದರು. ಕೆಲವು ಸೀಮಿತ ಪ್ರದೇಶಗಳಲ್ಲಿ ಗೋಹತ್ಯೆ ಹೆಚ್ಚಾಗಿ ನಡೆಸಲಾಗುತ್ತಿದೆ. ಅಂತಹ ಪ್ರದೇಶಗಳ ಮೇಲೆ ಪೊಲೀಸರು ಹದ್ದಿನ ಕಣ್ಣಿಡಬೇಕು. ಗೋಹತ್ಯೆ ನಿಷೇಧ ಹಾಗೂ ಸಂರಕ್ಷಣಾ ಕಾಯಿದೆ ಅನ್ವಯ ಕ್ರಮಕ್ಕೆ ಮುಂದಾಗುವಂತೆ ಸೂಚನೆ ನೀಡಬೇಕು. ಅಗತ್ಯ ಕ್ರಮದ ಕುರಿತು ಚರ್ಚಿಸಲು ಪೊಲೀಸ್, ಪ್ರಾದೇಶಿಕ ಸಾರಿಗೆ, ಪಶು ಸಂಗೋಪನೆ ಇಲಾಖೆ ಸೇರಿದಂತೆ ವಿವಿದ ಇಲಾಖೆ ಅಧಿಕಾರಿಗಳ ಸಭೆ ನಡೆಸಿ ನಿಯಮದ ಪ್ರಕಾರ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಬೇಕು. ಒಂದು ವೇಳೆ ಸರ್ಕಾರದ ಕಾಯ್ದೆ, ಕಾನೂನು ಉಲ್ಲಂಘಿಸಿ ಇಂತಹ ಪ್ರಕರಣಗಳು ನಡೆಸುವುದು ಗಮನಕ್ಕೆ ಬಂದರೆ ನಮ್ಮ ಸಂಘಟನೆ ತೀವ್ರವಾದ ಹೋರಾಟ ನಡೆಸುವುದು ಅನಿವಾರ್ಯವಾಗುತ್ತದೆ ಎಂದು ಶಿವಕುಮಾರ ಎಚ್ಚರಿಸಿದರು. ಇದೇ ವೇಳೆ ವಿಶ್ವ ಹಿಂದೂ ಪರಿಷತ್ತಿನ ಪ್ರಾಂತಿಯ ಕಾರ್ಯಕಾರಿಣಿ ಸದಸ್ಯರಾದ ರಾಮಕೃಷ್ಣನ್ ಸಾಳೆ, ವಿಭಾಗ ಕಾರ್ಯದರ್ಶಿ ಅಂಬರೇಶ್

ಸೂಲೆಗಾಂವೆ, ಪ್ರಾಂತ ವಿಶೇಷ ಸಂಪರ್ಕ ಸಹ ಪ್ರಮುಖರಾದ ಸತೀಶ ನೌಬಾದೆ,

ಜಿಲ್ಲಾ ಉಪಾಧ್ಯಕ್ಷ ಸಂಗಮೇಶ ಗಾದಗಿ,

ಭಜರಂಗ ದಳದ ಜಿಲ್ಲಾ ಸಂಯೋಜಕ ಭೀಮಣ್ಣ ಸೊರಳ್ಳಿ, ಜಿಲ್ಲಾ ಸಹ ಕಾರ್ಯದರ್ಶಿ ಬಸವರಾಜ ಯದಲಾಪುರೆ, ಬೀದರ ನಗರಾಧ್ಯಕ್ಷ ವೀರೇಂದ್ರ ಶಾಸ್ತ್ರಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಕರವೇ ಒತ್ತಡಕ್ಕೆ ಮಣಿದ ಅಧಿಕಾರಿಗಳು: ಕನ್ನಡದಲ್ಲಿ ಅರ್ಜಿ ಮುದ್ರಣ ರೈಲ್ವೆ ಟಿಕೆಟ್ ಕಾಯ್ದಿರಿಸುವಿಕೆ ಅರ್ಜಿಯಲ್ಲಿ ಕನ್ನಡ ಕಡೆಗಣನೆಗೆ ಆಕ್ಷೇಪ



ಬೀದರ. ಜೂ. 02 : ರೈಲ್ವೆ ಮುಂಗಡ ಟಿಕೆಟ್ ಕಾಯ್ದಿರಿಸುವಿಕೆ ಅರ್ಜಿಯಲ್ಲಿ ಕನ್ನಡ ಕಡೆಗಣನೆಗೆ ಕರ್ನಾಟಕ ರಕ್ಷಣಾ ವೇದಿಕೆಯ ಪದಾಧಿಕಾರಿಗಳು ಸೋಮವಾರ ಇಲ್ಲಿಯ ರೈಲು ನಿಲ್ದಾಣದಲ್ಲಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

ಟಿಕೆಟ್ ಕಾಯ್ದಿರಿಸುವ ಅರ್ಜಿ ಹಿಡಿದು ಸ್ಟೇಷನ್ ಮಾಸ್ಟರ್ ಬಳಿಗೆ ಹೋದ ಪದಾಧಿಕಾರಿಗಳು, ಅರ್ಜಿಯಲ್ಲಿ ಇಂಗ್ಲಿಷ್, ಹಿಂದಿ, ತೆಲುಗು ಭಾಷೆಗಳಷ್ಟೇ ಇದ್ದು, ಕನ್ನಡವನ್ನು ಕಡೆಗಣಿಸಲಾಗಿದೆ ಎಂದು ಆರೋಪಿಸಿದರು. ಅರ್ಜಿಯ ಪ್ರತಿಗಳನ್ನು ಹರಿದು ಆಕ್ರೋಶ ವ್ಯಕ್ತಪಡಿಸಿದರು.

ಪ್ರಾದೇಶಿಕ ಭಾಷೆಯಲ್ಲಿ ಮುಂಗಡ ಟಿಕೆಟ್ ಅರ್ಜಿಗಳಿರಬೇಕೆಂಬ ಆದೇಶವಿದೆ. ಆದರೆ, ಸ್ಥಳೀಯ ಅಧಿಕಾರಿಗಳು ಕನ್ನಡವನ್ನು ಅಲಕ್ಷಿಸಿರುವುದು ಸರಿಯಲ್ಲ ಎಂದು ವೇದಿಕೆಯ ಜಿಲ್ಲಾ ಘಟಕದ ಅಧ್ಯಕ್ಷ ಸೋಮನಾಥ ಮುಧೋಳ ತೀವ್ರ ಅಸಮಾಧಾನ ಹೊರಹಾಕಿದರು.

ಬಳಿಕ ಅಧಿಕಾರಿಗಳು ಕನ್ನಡದಲ್ಲಿ ಅರ್ಜಿ ಮುದ್ರಿಸಿ, ವೇದಿಕೆಯ ಪದಾಧಿಕಾರಿಗಳ ಕೈಯಿಂದ ಪ್ರಯಾಣಿಕರಿಗೆ ಕೊಡಿಸಿದರು.

ಮುಂಗಡ ಟಿಕೆಟ್ ಕಾಯ್ದಿರಿಸುವ ಅರ್ಜಿ ಹರಿದು ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಹಾಗೂ ಸಂಜೆ ಯಶವಂತಪುರ–ಬೀದರ್ ಎಕ್ಸ್‌ಪ್ರೆಸ್ ರೈಲು ತಡೆದು ಪ್ರತಿಭಟನೆ ನಡೆಸುವ ಎಚ್ಚರಿಕೆ ನೀಡಿದ ಹಿನ್ನೆಲೆಯಲ್ಲಿ ರೈಲ್ವೆ ಅಧಿಕಾರಿಗಳು ತಪ್ಪಾಗಿದೆ ಎಂದು ಒಪ್ಪಿಕೊಂಡು, ಎರಡು ಗಂಟೆಗಳಲ್ಲೇ ಕನ್ನಡದಲ್ಲಿ ಅರ್ಜಿ ಮುದ್ರಿಸಿದ್ದಾರೆ. ಸ್ಟೇಷನ್ ಮಾಸ್ಟರ್ ಒಂದು ತಿಂಗಳಲ್ಲಿ ಕನ್ನಡ ಕಲಿಯುವ ಭರವಸೆ ಕೊಟ್ಟಿದ್ದಾರೆ ಎಂದು ಸೋಮನಾಥ ಮುಧೋಳ ತಿಳಿಸಿದರು.

ರೈಲ್ವೆ ನಿಲ್ದಾಣ ಆವರಣದಲ್ಲಿ ಇರುವ ಅನ್ಯ ಭಾಷೆ ನಾಮಫಲಕಗಳನ್ನು ವಾರದೊಳಗೆ ತೆರವುಗೊಳಿಸಬೇಕು ಎಂದು ಒತ್ತಾಯಿಸಿದರು.

ವೇದಿಕೆಯ ಜಿಲ್ಲಾ ಘಟಕದ ಉಪಾಧ್ಯಕ್ಷರಾದ ಸೋಮಶೇಖರ ಸಜ್ಜನ್, ಉದಯಕುಮಾರ ಅಷ್ಟೂರೆ, ಶಿವರುದ್ರ ಕೀರ್ತಾ, ಮಲ್ಲಿಕಾರ್ಜುನ ಸಿಕೇನಪುರೆ, ಪ್ರಧಾನ ಕಾರ್ಯದರ್ಶಿ ಉದಯಕುಮಾರ ಅಷ್ಟೂರೆ, ಕಾರ್ಯದರ್ಶಿ ಸಚಿನ್ ಬೆನಕನಳ್ಳಿ, ಮುಖಂಡ ವಿನಾಯಕ ರೆಡ್ಡಿ ಬುಧೇರಾ ಇದ್ದರು.

# ನೆಹರೂ ಕ್ರೀಡಾಂಗಣದಲ್ಲಿ ಯೋಗ ಮಾಡಿದ ನೂರಾರು ಜನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 02 : ಇನ್ನೂ ಸೂರ್ಯ ಕಣ್ಣು ಬಿಟ್ಟಿರಲಿಲ್ಲ. ಆದರೆ, ಅಷ್ಟರಲ್ಲಾಗಲೇ ನಗರದ ನೆಹರೂ ಕ್ರೀಡಾಂಗಣದಲ್ಲಿ ಚಲನವಲನ ಆರಂಭಗೊಂಡಿತು. ಮೈಚಳಿ ಬಿಟ್ಟು ಜನ ಶಿಸ್ತಿನಿಂದ ಸಾಲಿನಲ್ಲಿ ಕುಳಿತು, ವಿವಿಧ ಬಗೆಯ ಆಸನಗಳನ್ನು ಮಾಡಿದರು. ಇಂಟರ್‌ನ್ಯಾಷನಲ್ ನ್ಯಾಚುರೋಪಥಿ ಆರ್ಗನೈಜೇಶನ್, ಸೂರ್ಯ ಫೌಂಡೇಷನ್ ಹಾಗೂ ಆಯುಷ್ ಇಲಾಖೆಯ ಮೊರಾರ್ಜಿ ದೇಸಾಯಿ ರಾಷ್ಟ್ರೀಯ ಯೋಗ ಸಂಸ್ಥೆಯ ಸಹಯೋಗದಲ್ಲಿ ನಗರದ ನೆಹರೂ ಕ್ರೀಡಾಂಗಣದಲ್ಲಿ ಭಾನುವಾರ ಬೆಳಿಗ್ಗೆ ವಿಶ್ವ ಯೋಗ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡಿದ್ದ ಯೋಗ ಮಹೋತ್ಸವದಲ್ಲಿ ಕಂಡ ದೃಶ್ಯಗಳಿವು.

ಶಾಲಾ–ಕಾಲೇಜಿನ ವಿದ್ಯಾರ್ಥಿಗಳು, ಮಧ್ಯ ವಯಸ್ಕರು, ಹಿರಿಯರು ಕೂಡ ಭಾಗವಹಿಸಿದರು. ಪತಂಜಲಿ ಯೋಗ ಸಂಸ್ಥೆಯ ಕರ್ನಾಟಕದ ಪ್ರಮುಖ ಭವರಲಾಲ್ ಆರ್ಯ ಯೋಗ ಹೇಳಿಕೊಟ್ಟರು.

ಕೇಂದ್ರ ಸರ್ಕಾರದ ಆಯುಷ್ ಇಲಾಖೆಯ ಆಡಳಿತ ಮಂಡಳಿ ಸದಸ್ಯ ಅನಂತ ಬಿರಾದಾರ ಮಾತನಾಡಿ, ದೈಹಿಕ ಹಾಗೂ ಮಾನಸಿಕ ಆರೋಗ್ಯಕ್ಕೆ ಯೋಗ ಅತ್ಯಂತ ಸಹಕಾರಿ. ಎಲ್ಲರೂ ನಿತ್ಯ ಯೋಗ ಮಾಡಿ ಆರೋಗ್ಯ ಕಾಪಾಡಿಕೊಳ್ಳಬೇಕು. ಯೋಗ ಹಾಗೂ ಪ್ರಾಕೃತಿಕ ಚಿಕಿತ್ಸಾ ಪದ್ದತಿ ಬಗ್ಗೆ ಜನರಿಗೆ ಆರೋಗ್ಯಕರ ಜೀವನ ನಡೆಸಲು ಅನೇಕ ಜಾಗೃತಿ ಕಾರ್ಯಗಳನ್ನು ಮಾಡಲಾಗುತ್ತಿದೆ. ಇದರಲ್ಲಿ ಈ ಯೋಗ ಮಹೋತ್ಸವ ಕಾರ್ಯಕ್ರಮ ಪ್ರಮುಖವಾಗಿದೆ ಎಂದರು. ಭಾಲ್ಕಿ ಹಿರೇಮಠ ಸಂಸ್ಥಾನದ ಗುರುಬಸವ ಪಟ್ಟದ್ದೇವರು ಮಾತನಾಡಿ, ರೋಗ ಮುಕ್ತ, ಸ್ವಸ್ಥ–ಸುಸ್ಥಿರ ಹಾಗೂ ಸಶಕ್ತ ಸಮಾಜ ನಿರ್ಮಾಣಕ್ಕೆ ಯೋಗ ಪ್ರತಿಯೊಬ್ಬರಿಗೂ ಅತ್ಯವಶ್ಯಕ. ವಿಶ್ವದ ಅನೇಕ ರಾಷ್ಟ್ರಗಳು ಯೋಗದ ಮೊರೆ ಹೋಗುತ್ತಿವೆ. ಇದಕ್ಕೆ ಭಾರತದ ಕೊಡುಗೆ ಅಪಾರವಾದುದು. ಕಾಯಕದ ಜೊತೆಗೆ ಯೋಗ, ಧ್ಯಾನ, ಭಜನೆ ಮಾಡಬೇಕು ಎಂದು ತಿಳಿಸಿದರು. ಚಿದಂಬರಾಶ್ರಮದ ಶಿವಕುಮಾರ ಸ್ವಾಮೀಜಿ ಮಾತನಾಡಿ, ಯೋಗವು ದೇಹದಲ್ಲಿ ರೋಗ ನಿರೋಧಕ ಶಕ್ತಿ ಹೆಚ್ಚಿಸಲು ನೆರವಾಗುತ್ತದೆ ನಮಲ್ಲಿ ಕಾಣಿಸಿಕೊಳ್ಳುವ ಅನೇಕ ರೋಗಗಳಿಗೆ ಪರಿಹಾರ ಸಿಗುತ್ತದೆ. ಯೋಗ ಹಾಗೂ ಪ್ರಾಕೃತಿಕ ಚಿಕಿತ್ಸೆಯಿಂದ ಇದು ಸಾಧ್ಯ. ಆಧುನಿಕ ಒತ್ತಡದ ಬದುಕಿನಲ್ಲಿ ಬಹುತೇಕರಿಗೆ ಜೀವನವೇ ಸಾಕು ಎಂಬ ಭಾವ ಮೂಡುತ್ತಿದೆ. ಯೋಗ ಈ ಎಲ್ಲ ಒತ್ತಡಗಳನ್ನು ತಡೆದು ಮನಸ್ಸು ಪ್ರಶಾಂತಗೊಳಿಸುತ್ತದೆ ಎಂದು ಹೇಳಿದರು.


ಭವರಲಾಲ್ ಆರ್ಯ ಅವರಿಗೆ 'ಯೋಗರತ್ನ' ಪ್ರಶಸ್ತಿ ಪ್ರದಾನ ಮಾಡಲಾಯಿತು. ದೆಹಲಿಯ ತ್ರಿಭುವನ್ ಸಿಂಗ್ ಅವರು ಕೊಳಲು ವಾದನ, ಸಿದ್ದರಾಮೇಶ್ವರ ಆಯುರ್ವೇದ ಮೆಡಿಕಲ್ ಕಾಲೇಜು, ಅನುಭವ ಮಂಟಪ ಸಾಂಸ್ಕೃತಿಕ ವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ಹುಮನಾಬಾದ ಯೋಗ ಶಿಕ್ಷಕ ಆನಂದ ಹಾಗೂ ಈಶಾನಿ ಮುಚಳಂಬೆ ಅವರು ಯೋಗ ಪ್ರದರ್ಶನ ಎಲ್ಲರ ಗಮನ ಸೆಳೆಯಿತು. ಬೆಂಗಳೂರಿನ ಆರ್ಟ್ ಆಫ್ ಲಿವಿಂಗ್ ಋಷಿ ದೇವವ್ರತ, ಶಂಕರಲಿಂಗ ಸ್ವಾಮೀಜಿ, ಶಾಸಕರಾದ ಡಾ.ಶೈಲೇಂದ್ರ ಕೆ. ಬೆಲ್ದಾಳೆ, ಎಮ್.ಜಿ ಮುಳೆ, ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಸೋಮನಾಥ ಪಾಟೀಲ, ಐಎನ್‌ಓ ರಾಜ್ಯ ಸಂಚಾಲಕ ಗುರುನಾಥ ರಾಜಗೀರಾ, ರಾಜ್ಯ ಕಾರ್ಯದರ್ಶಿ ಯೋಗೇಂದ್ರ ಯದಲಾಪುರೆ, ಜಿಲ್ಲಾಧ್ಯಕ್ಷ ಗೋರಖನಾಥ ಕುಂಬಾರ, ಪ್ರಧಾನ ಕಾರ್ಯದರ್ಶಿ ಸಂತೋಷ ಪಾಟೀಲ, ಸಂಚಾಲಕಿ ಮಂಜುಳಾ ಮುಚಳಂಬೆ, ಬಾಬು ವಾಲಿ, ಪೂರ್ಣಿಮಾ ಜಿ., ರೂಪೇಶ ಎಕಲಾರಕರ್, ಚಂದ್ರಕಾಂತ ಹಳ್ಳಿ ಮತ್ತಿತರರು ಪಾಲ್ಗೊಂಡಿದ್ದರು.

# ಸಿದ್ದರಾಮಯ್ಯ ಗ್ಯಾರಂಟಿ ಹಾಗೂ ಅಪ್ಪ ಮಕ್ಕಳ ಗ್ಯಾರೆಂಟಿ ಮುಗಿತು 28ಕ್ಕೆ ನಾನೆ ಗ್ಯಾರೆಂಟಿ : ಬಸನಗೌಡ ಯತ್ನಾಳ್



ಅಫಜಲಪೂರ:ಜೂ.2:ರಾಜ್ಯದಲ್ಲಿ ಸಿದ್ರಾಮಯ್ಯ ಸರ್ಕಾರದ ಗ್ಯಾ–ರೆಂಟಿ ಹಾಗೂ ಅಪ್ಪ ಮಕ್ಕಳ ಗ್ಯಾರೆಂಟಿ ಮುಗಿತು ಇನ್ನೇನಿದ್ದರೂ ಮುಂದಿನ ಸರ್ಕಾರದ ವಾರಂಟಿ ಗ್ಯಾರಂಟಿ ಅದು ಯತ್ನಾಳ್ ಮಾತ್ರ ಎಂದು ಬಸವನಗೌಡ ಪಾಟೀಲ್ ಯತ್ನಾಳ್ ಹೇಳಿದರು. ಮಾಶಾಳದಲ್ಲಿ ಧರ್ಮ ಜಾಗೃತಿ ಸಮಾವೇಶ ಹಾಗೂ ಮರುಳಾರಾಧ್ಯ ಶ್ರೀಗಳ ಗುರುವಂದನಾ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು ರಾಜ್ಯ ಸರ್ಕಾರದ ವಿರುದ್ಧ ಹಿಗ್ಗಾ ಮುಗ್ಗಾ ವಾಗ್ದಾಳಿ ನಡೆಸಿದರು. ಸಿದ್ದರಾಮಯ್ಯ ಸರ್ಕಾರ ಗಲಭೆಕೊರರ ಮೇಲಿನ ಕೇಸ್ ವಾಪಾಸ ಪಡೆಯುತ್ತೆ ಇದಕ್ಕಿಂತ ನಾಚಿಕೆಗೇಡಿನ ಕೆಲಸ ಯಾವ ಸರ್ಕಾರ ಮಾಡಿಲ್ಲ ಎಂದರು, ಸಮಾಜದಲ್ಲಿ ಕೆಲಒಂದಿಷ್ಟು ಸ್ವಾಮಿಗಳು ಧರ್ಮ ರಕ್ಷಣೆ ಮಾಡುತ್ತಿಲ್ಲ, ಕೇವಲ ಅವರು ತಮ್ಮ ಸ್ವಾರ್ಥಕ್ಕಾಗಿ ಕಾವಿ ಹಾಕೊಂಡು ಪೋಸ್ ಕೊಡ್ತಿದ್ದಾರೆ ಎಂದು ನಿಜಗುಣ ಸ್ವಾಮೀಜಿಗೆ ನೇರವಾಗಿ ಟಾಂಗ್ ಕೊಟ್ಟರು, ಕಾಂಗ್ರೇಸ್ ಸರಕಾರದಲ್ಲಿ ಗುಂಡಾ, ನಾಲಾಯಕ್, ಹಾಗೂ ಕಿಡಿಗೇಡಿಗಳಿಗೆ ರಕ್ಷಣೆ ಸಿಗುತ್ತಿದೆ ಇದಕ್ಕೆ ಸರ್ಕಾರ ಕಾರಣ, ಮುಂದಿನ ದಿನಗಳಲ್ಲಿ ನನ್ನ ಸರ್ಕಾರ ಬರಲಿ ನಿಮ್ಮನ್ನ ಮಟ್ಟ ಹಾಕುವ ಕೆಲಸ ಮಾಡುತ್ತೇನೆ ಎಂದರು. ಬಾಬಾ ಸಾಹೇಬ ಅಂಬೇಡ್ಕರ್ ಅವರ ಸಂವಿಧಾನ ಗಟ್ಟಿಯಾಗಿ ನಮ್ಮ ದೇಶದಲ್ಲಿ ಜಾರಿಯಲ್ಲಿ ಇದ್ದಿದ್ದಕೆ ನಾವು ಇವತ್ತು ಯಾವುದೇ ತೊಂದರೆ ಇಲ್ಲದೆ ಬದುಕುತಿದ್ದೇವೆ ಎಂದರು. ಅಷ್ಟೇ ಅಲ್ಲದೆ ಕಲಬುರಗಿಯಲ್ಲಿಯೂ ಕೆಲ ಬಿಜೆಪಿ ನಾಯಕರು ಕಾಂಗ್ರೇಸ್ ಜೊತೆಗೆ ಹೊಂದಾಣಿಕೆ ರಾಜಕಾರಣ ಮಾಡುತ್ತಿದ್ದಾರೆ ಇದು ಮುಂದಿನ ದಿನಗಳಲ್ಲಿ ಬಂಡವಾಳ ಬಯಲಾಗುತ್ತೆ ಎಂದು ಸ್ಥಳೀಯ ಬಿಜೆಪಿ ನಾಯಕರ ವಿರುದ್ಧ ಹರಿಹಾಯ್ದರು. ನಂತರ ಮಾತನಾಡಿದ ಶಿದ್ದಲಿಂಗ ಸ್ವಾಮೀಜಿ, ನಮ್ಮ ಕಲಬುರಗಿ ಯಾರ ಸ್ವತ್ತು ಅಲ್ಲ, ಕಾಂಗ್ರೇಸ್ ಗುಂಡಾಗಳು ಅತಿಯಾಗಿ ಬಾಲ ಬಿಚ್ಚಿದರೆ ಅದಕ್ಕೆ ಬಾಬಾಸಾಹೇಬ ಅಂಬೇಡ್ಕರ್ ಅವರ ಸಂವಿಧಾನದ ಮೂಲಕ ನಿಮಗೆ ತಿರುಗೇಟು ನೀಡುತ್ತೇವೆ, ಧರ್ಮ ರಕ್ಷಣೆಗೆ ನಾವು ಎಷ್ಟೇ ಕೇಸ್ ಬಿದ್ದರು ಎದುರಿಸಲು ಬದ್ಧ ಎಂದರು.

## ಡಿಎಪಿ ರಸಗೊಬ್ಬರಗಳನ್ನು ಒದಗಿಸುವಂತೆ ಜಯ ಕರ್ನಾಟಕ ಸಂಘಟನೆ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಗುರುಮಟ್ಕಲ್:ತಾಲೂಕಿನರೈತರಿಗೆ ಡಿಎಪಿ, ಸ್ಪಿಕ್ ರಸಗೊಬ್ಬರಗಳು ಸಿಗದೇ ದಿನನಿತ್ಯ ಅಂಗಡಿಗಳ ಸುತ್ತಲೂ ಅಲೆದಾಡುತ್ತಿದ್ದಾರೆ ಈ ಕೂಡಲೇ ರೈತರ ಬೇಡಿಕೆಗೆ ಅನುಗುಣವಾಗಿ ಸ್ಪಿಕ್, ಡಿಎಪಿ ರಸಗೊಬ್ಬರಗಳನ್ನುಒದಗಿಸುವಂತೆ ಜಯ ಕರ್ನಾಟಕ ಸಂಘಟನೆಯ ತಾಲೂಕ ಘಟಕ ಇಂದು ಜೂ 2 ತಹಶೀಲ್ದಾರರು ಗುರುಮಠಕಲ್ ರವರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು, ಬಳಿಕ ಜಯ ಕರ್ನಾಟಕ ಸಂಘಟನೆಯ ತಾಲೂಕ ಅಧ್ಯಕ್ಷರಾದ ನಾಗೇಶ್ ಗದ್ದಿಗಿ ರವರು ಮಾತನಾಡಿ ನಮ್ಮ ತಾಲ್ಲೂಕಿನ ರೈತರಿಗೆ ಪ್ರತಿ ಬಾರಿಯೂ ಯಾವುದೇ ಒಂದು ರೀತಿಯ ಸಮಸ್ಯೆ ಉಂಟಾಗುತ್ತಿದ್ದು ಅದರಂತೆ-ಯೇ ಈ ಬಾರಿಯೂ ಬೇಡಿಕೆಗೆ ಅನುಗುಣವಾಗಿ ರಸಗೊಬ್ಬರ ಸಿಗದೆ ರೈತರು ಬೇರೆ ರಾಜ್ಯಗಳತ್ತ ಮುಖ ಮಾಡಿದ್ದಾರೆ ಇಲ್ಲಿನ ರಸಗೊಬ್ಬರ ಅಂಗಡಿಗಳ ಮಾಲೀಕರು ಮೇಲಿಂದಾನೆ ನಮಗೆ ದಾಸ್ತಾನು ಬರ್ತಾ ಇಲ್ಲ ಎಂದು ಸಬೂಬು ಹೇಳುತ್ತಿದ್ದು ದಾಸ್ತಾನು ಇದ್ದರೂ ಸಹ ರಸಗೊಬ್ಬರ ಅಭಾವ ಸೃಷ್ಟಿಸಿ ಹೆಚ್ಚಿನ ಬೆಲೆಗೆ ಒಳಒಳಗೆ ಕೊಡುತ್ತಿದ್ದಾರೆ ಎಂದು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ ಆದಕಾರಣ ಈ ಕೂಡಲೇ ರೈತರಿಗೆ ಬೇಡಿಕೆಗೆ ಅನುಗುಣವಾಗಿ ಗೊಬ್ಬರವನ್ನು ಪೂರೈಕೆ ಮಾಡಬೇಕು ದಾಸ್ತಾನು ಇದ್ದರೂ ಸಹ ರೈತರಿಗೆ ಪೂರೈಕೆ ಮಾಡದೆ ನಿಗದಿತ ದರಕ್ಕಿಂತ ಹೆಚ್ಚುವರಿ ಪಡೆದು ನೀಡುತ್ತಿರುವ ಅಂಗಡಿಗಳ ಮೇಲೆ ನಿಗಾವಹಿಸಿ ಕ್ರಮ ಜರುಗಿಸಬೇಕು.ಈ ಕೂಡಲೇ ರೈತರಿಗೆ ಸಾಕಾಗುವಷ್ಟು ಬೇಡಿಕೆ ಇರುವ ರಸಗೊಬ್ಬರವನ್ನು ಒದಗಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ತಾಲೂಕ ಉಪಾಧ್ಯಕ್ಷ ಕಾಶಪ್ಪ ಬೋಯಾ, ಗೋಪಾಲಕೃಷ್ಣ ಮೇಧಾ, ರಾಮುಲು ಕೊಡಗಂಟಿ, ರವಿ ವಾರದ್, ರವಿ ಬೆಟ್ಟದಲ್ಲಿ, ಧಾನಿಯಲ್ ಚಿಂತನಹಳ್ಳಿ, ಜಗಪ್ಪ ಸೇರಿದಂತೆ ಇನ್ನೂ ಹಲವಾರು ರೈತ ಮುಖಂಡರು ಹಾಗೂ ಕಾರ್ಯಕರ್ತರು ಮತ್ತು ಪದಾಧಿಕಾರಿಗಳು ಪಾಲ್ಗೊಂಡಿದ್ದರು.

## ವಿಶ್ವ ತಂಬಾಕು ರಹಿತ ದಿನಾಚರಣೆ : ಯುವಕರು ಉತ್ತಮ ಆರೋಗ್ಯಕರ ಚಟುವಟಿಕೆಯಲ್ಲಿ ತೊಡಗಿ ಸಮಾಜಕ್ಕೆ ತಮ್ಮ ಕೊಡುಗೆ ನೀಡಲು ಸಲಹೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 2-ಯುವಕರು ಉತ್ತಮ ಆರೋಗ್ಯಕರ ಚಟುವಟಿಕೆಯಲ್ಲಿ ತೊಡಗಿ ಸಮಾಜಕ್ಕೆ ತಮ್ಮ ಕೊಡುಗೆ ನೀಡಬೇಕು ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಮರಿಯಪ್ಪ ಅವರು ಸಲಹೆ ನೀಡಿದರು.

ಯಾದಗಿರಿ ನಗರದ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಇತ್ತೀಚಿನ ನಡೆದ ವಿಶ್ವ ತಂಬಾಕು ರಹಿತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಮತ್ತು ವಿಶೇಷವಾಗಿ ಯುವಜನರು ಹೆಚ್ಚಾಗಿ ತಂಬಾಕು ಚಟ-ಕ್ಕೆ ತುತ್ತಾಗುತ್ತಿರುವುದಕ್ಕೆ ವಿಷಾದ ವ್ಯಕ್ತ ಪಡಿಸಿದರು ಹಾಗೂ ಯುವಕರು ಉತ್ತಮ ಆರೋಗ್ಯಕರ ಚಟುವಟಿಕೆಯಲ್ಲಿ ತೊಡಗಿ ಸಮಾಜಕ್ಕೆ ತಮ್ಮ ಕೊಡುಗೆ ನೀಡಬೇಕೆಂದು ಸಲಹೆ ನೀಡಿದರು.




ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳು ಹಾಗೂ ಜಿಲ್ಲಾ ಮಲೇರಿಯಾ ಅಧಿಕಾರಿ ಡಾ.ಮುಬಾಶೀರ್ ಅಹ್ಮದ್ ಸಾಜೀದ್ ಅವರು ಮಾತನಾಡಿ, ತಂಬಾಕು ಸೇವನೆಯಿಂದ ಕ್ಯಾನ್ಸರ್, ಗ್ಯಾಂಗ್ರೀನ್, ಬಿಪಿ, ಸುಗರ್, ಟಿ.ಬಿ. ತಲೆ ಕೂದಲು ಉದುರುವಿಕೆ, ಅವಧಿ ಪೂರ್ವ ಮಗುವಿನ ಜನನ ಮುಂತಾದ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ ಎಂದು ತಿಳಿಸಿದರು.

ಜಿಲ್ಲಾ ಸಲಹೆಗಾರರಾದ ಶ್ರೀಮತಿ ಮಹಾಲಕ್ಷ್ಮೀ ಸಜ್ಜನ್ ಅವರು ಮಾತನಾಡಿ, ಧ್ಯೇಯ ವಾಕ್ಯ ಆಕರ್ಷಕ ಉತ್ಪನ್ನಗಳು, ಕರಾಳ ಉದ್ದೇಶಗಳು, ತಂಬಾಕು ಮತ್ತು ನಿಕೋಟಿನ್ ಉತ್ಪನ್ನಗಳ ಆಕರ್ಷಣೆಯನ್ನು ಬಹಿರಂಗ ಪಡಿಸುವುದರ ಕುರಿತು ತಿಳಿಸಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದಡಿಯಲ್ಲಿ ಇರುವ ತಂಬಾಕು ವ್ಯಸನ ಮುಕ್ತ ಕೇಂದ್ರದಲ್ಲಿ ಸಿಗುವ ಸೌಲಭ್ಯಗಳನ್ನು ಸದುಪಯೋಗ ಪಡೆದುಕೊಳ್ಳಬೇಕೆಂದು ಮತ್ತು ನಿಕೋಟಿನ್ ಮಾತ್ರೆಗಳನ್ನು ಉಚಿತವಾಗಿ ಸಿಗುವ ಕುರಿತು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಯಾದಗಿರಿ ಜೆ.ಎಂ.ಎಫ್.ಸಿ. ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಶ್ರೀ ರಾಹುಲ್ ಚಂಬಾರ್, ಯಾದಗಿರಿ ಜಿಲ್ಲಾ ವಕೀಲರ ಸಂಘ ಅಧ್ಯಕ್ಷರು ಶ್ರೀ ಸಿ.ಎಸ್. ಮಾಲಿಪಾಟೀಲ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಯವರಾದ ಡಾ.ಮಹೇಶ ಬಿರಾದಾರ್, ಸಮಾಜ ಕಾರ್ಯಕರ್ತರಾದ ಶ್ರೀ ವಿಜಯ ಕುಮಾರ, ಯಾದಗಿರಿ ಜಿಲ್ಲಾ ಸರ್ವೇಕ್ಷಣಾ ಅಧಿಕಾರಿಗಳು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ಕಾನೂನು ತರಬೇತಿ ಭತ್ಯೆ ನೀಡಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 2-: 2025-26ನೇ ಸಾಲಿನ ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ಕಾನೂನು ತರಬೇತಿ ಭತ್ಯೆ ನೀಡಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಎಂದು ಯಾದಗಿರಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸದಾಶಿವ ಎಂ.ನಾರಾಯಣಕರ್ ಅವರು ತಿಳಿಸಿದ್ದಾರೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಕೀಲರಿಗೆ ಪ್ರೋತ್ಸಾಹ ಧನ ಕಾರ್ಯಕ್ರಮದಡಿ ಅರ್ಹ ಕಾನೂನು ಪದವೀಧರ ಅಭ್ಯರ್ಥಿಗಳಿಂದ ಈ ಕೆಳಗಿನ ನಿಬಂಧನೆಗೊಳಪಟ್ಟು ಅರ್ಜಿ ಆಹ್ವಾನಿಸಿದೆ.

ನಿಬಂಧನೆಗಳು : ಹಿಂದುಳಿದ ವರ್ಗಗಳ ಪ್ರವರ್ಗ-1ರಲ್ಲಿ ಬರುವ ಸಮುದಾಯದ ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯವು 3.50 ಲಕ್ಷ ರೂ.ಗಳ ಒಳಗಿರಬೇಕು, ಪ್ರವರ್ಗ-2ಎ, 3ಎ, ಎಬಿ ಅಭ್ಯರ್ಥಿಗಳಿಗೆ 2.50 ಲಕ್ಷ ರೂ.ಗಳ ಆದಾಯ ಮಿತಿ ನಿಗದಿಪಡಿಸಲಾಗಿದೆ. ಅಭ್ಯರ್ಥಿ ಬಾರ್ ಕೌನ್ಸಿಲ್‌ನಲ್ಲಿ ಹೆಸರು ನೊಂದಾಯಿಸಿರಬೇಕು, ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕಡೆಯ ದಿನಾಂಕಕ್ಕೆ ಅಭ್ಯರ್ಥಿಯ ವಯಸ್ಸು ಪ್ರವರ್ಗ 1ರ ಅಭ್ಯರ್ಥಿಗಳಿಗೆ 40 ವರ್ಷ ಒಳಗಿರಬೇಕು.

ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ 38 ವರ್ಷ ಒಳಗಿರಬೇಕು, ಅಭ್ಯರ್ಥಿಯ ಅಂಗೀಕೃತ ವಿಶ್ವವಿದ್ಯಾಲಯದಿಂದ ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು, ತರಬೇತಿ ಅವಧಿ ನಾಲ್ಕು ವರ್ಷ ಇರುತ್ತದೆ. ಪ್ರತಿ ಅಭ್ಯರ್ಥಿಗೆ ಮಾಹೆಯಾನ 4000 ರೂ.ಗಳ ದಂತೆ ತರಬೇತಿ ಭತ್ಯೆ ನೀಡಲಾಗುವುದು. ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅರ್ಜಿ ಭರ್ತಿಮಾಡಿ 2025ರ ಜೂನ್ 16ರ ಒಳಗೆ ನಂತರ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಕಛೇರಿ ದೂ.ಸಂ.08473253742ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯು.ಪಿ.ಎಸ್.ಸಿ ನಾಗರಿಕರ ಸೇವೆ ಮತ್ತು ಬ್ಯಾಂಕಿಂಗ್ ಪಿ.ಓ ಸ್ಪರ್ಧಾತ್ಮಕ ಪರೀಕ್ಷೆಗಳ ಪೂರ್ವ ತರಬೇತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 2, : ಯು.ಪಿ.ಎಸ್.ಸಿ ನಾಗರಿಕರ ಸೇವೆ ಮತ್ತು ಬ್ಯಾಂಕಿಂಗ್ ಪಿ.ಓ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿನ ಉಚಿತ ಪರೀಕ್ಷಾ ಪೂರ್ವ ತರಬೇತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸದಾಶಿವ ಎಂ.ನಾರಾಯಣಕರ್ ಅವರು ತಿಳಿಸಿದ್ದಾರೆ.

ಅರ್ಹತೆ ಮತ್ತು ಸೂಚನೆಗಳು : ಅಂಗೀಕೃತ ವಿಶ್ವವಿದ್ಯಾಲಯದಿಂದ ಯಾವುದಾದರೊಂದು ಪದವಿ ಪಡೆದಿರಬೇಕು, ಅಭ್ಯರ್ಥಿಯು ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ), ಅಥವಾ 3(ಬಿ)ಗೆ ಸೇರಿರಬೇಕು, ಅಭ್ಯರ್ಥಿಯ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ ಪ್ರವರ್ಗ-1, ಪ್ರವರ್ಗ 2(ಎ), 3(ಎ) ಮತ್ತು 3(ಎ)ಗಳಿಗೆ 5 ಲಕ್ಷ ರೂ.ಗಳ ಒಳಗಿರಬೇಕು, ಅಭ್ಯರ್ಥಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಕೆಇಎರವರು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಗಳಲ್ಲಿ ಗಳಿಸಿದ ಅಂಕಗಳು, ಪ್ರವರ್ಗ ಹಾಗೂ ಮೀಸಲಾತಿ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಪರೀಕ್ಷಾ ಕೇಂದ್ರಗಳು ದಿನಾಂಕ ಮತ್ತು ಸಮಯವನ್ನು ನಂತರದ ದಿನಗಳಲ್ಲಿ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಯು.ಪಿ.ಎಸ್.ಸಿ ನಾಗರಿಕರ ಸೇವೆ ಮತ್ತು ಬ್ಯಾಂಕಿಂಗ್ ಪಿ.ಓ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿನಲ್ಲಿ ಉಚಿತ ಪರೀಕ್ಷಾ ಪೂರ್ವ ತರಬೇತಿ ನೀಡುತ್ತಿದ್ದು, ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ), ಹಾಗೂ 3(ಬಿ) ಗಳಿಗೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಯನ್ನು 2025ರ ಜೂನ್ 15ರ ಒಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ bcwd.karnataka.gov.in, sevasindhuservices.karnataka.gov.inನಲ್ಲಿ ಅಥವಾ ಸಹಾಯವಾಣಿ ಸಂ.8050370006 ಕಚೇರಿ ಸಮಯದಲ್ಲಿ ಬೆಳಿಗ್ಗೆ 10 ರಿಂದ ಸಂಜೆ 5.30 ಗಂಟೆಯ ವರೆಗೆ ರಜಾ ದಿನಗಳನ್ನು ಹೊರತು ಪಡಿಸಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜದಲ್ಲಿ ಒಗ್ಗಟ್ಟು, ಪ್ರತಿಭೆಗಳಿಗೆ ಪ್ರೋತ್ಸಾಹ ಅಗತ್ಯ : ಸಚಿವ ದರ್ಶನಾಪೂರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸ್ಪರ್ಧಾತ್ಮಕ ಯುಗದಲ್ಲಿ ನಾಡಿನಲ್ಲಿ ಎಲ್ಲಾ ಸಮಾಜದ ಜನರು ಒಗ್ಗಟ್ಟಾಗುತ್ತಿದ್ದಾರೆ, ಅದರಂತೆ ಐತಿಹಾಸಿಕ ಹಿನ್ನೆಲೆ ಹೊಂದಿದ ಸಮಾಜದ ಜನರು ಒಗ್ಗಟ್ಟಾಗಿ ನಮ್ಮಲ್ಲಿರುವ ಹಲವಾರು ಪ್ರತಿಭೆಗಳಿಗೆ ಸಹಾಯ, ಸಹಕಾರ, ಪ್ರೋತ್ಸಾಹ ನೀಡಬೇಕು, ಅಂ-ದಾಗ ಮಾತ್ರ ಅವರು ಬರುವ ದಿನಗಳಲ್ಲಿ ಹಲವಾರು ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿ, ಆ ಕ್ಷೇತ್ರಗಳಿಗೆ ಹಾಗೂ ಸಮಾಜಕ್ಕೆ ಒಳ್ಳೇಯ ಕೀರ್ತಿ ತರುತ್ತಾರೆ ಎಂದು ರಾಜ್ಯ ಸಣ್ಣ ಕೈಗಾರಿಕೆ ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪಗೌಡ ದರ್ಶನಾಪೂರ ಹೇಳಿದರು.

ಇಲ್ಲಿಗೆ ಸಮೀಪದ ಕಲಬುರಗಿ ನಗರದ ಖೂಬಾ ಕಲ್ಯಾಣ ಮಂಟಪದಲ್ಲಿ ಜಿಲ್ಲಾ ರಡ್ಡಿ ಸಮಾಜ ಹಮ್ಮಿಕೊಂಡಿದ್ದ ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮನವರ 603ನೇ ಜಯಂತ್ಯೋತ್ಸವ ಮತ್ತು ಸಮಾಜದ ನೂತನ ಜಿಲ್ಲಾಧ್ಯಕ್ಷರ ಪದಗ್ರಹಣ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಈ ಹಿಂದೆ 2016ರಲ್ಲಿ ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮನವರ ಸಂದೇಶಗಳನ್ನು ಜನರಿಗೆ ತಲುಪಬೇಕು, ಹಾಗೂ ಸಮಾಜ ಸಂಘಟನೆಯಾಗಬೇಕು ಎಂಬ ದೃಷ್ಟಿಕೋನದಿಂದ ಶ್ರೀಶೈಲಂ ಜಗದ್ಗುರುಗಳಾದ ಡಾ, ಚನ್ನಸಿದ್ದರಾಮ ಪಂಡಿತಾರಾಧ್ಯ ಮಹಾಸ್ವಾಮಿಜಿ, ನಿವೃತ್ತ ನ್ಯಾಯಮೂರ್ತಿ ಶಿವರಾಜ ಪಾಟೀಲ್, ಲಿಂ ಲಿಂಗನಗೌಡ ಮಲ್ಹಾರ ಹಾಗೂ ಇತರ ನಾಯಕರು ಮಲ್ಲಮ್ಮಳ ಚೈತನ್ಯ ರಥಯಾತ್ರೆ ರಾಜ್ಯದ ತುಂಬೆಲ್ಲ ಸಂಚಾರ ಮಾಡಿದ ನಂತರ ಜನರಲ್ಲಿ ಜಾಗೃತಿ ಮೂಡಿ, ಒಗ್ಗಟ್ಟಾಗಿ ಕೂಡಲಸಂಗಮದಲ್ಲಿ ಬೃಹತ್ ರಾಜ್ಯಮಟ್ಟದ ರಡ್ಡಿ ಸಮಾವೇಶ ಹಮ್ಮಿಕೊಳ್ಳಲಾಯಿತು, ಇದರಿಂದ ಹಲವಾರು ಬದಲಾವಣೆಗಳನ್ನು ನಾವೆಲ್ಲರೂ ಕಂಡಿದ್ದೇವೆ ಎಂದು ತಿಳಿಸಿದರು,

ರಾಜ್ಯದಲ್ಲಿ ಸಮಾಜದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಕೃಷಿಯನ್ನೆ ಅವಲಂಬಿಸಿ, ಜೀವನ ಸಾಗಿಸುತ್ತಿದ್ದಾರೆ, ಸಾಕಷ್ಟು ಸಂಖ್ಯೆಯಲ್ಲಿ ಬಡವರಿದ್ದಾರೆ, ಅವರ ಮಕ್ಕಳ ಶೈಕ್ಷಣಿಕ ಪ್ರಗತಿಗೆ ನಾವೂ ಸಹಾಯ ಮಾಡುವುದು ಅವಶ್ಯಕವಾಗಿದೆ, ಈ ಹಿನ್ನೆಲೆ ಇಟ್ಟುಕೊಂಡೆ ಈಗಾಗಲೇ ಕಲಬುರಗಿಯಲ್ಲಿ ಗ್ರಾಮೀಣ ಭಾಗದ ಮಹಿಳಾ ವಿಧ್ಯಾರ್ಥಿನಿಯರು ಉನ್ನತ ಅಭ್ಯಾಸ ಮಾಡಲು ಅನುಕೂಲವಾಗಲು ವಸತಿ ನಿಲಯ ಆರಂಭಿಸಲಾಗಿದೆ, ಬರುವ ದಿನಗಳಲ್ಲಿ ಮಲ್ಲಮ್ಮಳ ದೇವಸ್ಥಾನ, ಕಲ್ಯಾಣ ಮಂಟಪ ನಿರ್ಮಾಣ ಮಾಡಲು ಗಮನ ಹರಿಸಲಾಗುವುದು ಎಂದರು, ನೂತನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸಾಮರಸ್ಯದಿಂದ ಪ್ರಗತಿಪರ ಯೋಜನೆಗಳನ್ನು ಜಾರಿಗೆ ತರಲು ಪ್ರಯತ್ನಿಸಿ, ಸಮಾಜಕ್ಕೆ ಒಳಿತನ್ನು ಮಾಡಿ ಎಂದು ಸಲಹೆ ನೀಡಿದರು.

ಯಾದಗಿರಿ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ ಮಾತನಾಡಿ, ನಾವೂ ಕೂಡ ಜಿಲ್ಲಾ ಕೇಂದ್ರದಲ್ಲಿ ವಿಧ್ಯಾರ್ಥಿನಿಯರಿಗೆ ಅಭ್ಯಾಸಕ್ಕೆ ಅನುಕೂಲವಾಗಲು ವಸತಿ ನಿಲಯ ನಿರ್ಮಾಣ ಮಾಡುವ ದೃಷ್ಟಿಯಿಂದ ನಿವೇಶನ ಗುರುತಿಸಲಾಗಿದೆ, ಎಲ್ಲರ ಸಹಕಾರದಿಂದ ಸಮಾಜಮುಖಿ ಕಾರ್ಯಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಮಾಜದ ನೂತನ ಅಧ್ಯಕ್ಷಡಾ.ಶರಣಬಸಪ್ಪ ಕಾಮರಡ್ಡಿ ಬೆಂಡೆಬೆಂಬಳಿ ಮಾತನಾಡಿ, ನಾವೂ ಮೊದಲು ಕ್ರೀಯಾಶೀಲ ತಂಡ ರಚನೆ ಮಾಡಿಕೊಂಡು ಯುವಕರನ್ನು-ಮಹಿಳೆರನ್ನು ಹೆಚ್ಚಿನ ಸಂಖ್ಯೆಯಲ್ಲಿ ಸೇರಿಸಿಕೊಂಡು ಸಮಾಜದ ವಿದ್ಯಾರ್ಥಿಗಳಿಗೆ ಮೊದಲು ಸ್ಪರ್ಧಾತ್ಮಕ ಕೆಎಎಸ್, ಐಎಎಸ್ ಇನ್ನಿತರ ಪರೀಕ್ಷೆಗಳನ್ನು ಎದುರಸಿಲು ಅವರಿಗಾಗಿ ಉಚಿತ ತರಬೇತಿ ಕೇಂದ್ರಗಳನ್ನು ಆರಂಭಿಸಲಾಗುವುದು ಎಂದು ತಿಳಿಸಿದರು.

ಎಲ್ಲಾ ಭಾಗದಲ್ಲಿ ಬೃಹತ್ ಆರೋಗ್ಯ ಶಿಬಿರಗಳನ್ನು ಹಮ್ಮಿಕೊಳ್ಳುವ ಮೂಲಕ ಎಲ್ಲಾ ವರ್ಗದ ಜನರು ಆರೋಗ್ಯದಿಂದ ಬಾಳುವಂತ ವಾತಾವರಣ ನಿರ್ಮಾಣಕ್ಕೆ ಯತ್ನಿಸಲಾಗುವುದು, ನಮ್ಮ ಸಮಾಜ ಇಂದು ರಾಜಕೀಯವಾಗಿ ಬಲಿಷ್ಟವಾಗುವುದು ಅಗತ್ಯವಾಗಿದೆ, ಅಂದಾಗ ಮಾತ್ರ ಸಮಾಜದ ಜನರಿಗೆ ಅವಶ್ಯಕತೆಗನುಗುಣವಾಗಿ ಸಹಾಯ ಮಾಡಲು ಸಾಧ್ಯವಾಗುತ್ತದೆ, ಈ ನಿಟ್ಟಿನಲ್ಲಿ ಎಲ್ಲರನ್ನೂ ಒಗ್ಗುಡಿಸುತ್ತೇನೆ ಎಂದು ತಿಳಿಸಿದರು.

ಸಮಾರಂಭದಲ್ಲಿ ಹಿರಿಯ ಸಾಹಿತಿ, ಶ್ರೀಮತಿ ಪ್ರಮೀಳಾ ಜಾನಪ್ಪಗೌಡ ಉಪನ್ಯಾಸ ನೀಡಿ, ಮಲ್ಲಮ್ಮಳ ಜೀವನ, ಆಧ್ಯಾತ್ಮೀಕ ಸಾಧನೆ, ಮಾನವೀಯ ಸಂದೇಶಗಳನ್ನು ವಿವರಿಸಿದರು.

ದಿವ್ಯಸಾನಿಧ್ಯವಹಿಸಿದ ಎರೆಹೊಸಳ್ಳಿ ರಡ್ಡಿ ಗುರು ಪೀಠದ ಶ್ರೀಗಳಾದ ವೇಮಾನಂದ ಮಹಾಸ್ವಾಮಿಜಿ ಆಶೀರ್ವಚನ ನೀಡಿ, ನಮ್ಮ ಸಮಾಜಕ್ಕೆ ಮಲ್ಲಮ್ಮ ಹಾಗೂ ವೇಮನ 2 ಕಣ್ಣುಗಳಿದ್ದಂತೆ, ಅವರ ಸಂದೇಶಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಂಡು ಸಮಾಜದಲ್ಲಿರುವ ಎಲ್ಲಾ ಒಳಪಂಗಡದವರು ತಮ್ಮಲ್ಲಿರುವ ಬೇಧ-ಭಾವಗಳನ್ನು ಬಿಟ್ಟು ಎಲ್ಲರೂ ಒಂದೇ ವೇದಿಕೆಯಡಿ ಸೇರಿದಾಗ ಮಾತ್ರ ಯಶಸ್ಸು ಸಾಧಿಸಲು ಸಾಧ್ಯ ಎಂದು ನುಡಿದರು. ಅಧ್ಯಕ್ಷತೆಯನ್ನು ಸಮಾಜದ ನಿಕಟಪೂರ್ವ ಅಧ್ಯಕ್ಷ ಚನ್ನಾರಡ್ಡಿ ಪಾಟೀಲ್ ಕುರಕುಂದಾ ವಹಿಸಿ ಮಾತನಾಡಿದರು.

ಸಮಾರಂಭದಲ್ಲಿ ಸಮಾಜದ ಸಂಘಟನೆಗೆ ಶ್ರಮಿಸಿದ ಹಿರಿಯ ಮುಖಂಡರನ್ನು ಸತ್ಕರಿಸಲಾಯಿತು. ವೇದಿಕೆ ಮೇಲೆ ಹೆಡಗಿಮದ್ರಾದ ಶಾಂತ ಮಲ್ಲಿಕಾರ್ಜುನ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಜಿ, ವಿಧಾನಸಭೆಯ ಮಾಜಿ ಉಪ ಸಭಾಪತಿ ಚಂದ್ರಶೇಖರರಡ್ಡಿ ಮದ್ನಾ ದೇಶಮುಖ, ತೋಗರಿ ಮಂಡಳಿ ಮಾಜಿ ಅಧ್ಯಕ್ಷ ಬಾಗನಗೌಡ ಸಂಕನೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಪ್ರಾಸ್ತಾವಿಕವಾಗಿ ಸಿದ್ರಾಮರಡ್ಡಿ ಬಲಕಲ್ ಮಾತನಾಡಿದರು, ರಮೇಶರಡ್ಡಿ ರಬ್ಬನಳ್ಳಿ ಸ್ವಾಗತಿಸಿದರೇ, ಶರಣಗೌಡ ಲಕಣಾಪೂರ ವಂದಿಸಿದರು.

## ಜಿಲ್ಲಾಧಿಕಾರಿಗಳ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳಿಂದ ಸೂಕ್ತ ನಿರ್ದೇಶನ ಹಿನ್ನೆಲೆ ಜಿಲ್ಲಾಧಿಕಾರಿಗಳಿಂದ ಜಿಲ್ಲಾ ಮಟ್ಟದಅಧಿಕಾರಿಗಳೊಂದಿಗೆ ಸಭೆ : ಜವಾಬ್ದಾರಿಯಿಂದ ಕಾರ್ಯನಿರ್ವಹಿಸಲು ಅಧಿಕಾರಿಗಳಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜೂ:2-ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಪರೀಕ್ಷಾ ಫಲಿತಾಂಶ ಹೆಚ್ಚಳಕ್ಕೆ. ಶಾಲಾ -ಕಾಲೇಜು ಆರಂಭದ ದಿನಗಳಿಂದಲೇ ಯೋಜನೆ ರೂಪಿಸುವಂತೆ ಜಿಲ್ಲಾಧಿಕಾರಿ ಡಾ.ಸುಶೀಲ.ಬಿ.ಅವರು ಸೂಚಿಸಿದರು.

ಇತ್ತೀಚೆಗೆ ಮಾನ್ಯ ಮುಖ್ಯಮಂತ್ರಿಗಳು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆ ನಡೆಸಿ ಸೂಕ್ತ ನಿರ್ದೇಶನ ನೀಡಿದ ಪ್ರಯುಕ್ತ, ಈ ಕುರಿತು ಚರ್ಚಿಸಲು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಅವರು ಮಾತನಾಡಿದರು.

ಸರ್ಕಾರಿ ಶಾಲೆಗಳಲ್ಲಿ ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿಯುಸಿ ಫಲಿತಾಂಶ ಚೆನ್ನಾಗಿ ಮಾಡಬಹುದಾಗಿದ್ದು, ಡಿಡಿಪಿಐ ಹಾಗೂ ಡಿಡಿಪಿಯು ಶಾಲಾ ಕಾಲೇಜು ಆರಂಭದಿಂದಲೇ ಈ ಕುರಿತು ನಿಗಾವಹಿಸಿ ಸೂಕ್ತ ಯೋಜನೆ ರೂಪಿಸಬೇಕು. ನಿರಂತರ ಪರಿಶೀಲನೆ ನಡೆಸಬೇಕು. ತಾಲೂಕುವಾರು ಪೋಷಕರು, ಎಸ್ಡಿಎಂಸಿ, ಶಿಕ್ಷಕರುಗಳ ಸಭೆ ನಡೆಸಿ, ಡ್ರಾಪ್ ಔಟ್ ಮಕ್ಕಳನ್ನು ಪುನಃಸೇರ್ಪಡೆ, ಗುಣಮಟ್ಟದ ಶಿಕ್ಷಣ, ಮೂಲಸೌಕರ್ಯಗಳ ಉತ್ತಮ ಬಳಕೆಯೊಂದಿಗೆ ಮುಂದಿನ ವರ್ಷಗಳಲ್ಲಿ ಫಲಿತಾಂಶ ಸುಧಾರಣೆಗೆ ವಿಶೇಷ ಗಮನ ನೀಡುವಂತೆ ಸೂಚಿಸಿದರು.

ಜಿಲ್ಲೆಯಲ್ಲಿ ಪ್ರತಿಶತ 60 ಕ್ಕಿಂತ ಕಡಿಮೆ ಫಲಿತಾಂಶ ಬಂದಕಡೆ ನೋಟಿಸ್ ಸಹ ಜಾರಿಗೊಳಿಸಲಾಗುವುದು. ಕಳೆದ ಎಸ್.ಎಸ್.ಎಲ್.ಸಿ ಸುಧಾರಣೆಗೆ ಡಿಡಿಪಿಐ ಕೈಗೊಂಡಿರುವ ಕ್ರಮಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು ಮುಂದಿನ ದಿನಗಳಲ್ಲಿ ಸವಾಲಾಗಿ ಸ್ವೀಕರಿಸಿ, ಫಲಿತಾಂಶ ಹೆಚ್ಚಳಕ್ಕೆ ವಿಶೇಷ ಗಮನ ನೀಡುವಂತೆ ಸಲಹೆ ನೀಡಿದರು. ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಕಳಪೆ ಬೀಜ , ರಸಗೊಬ್ಬರ ಮಾರಾಟವಾಗದಂತೆ ನಿಗಾವಹಿಸಬೇಕು. ಕೃಷಿಗೆ ಸಂಬಂಧಿಸಿದ ಚಟುವಟಿಕೆಗಳ ಬಗ್ಗೆ ಗಂಭೀರವಾಗಿರಬೇಕು. ಡಿಎಪಿ (ಡೈ ಅಮೋನಿಯಂ ಪಾಸ್ಫೇಟ್) ರಸಗೊಬ್ಬರ ಬದಲಾಗಿ ಎನ್ ಟಿ ಕೆ( ಸಂಯುಕ್ತ ರಸಗೊಬ್ಬರ) ಬಳಸುವ ಬಗ್ಗೆ. ರೈತರಿಗೆ ತಿಳಿಹೇಳಬೇಕು. ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಅಂಗನವಾಡಿಗಳು ಸೇರಿದಂತೆ ವಿವಿಧ ನಿವೇಶನದ ಅವಶ್ಯಕತೆಗಳ ಬಗ್ಗೆ ವರದಿ ಸಲ್ಲಿಸಬೇಕು ಎಂದು ಸೂಚಿಸಿದರು.

ಜಿಲ್ಲೆಯಲ್ಲಿ ಬಾಲ್ಯವಿವಾಹ ತಡೆಯಲು ಗ್ರಾಮವಾರು ಆಯಾ ಪೋಷಕರು, ಮಕ್ಕಳು, ಗ್ರಾಮಸ್ಥರಲ್ಲಿ ಸೂಕ್ತ ಅರಿವು ಮೂಡಿಸಬೇಕು. ಆರೋಗ್ಯಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು, ಜಿಲ್ಲಾ ಆರ್ ಸಿ ಹೆಚ್ ಅಧಿಕಾರಿಗಳು ಆಶಾ ಕಾರ್ಯಕರ್ತೆಯರ ಸಮನ್ವಯತೆಯಿಂದ ತಾಯಿ ಮರಣ, ಶಿಶುಮರಣ ಪ್ರಮಾಣ ತಗ್ಗಿಸಲು ಪ್ರಯತ್ನಿಸಬೇಕು. ಅಪೌಷ್ಟಿಕ ನಿವಾರಣೆಗೆ ಸೂಕ್ತ ನಿಗಾಯಿಡುವಂತೆ ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಿವಿಧ ನಿಗಮಗಳ ವ್ಯಾಪ್ತಿಯಲ್ಲಿ ಅವಶ್ಯಕ ಕ್ರಮಗಳನ್ನು ಕೈಗೊಳ್ಳಬೇಕು. ನಗರಸ್ಥಳಿಯ ಹಾಗೂ ಗ್ರಾ.ಪಂ. ವ್ಯಾಪ್ತಿಯಲ್ಲಿ ಅಭಿಯಾನ ರೂಪದಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಬೇಕು. ಚರಂಡಿ ನೀರು ಹರಿದು ಹೋಗುವಂತೆ ನೋಡಿಕೊಳ್ಳಬೇಕು.

ವಸತಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಬೇಕು ಎಂದು ಸೂಚಿಸಿದರು.

ಪ್ರವಾಹ ಸಂಭವ ಹಿನ್ನೆಲೆಯಲ್ಲಿ ಅಧಿಕಾರಿಗಳು ಅನುಮತಿ ಇಲ್ಲದೆ ಕೇಂದ್ರ ಸ್ಥಾನ ಬಿಡಬಾರದು. ನೋಡಲ್ ಅಧಿಕಾರಿಗಳು ಸೂಕ್ತ ಮುನ್ನೆಚ್ಚರಿಕೆ ಗಳ ಬಗ್ಗೆ ಆಯಾ ಗ್ರಾಮ ವ್ಯಾಪ್ತಿಯಲ್ಲಿ ತಿಳಿ ಹೇಳಬೇಕು. ವಿವಿಧ ಸಮೂಹ ಮಾಧ್ಯಮ ಗಳಲ್ಲಿ ಬರುವಂತಹ ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ ಕಾಲ ಕಾಲಕ್ಕೆ ಕ್ರಮ ಕೈಗೊಂಡು ಸಮನ್ವಯ ಸಾಧಿಸಿ ಸಮಸ್ಯೆ ಪರಿಹರಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.



ಸಭೆಯಲ್ಲಿ ಜಿ.ಪಂ ಸಿಇಓ ಲವೀಶ್ ಒರಡಿಯಾ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರಣೇಶ್ ಎಸ್.ಪಿ. ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಾಹಿತಿ ಆಯೋಗವನ್ನು ಜನರ ಬಳಿ ಕೊಂಡೊಯ್ಯುವ ಚಿಂತನೆ – ರುದ್ರಣ್ಣ ಹರ್ತಿಕೋಟೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಮಾಹಿತಿ ಹಕ್ಕು ಅಧಿನಿಯಮ ಕಾಯ್ದೆಯ ಬಗ್ಗೆ ಸಾರ್ವಜನಿಕರಿಗೆ ಸರಿಯಾದ ಅರಿವನ್ನು ಮೂಡಿಸುವುದು ಅತ್ಯವಶ್ಯಕವಾಗಿದ್ದು, ಈ ಕುರಿತು ಬರುವ ದಿನಗಳಲ್ಲಿ ಕರ್ನಾಟಕ ಮಾಹಿತಿ ಆಯೋಗವನ್ನು ಜನರ ಬಳಿ ಕೊಂಡೊಯ್ಯುವ ಚಿಂತನೆಗಳನ್ನು ಆಯೋಗದಿಂದ ಮಾಡಲಾಗುತ್ತಿದೆ ಎಂದು ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರಾದ ರುದ್ರಣ್ಣ ಹರ್ತಿಕೋಟೆ ಹೇಳಿದರು.

ಅವರು ಶನಿವಾರ ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ ಮಾಹಿತಿ ಹಕ್ಕು ಅಧಿನಿಯಮ–2005ರ ಕುರಿತು ಕೊಪ್ಪಳ ವಿಶ್ವವಿದ್ಯಾಲಯದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಒಂದು ದಿನದ ಕಾರ್ಯಾಗಾರದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಪ್ರಜಾಪ್ರಭುತ್ವ ಪ್ರಬಲವಾಗಬೇಕು. ಜನರಿಗೆ ಸರ್ಕಾರದ ಮಹಿತಿ ಲಭ್ಯವಾಗಬೇಕು ಎಂಬ ಉದ್ದೇಶದಿಂದ ಅಂದಿನ ಪ್ರಧಾನಿ ಡಾ.ಮನಮೋಹನ ಸಿಂಗ್ ನೇತೃತ್ವದ ಸರ್ಕಾರವು 2005ರ ಅಕ್ಟೋಬರ್ 5ರಂದು ಆರ್.ಟಿ.ಐ ಕಾಯ್ದೆಯನ್ನು ಜಾರಿಗೆಗೊಳಿಸಿತು. ಈ ಕಾಯ್ದೆಯನ್ನು ಜಾರಿ ತಂದ ಮೊಟ್ಟ ಮೊದಲ ರಾಜ್ಯ ಕರ್ನಾಟಕವಾಗಿದೆ. ಆರ್.ಟಿ.ಐ ಕಾಯ್ದೆ ಬಗ್ಗೆ ಸಾರ್ವಜನಿಕರಿಗೆ ಸರಿಯಾದ ಅರಿವನ್ನು ಮೂಡಿಸಲು ಕರ್ನಾಟಕ ಮಾಹಿತಿ ಆಯೋಗವನ್ನು ಜನರ ಬಳಿ ಕೊಂಡೊಯ್ಯುವ ಚಿಂತನೆಗಳನ್ನು ಮಾಡಲಾಗುತ್ತಿದೆ. ಇದರ ಜೊತೆಗೆ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಕಾನೂನು ಅರಿವು ಮೂಡಿಸಲಾಗುತ್ತಿದೆ. ಶಿಕ್ಷಣ ಹಂತದಲ್ಲಿಯೇ ಮಕ್ಕಳಿಗೂ ಆರ್.ಟಿ.ಐ ಕಾಯ್ದೆಯ ಕುರಿತು ಅರಿವನ್ನು ಮೂಡಿಸುವಂತಹ ಕೆಲಸವಾಗಬೇಕಿದೆ. ಈ ಬಗ್ಗೆ ಪ್ರಸ್ತಾವನೆ ಸಲ್ಲಿಸಲು ಶಿಕ್ಷಣ ಇಲಾಖೆಯೊಂದಿಗೆ ಚರ್ಚಿಸಲಾಗಿದೆ. ಕಾಯ್ದೆ ಬಗ್ಗೆ ಎಲ್ಲರಲ್ಲಿಯೂ ಸ್ಪಷ್ಟ ಮಾಹಿತಿ ಇದ್ದಾಗ ಮಾತ್ರ ಅದು ಪರಿಣಾಮಕಾರಿಯಾಗಿ ಅನುಷ್ಠಾನವಾಗಲು ಸಾಧ್ಯವಾಗುತ್ತದೆ ಎಂದರು.

ಜಿಲ್ಲಾ ಮಟ್ಟದಲ್ಲಿಯೂ ಸಾರ್ವಜನಿಕರ ಅಹವಾಲು ಸಭೆಗಳನ್ನು ಮಾಡುವ ಪ್ರಯತ್ನ ನಡೆಯುತ್ತಿದೆ. ಸಚಿವರು, ಶಾಸಕರುಗಳ ಅಧ್ಯಕ್ಷತೆಯಲ್ಲಿ ನಡೆಯುವ ಕೆಡಿಪಿ ಸಭೆಗಳಲ್ಲಿಯೂ ಆರ್.ಟಿ.ಐ ಕಾಯ್ದೆಯ ಅನುಷ್ಠಾನದ ಬಗ್ಗೆ ಚರ್ಚೆಗಳಾಗಬೇಕೆಂದು ರಾಜ್ಯ ಮಾಹಿತಿ ಆಯೋಗವು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ ಎಂದು ಹೇಳಿದರು.

ರಾಜ್ಯ ಮಾಹಿತಿ ಆಯುಕ್ತರಾದ ಡಾ.ಹರೀಶ್ ಕುಮಾರ್ ಅವರು ಮಾತನಾಡಿ, ಹಿಂದಿನ ಕಾಲದ ರಾಜರ ಆಳ್ವಿಕೆಯ ಕಾಲದಲ್ಲಿ ಜನರು ಪ್ರಶ್ನೆ ಮಾಡುವದಾಗಲಿ ಅಥವಾ ಅವರನ್ನು ನೋಡುವ ಹಾಗೆ ಇರಲಿಲ್ಲ. ದೊಡ್ಡ ಸಮಾರಂಭಗಳಂತಹ ಸಂದರ್ಭದಲ್ಲಿ ಅವರ ಮುಖ ನೋಡಬೇಕಿತ್ತು. ಆದರೆ ಇಂದಿನ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಹಾಗಿಲ್ಲ. ಈ ದೇಶದ ರಾಷ್ಟ್ರಪತಿಯಿಂದ ಹಿಡಿದು. ಆಗರ್ಭ ಶ್ರೀ ಮಂತ ಹಾಗೂ ಒಬ್ಬ ಬಡವನಿಗೂ ಒಂದೇ ಮತ ನೀಡುವದರ ಜೊತೆಗೆ ನಮ್ಮ ಸಂವಿಧಾನದಲ್ಲಿ ಎಲ್ಲರಿಗೂ ಸಮಾನ ಹಕ್ಕುಗಳನ್ನು ನೀಡಿದೆ ಎಂದರು.

ದೇಶದ ಶಾಸಕಾಂಗ ಕಾರ್ಯಾಂಗ ಮತ್ತು ನ್ಯಾಯಾಂಗ ವ್ಯವಸ್ಥೆ ದಾರಿತಪ್ಪಿದಾಗ ಅಂತಿಮ ನಿರ್ಣಾಯಕರು ಜನರೆ ಆಗಿರುತ್ತಾರೆ. ಜನರೆ ತಂದ ಕಾಯ್ದೆ ಕಾನೂನುಗಳ ಪಾಲಕರು ಅವರೆ ಆಗಿದ್ದಾರೆ. ಮಾಹಿತಿ ಹಕ್ಕು ಕಾಯಿದೆಗೆ ಜಗತ್ತಿನಲ್ಲಿ 300 ವರ್ಷಗಳ ಇತಿಹಾಸ ಇದೆ. ಜಗತ್ತಿನ 112 ರಾಷ್ಟ್ರಗಳು ಇದನ್ನು ಒಪ್ಪಿಕೊಂಡಿವೆ. ಮೊದಲು ಸ್ವೀಡನ್. ಕೊಲಂಬಿಯಾ. ಯುಎಸ್‌ಎ, ಕೆನಡಾ, ಜಪಾನ್ ಹೀಗೆ ಜಗತ್ತಿನ ಇತರೆ ಹಲವಾರು ರಾಷ್ಟ್ರಗಳು ಈ ನಿಯಮಗಳನ್ನು ಪಾಲನೆ ಮಾಡುತ್ತಿವೆ ರಾಜಸ್ಥಾನದಲ್ಲಿ ನಡೆದ ಸಮಾಜಿಕ ಚಳುವಳಿಗಾರರ ಪ್ರತಿಫಲವಾಗಿ ಮಾಹಿತಿ ಹಕ್ಕು ಕಾಯ್ದೆ 2005 ನ್ನು ನಮ್ಮ ದೇಶದಲ್ಲಿ ಜಾರಿಗೆ ಬಂದಿತು. ಇದನ್ನು ನಮ್ಮ ದೇಶದಲ್ಲಿ ಮೊದಲ ಬಾರಿಗೆ ಜಾರಿಗೆ ತಂದ ರಾಜ್ಯ ಕರ್ನಾಟಕ ಆಗಿದೆ ಎಂದರು.

ಮಾಹಿತಿ ಹಕ್ಕು ಕಾಯ್ದೆ ಜಾರಿಗೆ ಬರುವ ಮುಂಚೆ ಬಲಾಢ್ಯರು ಸರ್ಕಾರದ ಸೌಲಭ್ಯಗಳನ್ನು ಪಡೆಯುತ್ತಿದ್ದರು. ಈಗ ಹಾಗಿಲ್ಲ. ಜನ ಸಾಮಾನ್ಯರು ಮಾಹಿತಿ ಹಕ್ಕುಗಳ ಮೂಲಕ ಸರ್ಕಾರದ ಲಾಭವನ್ನು ಪಡೆಯುತ್ತಿದ್ದಾ–ರೆ. ಮಾಹಿತಿ ಆಯೋಗದ ಹೆಚ್ಚಿನ ಸದುಪಯೋಗವನ್ನು ಸಾರ್ವಜನಿಕರು ಪಡೆಯುವ ಮೂಲಕ ಪ್ರಜಾಪ್ರಭುತ್ವ ಹಾಗೂ ಸಂವಿಧಾನದವನ್ನು ಇನಷ್ಟು ಗಟ್ಟಿಗೊಳಿಸಬೇಕೆಂದು ಹೇಳಿದರು.

ರಾಜ್ಯ ಮಾಹಿತಿ ಆಯುಕ್ತರಾದ ರಾಜಶೇಖರ್ ಎಸ್. ಅವರು ಮಾತನಾಡಿ, ದೇಶದಲ್ಲಿ ಮೊದಲು ಲೋಕಸಭಾ ಮತ್ತು ರಾಜ್ಯಸಭಾ ಸದಸ್ಯರು, ಶಾಸಕರು, ವಿಧಾನಪರಿಷತ್ ಸದಸ್ಯರು ಸೇರಿದಂತೆ ಕೆಲವೆ ಕೆಲವು ಚಾನಾಯಿತ ಜನಪ್ರತಿನಿಧಿಗಳು ಹಾಗೂ ಉನ್ನತ ಅಧಿಕಾರಿಗಳಿಗೆ ಮಾತ್ರ ಮಾಹಿತಿ ಸಿಗುತ್ತಿತ್ತು. 2005ರಲ್ಲಿ ಡಾ.ಮನಮೋಹನ ಸಿಂಗ್ ರವರ ಸರ್ಕಾರವು ಆರ್.ಟಿ.ಐ ಕಾಯ್ದೆಯನ್ನು ಜಾರಿಗೆ ತಂದ ನಂತರ ಈ ದೇಶದ ಜನ ಸಾಮನ್ಯರಿಗೂ ಮಾಹಿತಿ ಸಿಗುತ್ತಿದೆ. ಇಂದಿನ ವಿದ್ಯಾರ್ಥಿಗಳು ಮುಂದಿನ ಭವಿಷ್ಯದ ಪ್ರಜೆಗಳಾಗಿದ್ದು, ಮಾಹಿತಿ ಹಕ್ಕು ಅಧಿನಿಯಮ–2005ರ ಕುರಿತು ಹೆಚ್ಚಿನ ರೀತಿಯಲ್ಲಿ ತಿಳಿದುಕೊಳ್ಳುವುದು ಅತ್ಯವಶ್ಯಕವಾಗಿದೆ ಎಂದು ವಿದ್ಯಾರ್ಥಿಗಳಿ ಕಿವಿ ಮಾತು ಹೇಳಿದರು.

ರಾಜ್ಯ ಮಾಹಿತಿ ಆಯುಕ್ತರಾದ ಬದ್ರುದ್ದೀನ್ ಕೆ. ಅವರು ಮಾತನಾಡಿ, ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕ ಮಾಹಿತಿ ಪ್ರಾಧಿಕಾರಗಳು ಕರ್ನಾಟಕ ಮಾಹಿತಿ ಆಯೋಗದ ವ್ಯಾಪ್ತಿಗೊಳಪಡುತ್ತವೆ. ರಾಜ್ಯ ಮಾಹಿತಿ ಆಯೋಗವು ಕೇಂದ್ರ ಮಾಹಿತಿ ಆಯೋಗದ ಸ್ವರೂಪದಲ್ಲಿ ರಚನೆಯಾಗಿದೆ. ನಮ್ಮ ರಾಜ್ಯದಲ್ಲಿ ಹತ್ತು ಮಾಹಿತಿ ಆಯುಕ್ತರಿದ್ದು, ಒಬ್ಬರು ಮುಖ್ಯ ಆಯುಕ್ತರಿದ್ದಾರೆ. ಬೆಂಗಳೂರಿನಲ್ಲಿ ಎಂಟು ಪೀಠಗಳಿವೆ ಹಾಗೂ ಬೆಳಗಾವಿ ಮತ್ತು ಕಲಬುರಗಿಯಲ್ಲಿ ತಲಾ ಒಂದು ಪೀಠಗಳಿವೆ. ಮಾಹಿತಿ ಹಕ್ಕು ಕಾಯ್ದೆಯಡಿ ಕರ್ನಾಟಕ ಮಾಹಿತಿ ಆಯೋಗಕ್ಕೆ ದ್ವಿತಿಯ ಮೇಲ್ಮನವಿಗಳು ಬಂದಾಗ, ಆ ಅರ್ಜಿಗಳನ್ನು ಸ್ವೀಕರಿಸಿ, ವಿಚಾರಣೆ ಮಾಡಲಾಗುತ್ತದೆ ಎಂದು ಹೇಳಿದರು.

ಕೊಪ್ಪಳ ವಿಶ್ವ ವಿದ್ಯಾಲಯದ ಕುಲಪತಿಗಳಾದ ಪ್ರೊ.ಬಿ.ಕೆ.ರವಿ ಅವರು ಕಾರ್ಯಾಗಾರದ ಅಧ್ಯಕ್ಷತೆ ಮತ್ತು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಾಹಿತಿ ಹಕ್ಕಿನ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು ಅವಶ್ಯಕತೆಯಿದೆ. ಮಾಹಿತಿ ಹಕ್ಕು ಅಧಿನಿಯಮ–2005ರ ಕುರಿತು ಕೊಪ್ಪಳ ವಿಶ್ವವಿದ್ಯಾಲಯದಿಂದ ಕಾರ್ಯಾಗಾರ ಹಮ್ಮಿಕೊಂಡಿರುವ ಈ ದಿನ ಒಂದು ವಿಶೇಷ ದಿನವೇ ಆಗಿದೆ. ಮೇ 31 ಇಂದು ರಾಜಮಾತೆ ಅಹಲ್ಯಬಾಯಿ ಹೋಳ್ಕರ್ ರವರ ಜನ್ಮ ದಿನವು ಆಗಿದೆ. ಮಧ್ಯ ಭಾರತವನ್ನು ಆಳಿದಂತಹ ಹೋಳ್ಕರ ರಾಜ್ಯ ಮನೆತನಕ್ಕೆ ಸೇರಿದ ಅಹಲ್ಯಾಬಾಯಿ ಹೋಳ್ಕರ್, ಯುದ್ಧದಲ್ಲಿ ತನ್ನ ಗಂಡ ಮರಣ ಹೊಂದಿದ ನಂತರವೂ ಕುಗ್ಗದೆ, ಒರ್ವ ಹೆಣ್ಣಾಗಿ ತೊಟ್ಟಿಲು ತೂಗುವ ಕೈಯಿಂದ ಖಡ್ಗವನ್ನು ಹಿಡಿದು ಇಡೀ ಸಾಮ್ರಾಜ್ಯವನ್ನು ರಕ್ಷಣೆ ಮಾಡಿದಳು. ಇದಲ್ಲದೇ ದೇಶದ ಅನೇಕ ದೇವಾಲಯಗಳನ್ನು ಜಿರ್ಣೋದ್ಧಾರ ಮಾಡಿದ್ದಳು ಎಂದರು.

ಕೊಪ್ಪಳ ವಿಶ್ವವಿದ್ಯಾಲಯ ಜನ ಸಮುದಾಯಕ್ಕೆ ಹತ್ತಿರವಾಗಿರಬೇಕು. ಈ ದಿಶೆಯಲ್ಲಿ ಕೊಪ್ಪಳ ವಿ.ವಿ.ಯಿಂದ ಅನೇಕ ವಿಚಾರ ಸಂಕೀರ್ಣ, ಕವಿಗೋಷ್ಠಿಗಳನ್ನು ಮಾಡಲಾಗುತ್ತಿದೆ. ಜನಸಮುದಾಯ ಬಂದು ವಿಶ್ವವಿದ್ಯಾಲಯದ ಚಟುವಟಿಕೆಗಳಲ್ಲಿ ಪಾಲ್ಗೊಂಡಾಗ ಮಾತ್ರ ಯಾವುದೆ ಒಂದು ವಿಶ್ವವಿದ್ಯಾಲಯ ಅಭಿವೃದ್ಧಿಯಾಗುತ್ತದೆ. ಸಾಮಾಜಿಕ ಬದಲಾವಣೆ ಆಗಬೇಕಾದರೆ ಶೈಕ್ಷಣಿಕ ಕೇಂದ್ರಗಳು ಮತ್ತು ವಿಶ್ವವಿದ್ಯಾಲಯಗಳಿಂದ ಮಾತ್ರ ಸಾದ್ಯವಾಗಿದೆ. ಜಗಜ್ಯೊತಿ ಬಸವಣ್ಣನವರು ನಡೆದಾಡಿದಂತಹ ಪವಿತ್ರವಾದ ನಾಡು ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಿಕ್ಷಣದಿಂದ ವಂಚಿತವಾಗುತ್ತಿರುವ ಹಲವಾರು ಹೆಣ್ಣು ಮಕ್ಕಳಿಗೆ ಶಿಕ್ಷಣದತ್ತ ಕೊಂಡೊಯ್ಯಲು ಹಾಗೂ ಬಾಲ್ಯವಿವಾಹ ನಿಷೇಧ ಮತ್ತು ಅಪೌಷ್ಠಿಕ ನಿವಾರಣೆಗಾಗಿ ಕೊಪ್ಪಳ ವಿಶ್ವವಿದ್ಯಾಲಯವು ಈ ನಿಟ್ಟಿನಲ್ಲಿ ಶ್ರಮಿಸುತ್ತಿದ್ದು, ಇದಕ್ಕಾಗಿ ಎಲ್ಲಾ ವಿದ್ಯಾರ್ಥಿಗಳು, ಶಿಕ್ಷಕರು ಕೈಜೋಡಿಸಬೇಕು ಎಂದು ಹೇಳಿದರು.

*ಗಮನ ಸೆಳೆದ ಸಾಂಸ್ಕೃತಿಕ ಕಾರ್ಯಕ್ರಮ:* ಕಾರ್ಯಾಗಾರ ಪ್ರಾರಂಭಕ್ಕೂ ಪೂರ್ವದಲ್ಲಿ ಕೊಪ್ಪಳ ವಿಶ್ವ ವಿದ್ಯಾಲಯದ ವಿದ್ಯಾರ್ಥಿಗಳಿಂದ ನಡೆದ ಡಾ. ಬಿ.ಆರ್.ಅಂಬೇಡ್ಕರ್ ಅವರ ಕುರಿತಾದ ಮತ್ತು ಸಂವಿಧಾನದ ಪ್ರಸ್ತಾಪನೆಯ ಜಾಗೃತಿ ಮೂಡಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳು ಎಲ್ಲರ ಗಮನ ಸೆಳೆದವು. ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಕೆ. ರವಿ ಅವರು ಭಾರತ ಸಂವಿಧಾನದ ಪ್ರಸ್ತಾವನೆಯನ್ನು ಎಲ್ಲರಿಗೆ ಭೋಧಿಸಿದರು. ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರು ಕಾರ್ಯಕ್ರಮದ ಕೊನೆಯಲ್ಲಿ ಮಾಹಿತಿ ಹಕ್ಕು ಅಧಿನಿಯಮ ಕುರಿತು ಸಾರ್ವಜನಿಕರೊಂದಿಗೆ ಸಂವಾದ ನಡೆಸಿದರು.

ಕಾರ್ಯಾಗಾರದಲ್ಲಿ ಕೊಪ್ಪಳ ವಿಶ್ವ ವಿದ್ಯಾಲಯದ ಕುಲಸಚಿವರಾದ ಪ್ರೊ.ಕೆ.ವಿ.ಪ್ರಸಾದ್, ಗಂಗಾವತಿ ಸ್ನಾತಕೋತ್ತರ ಕೇಂದ್ರದ ನಿರ್ದೇಶಕರಾದ ಮುಮ್ತಾಜ್ ಬೇಗಂ, ಯಲಬುರ್ಗಾ ಸ್ನಾತ–ಕೋತ್ತರ ಕೇಂದ್ರದ ಆಡಳಿತಾಧಿಕಾರಿ ಕೆ.ಎಚ್.ಛತ್ರದ, ಕೊಪ್ಪಳ ವಿಶ್ವ ವಿದ್ಯಾಲಯದ ಆಡಳಿತಾಧಿಕಾರಿ ತಿಮ್ಮಾರೆಡ್ಡಿ ಮೇಟಿ ಮತ್ತು ಸಿಂಡಿ–ಕೇಟ್ ಹಾಗೂ ಆಕಾಡೆಮಿಕ್ ಕೌನ್ಸಿಲ್ ಸದಸ್ಯರು, ವಿಶ್ವ ವಿದ್ಯಾಲಯದ ಬೋಧಕ ಬೋಧಕೇತರ ಸಿಬ್ಬಂದಿಗಳು, ಸಂಶೋಧನಾ ವಿದ್ಯಾರ್ಥಿಗಳು, ಸ್ನಾತಕ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಬಳ್ಳಾರಿ: ಗ್ರಾಪಂಗಳಲ್ಲಿ ತೆರವಾದ ಸ್ಥಾನಗಳಿಗೆ ನೂತನವಾಗಿ ಆಯ್ಕೆಯಾದ ಸದಸ್ಯರ ಪಟ್ಟಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.02–ಲ್ಲೆಯ ಕಂಪ್ಲಿ, ಸಿರುಗುಪ್ಪ ಮತ್ತು ಸಂಡೂರು ತಾಲ್ಲೂಕುಗಳ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ವಿವಿಧ ಕಾರಣಗಳಿಂದ ತೆರವಾದ ಸ್ಥಾನಗಳಿಗೆ ಈಗಾಗಲೇ ಚುನಾವಣೆ ನಡೆಸಲಾಗಿದ್ದು, ಹೊಸದಾಗಿ ಆಯ್ಕೆಯಾದ ಸದಸ್ಯರ ಪಟ್ಟಿ ಪ್ರಕಟಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

**ಪಟ್ಟಿ: ಕಂಪ್ಲಿ ತಾಲ್ಲೂಕು:**

ದೇವಸಮುದ್ರ ಗ್ರಾಪಂ–ಅವಿರೋಧವಾಗಿ ಶರಣಮ್ಮ(ಸಾಮಾನ್ಯ ಮಹಿಳೆ) ಆಯ್ಕೆ.

ದೇವಲಾಪುರ ಗ್ರಾಪಂ–ಅವಿರೋಧವಾಗಿ ಕುರಿ ಕರಿಬಸಪ್ಪ(ಸಾಮಾನ್ಯ).

*ಸಿರುಗುಪ್ಪ:*

ರಾವಿಹಾಳು ಗ್ರಾಪಂ:ಅವಿರೋಧವಾಗಿ ಸುವರ್ಣ(ಅನುಸೂಚಿತ ಪಂಗಡ ಮಹಿಳೆ) ಆಯ್ಕೆ.

*ಸಂಡೂರು:*

ಮೆಟ್ರಿಕಿ: ಅವಿರೋಧವಾಗಿ ಉಮಾದೇವಿ(ಅನುಸೂಚಿತ ಪಂಗಡ ಮಹಿಳೆ) ಆಯ್ಕೆಯಾಗಿದ್ದಾರೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

## ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ: ವಿದ್ಯಾರ್ಥಿ ನಿಲಯಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.02–ಬಳ್ಳಾರಿ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ 2025–26ನೇ ಶೈಕ್ಷಣಿಕ ವರ್ಷ ಸಾಲಿಗೆ ವಿದ್ಯಾರ್ಥಿ ನಿಲಯಗಳ ಪ್ರವೇಶಾತಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಪರಿಶಿಷ್ಟ ಪಂಗಡ ಮತ್ತು ಪರಿಶಿಷ್ಟ ಜಾತಿ ಹಾಗೂ ಇತರೆ ವರ್ಗದ ಬಾಲಕ ಮತ್ತು ಬಾಲಕಿಯರು ಅರ್ಜಿ ಸಲ್ಲಿಸಲು ಆನ್‌ಲೈನ್ ವೆಬ್‌ಸೈಟ್ State Hostel Portal ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಿದ ವಿವರಗಳನ್ನು ಸೂಕ್ತ ದಾಖಲೆಗಳೊಂದಿಗೆ ನಗರದ ನಲ್ಲಚೇರವು ಪ್ರದೇಶದ ವಾಲ್ಮೀಕಿ ಭವನದ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಮೊ.9110224569 ಗೆ ಸಂಪರ್ಕಿಸಬಹುದು ಎಂದು ಬಳ್ಳಾರಿ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಐಟಿಐ: ಪ್ರವೇಶಾತಿಗೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.02–ನಗರದ ರೇಡಿಯೋ ಪಾರ್ಕ್ನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಪ್ರಸ್ತಕ ಸಾಲಿಗೆ ವಿವಿಧ ವೃತ್ತಿಗಳಿಗೆ ಪ್ರವೇಶಕ್ಕಾಗಿ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಜೂನ್ 12 ರಂದು ಎರಡನೇ ಸುತ್ತಿನ ಪ್ರವೇಶ ಪ್ರಕ್ರಿಯೆ ನಡೆಯಲಿದೆ. ಜೂನ್ 13 ರಿಂದ ಆಗಸ್ಟ್ 31 ರ ವರೆಗೆ ಮೂರನೇ ಸುತ್ತಿನ ಪ್ರವೇಶಾತಿ ಪ್ರಕ್ರಿಯೆ ನಡೆಯಲಿದ್ದು, ಸಂಸ್ಥೆಗೆ ಭೇಟಿ ನೀಡಿ ಅರ್ಜಿ ಪಡೆದು ಪೂರಕ ದಾಖಲೆಗಳೊಂದಿಗೆ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಿದ ದಿನದಂದೇ ಅಭ್ಯರ್ಥಿಗಳ ದಾಖಲೆ ಪರಿಶೀಲನೆ ನಡೆಯಲಿದೆ. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ನೀಡುವ ಮೊಬೈಲ್ ಸಂ–ಖ್ಯೆ ಹಾಗೂ ಇ–ಮೇಲ್ ವಿಳಾಸವನ್ನು ಪ್ರವೇಶ ದಿನದಿಂದ ಪರೀಕ್ಷೆ ಮುಗಿಯುವವರೆಗೂ ಬದಲಾಯಿಸುವಂತಿಲ್ಲ.

ಹೆಚ್ಚಿನ ಮಾಹಿತಿಗಾಗಿ ನಗರದ ರೇಡಿಯೋ ಪಾರ್ಕ್ನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಅಥವಾ ಮೊ.9916300462 ಗೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.02–ನಗರದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2025–26ನೇ ಸಾಲಿಗೆ ಲ್ಯಾಟರಲ್ ಎಂಟ್ರಿಸ್ಕೀಂ ಮೂಲಕ ದ್ವಿತೀಯ ವರ್ಷದ 3ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸ್ ಪ್ರವೇಶಾತಿಗೆ ಐ.ಟಿ.ಐ ಮತ್ತು ದ್ವಿತೀಯ ಪಿ.ಯು.ಸಿ(ವಿಜ್ಞಾನ/ತಾಂತ್ರಿಕ ವಿಷಯಗಳಲ್ಲಿ) ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳಿಗೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಕಾಲೇಜಿನಲ್ಲಿ ಪಡೆದುಕೊಂಡು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿ ಅರ್ಜಿಗಳನ್ನು ಪಾಲಿಟೆಕ್ನಿಕ್‌ನ ಪ್ರಾಂಶುಪಾಲರ ಕಚೇರಿಗೆ ಜೂನ್ 14 ಸಂಜೆ 05 ಗಂಟೆಯವರೆಗೆ ಸಲ್ಲಿಸಬಹುದು.

ಜೂನ್ 16 ರಂದು ಬೆಳಿಗ್ಗೆ 11 ಗಂಟೆಗೆ ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟ, ಅಂದು ಸಂಜೆ 03 ರ ವರೆಗೆ ತಿದ್ದುಪಡಿಗೆ ಅವಕಾಶ, ಸಂಜೆ 05 ಗಂಟೆಯವರೆಗೆ ಅಂತಿಮ ಮೆರಿಟ್ ಪಟ್ಟಿ ಪ್ರಕಟಿಸಲಾಗುವುದು. ಜೂನ್ 17 ರಿಂದ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್‌ನ ಪ್ರಾಚಾರ್ಯರ ಕಚೇರಿ ಅಥವಾ ದೂ.08392–242228 ಗೆ ಸಂಪರ್ಕಿಸಬಹುದು ಎಂದು ಸರ್ಕಾರಿ ಪಾಲಿಟೆಕ್ನಿಕ್ ನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಡೂರು: ಮೀನು ಪಾಶುವಾರು ಹಕ್ಕು ವಿಲೇವಾರಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.02–ಜಿಲ್ಲೆಯ ಸಂಡೂರು ತಾಲೂಕಿನ ಮೀನುಗಾರಿಕೆ ಇಲಾಖೆಯ ಜಲಸಂಪನ್ಮೂಲಗಳಾದ ವಡ್ಡಿನ ಕಟ್ಟೆ ಕೆರೆ, ಅಂಕಮ್ಮನಾಳ ಕೆರೆ, ಯು.ರಾಜಾಪುರ ಕೆರೆ, ರಾಘವಪುರ ಕೆರೆಗಳ ಮೀನು ಪಾಶುವಾರು ವಿಲೇವಾರಿಗಾಗಿ 2025–26 ನೇ ಸಾಲಿನಿಂದ ಅರ್ಹ ಮೀನುಗಾರರ ಸಹಕಾರ ಸಂಘ, ಮೀನುಗಾರರ ಉತ್ಪಾದಕರ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಡೂರು ಮೀನುಗಾರಿಕೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆರೆಗಳ ಮೀನು ಪಾಶುವಾರು ಹಕ್ಕನ್ನು 5 ವರ್ಷಗಳ ಕಾಲ ನೇರಗುತ್ತಿಗೆ ಮೂಲಕ ವಿಲೇವಾರಿ ಕೈಗೊಳ್ಳಲು ಅವಕಾಶ ಇದ್ದು, ಜೂ.13 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಡೂರು ಮೀನುಗಾರಿಕೆ ಸಹಾಯಕ ನಿರ್ದೇಶಕ ಕಚೇರಿಗೆ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

## ಕುರೆಕುಪ್ಪ: ವಿವಿಧ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.02–ಕುರೇಕುಪ್ಪ ಪುರಸಭೆ ವತಿಯಿಂದ 2025–26 ನೇ ಸಾಲಿನ ಎಸ್‌ಎಫ್‌ಸಿ ಮುಕ್ತನಿಧಿ ಯೋಜನೆಯಡಿ ಶೇ.24.10 ಮತ್ತು ಶೇ.7.25 ರಡಿ ಕಾಯ್ದಿರಿಸಿದ ಅನುದಾನದಲ್ಲಿ ವೈಯಕ್ತಿಕ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಕುರೆಕುಪ್ಪ ಪುರಸಭೆಯ ಮುಖ್ಯಾಧಿಕಾರಿ ತಿಳಿಸಿದ್ದಾರೆ.

ಸೌಲಭ್ಯದ ವಿವರ:

ಪುರಸಭೆ ಕುರೇಕುಪ್ಪ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಫಲಾನುಭವಿಗಳಿಗೆ ಲ್ಯಾಪ್‌ಟಾಪ್ ಪಡೆಯಲು, ಸ್ವಯಂ ಉದ್ಯೋಗ ಪ್ರಾರಂಭಿಸಲು ಬ್ಯಾಂಕ್‌ನಿಂದ ಪಡೆಯುವ ಸಾಲಕ್ಕೆ ಬ್ಯಾಕ್ ಎಂಡ್ ಸಬ್ಸಿಡಿ ಸಹಾಯಧನ, ಪ.ಜಾತಿ ಫಲಾನುಭವಿಗಳಿಗೆ ಲ್ಯಾಪ್‌ಟಾಪ್ ಪಡೆಯಲು(2024–25) ಸಹಾಯಧನ ನೀಡಲಾಗುತ್ತದೆ.

ಪುರಸಭೆ ಕುರೇಕುಪ್ಪ ವ್ಯಾಪ್ತಿಯಲ್ಲಿ ಬರುವ ವಿಶೇಷ ಚೇತನ ಫಲಾನುಭವಿಗಳಿಗೆ ಶ್ರವಣ ಯಂತ್ರ, ವೀಲ್‌ಚೇರ್, ವಾಕರ್ ಹಾಗೂ ಇತರೆ ಸಾಧನ ಸಲಕರಣೆಗಳ ಖರೀದಿಗಾಗಿ ಸಹಾಯ ಧನ, ಬ್ಯಾಂಕ್‌ನಿಂದ ಪಡೆಯುವ ಸಾಲಕ್ಕೆ ಬ್ಯಾಕ್ ಎಂಡ್ ಸಬ್ಸಿಡಿ ಸಹಾಯಧನ ನೀಡಲಾಗುತ್ತದೆ.

ಆಸಕ್ತ ಅರ್ಹ ಅಭ್ಯರ್ಥಿಗಳು ಅರ್ಜಿಗಳನ್ನು ಪುರಸಭೆ ಕಚೇರಿಯಿಂದ ಪಡೆದು ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ಜೂನ್ 24 ರೊಳಗಾಗಿ ಸಲ್ಲಿಸಬೇಕು.

ತಡವಾಗಿ ಬಂದ ಮತ್ತು ಅಪೂರ್ಣ ದಾಖಲಾತಿ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಹಾಗೂ ಹಿಂಬರಹ ನೀಡದೇ ತಿರಸ್ಕರಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕುರೆಕುಪ್ಪ ಪುರಸಭೆ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೇದವಟ್ಟಿಯ ಶಿವ ಸಂಗಮೇಶ್ವರ ಶಿವಾಚಾರ್ಯರ ಪ್ರಥಮ ಪುಣ್ಯಾರಾಧನೆ ಸಂಪನ್ನ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ತಾಲೂಕಿನ ಬೆದವಟ್ಟಿ ಗ್ರಾಮದಲ್ಲಿ 28 5 2025 ಲಿಂಗೈಕ್ಯರಾಗಿದ್ದ ಬೆದವಟ್ಟಿ ಸಂಸ್ಥಾನ ಹಿರೇಮಠದ ಪೂಜ್ಯರಾದ ಶ್ರೀ ಶಿವ ಸಂಗಮೇಶ್ವರ ಶಿವಾಚಾರ್ಯರ ಪುಣ್ಯಾರಾಧನೆ ಕಾರ್ಯವನ್ನು ಶ್ರೀಶೈಲದ ಜಗದ್ಗುರುಗಳಾದ ಡಾ. ಚನ್ನ ಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯರ ಸನ್ನಿಧಾನದಲ್ಲಿ ಸಂಪನ್ನಗೊಂಡಿತು.

ತಾಲೂಕಿನ ಬೆದವಟ್ಟಿ(ವೇದವಟಿ) ಗ್ರಾಮದಲ್ಲಿ ಶ್ರೀಶೈಲ ಪೀಠದ ಆಧೀನದಲ್ಲಿರುವ ಹಿರೇಮಠ ಸಂಸ್ಥಾನ ಶ್ರೀಮಠದ ಶ್ರೀಗಳಾದ ಶ್ರೀ ಶಿವ ಸಂಗಮೇಶ್ವರ ಶಿವಾಚಾರ್ಯರು 28.05.2025ರಂದು ಲಿಂಗೈಕ್ಯರಾಗಿದ್ದರು.

ಶ್ರೀಮಠದಲ್ಲಿ ಲಿಂಗೈಕ್ಯರಾದ ಶ್ರೀಮಠದಲ್ಲಿ ಅವರ ಪುಣ್ಯಾರಾಧನೆಯನ್ನು ಶ್ರೀಶೈಲ ಜಗದ್ಗುರುಗಳ ಸನ್ನಿಧಾನದಲ್ಲಿ ನೆರವೇರಿಸಲಾಯಿತು. ನಂತರ ವೇದಿಕೆಯನ್ನು ಉದ್ದೇಶಿಸಿ ಶ್ರೀಶೈಲ ಜಗದ್ಗುರುಗಳು ಮಾತನಾಡುತ್ತಾ ಲಿಂಗೈಕ್ಯ ಶ್ರೀಶಿವಸಂಗಮೇಶ್ವರ ಶಿವಾಚಾರ್ಯರು ನಿರಂತರವಾಗಿ ಧರ್ಮ ಕಾರ್ಯಗಳನ್ನು ಮಠದ ಭಕ್ತರೊಂದಿಗೆ ನಿಕಟ ಸಂಪರ್ಕವನ್ನು ಹೊಂದಿಕೊಂಡು ಶ್ರೀ ಮಠದ ಸೇವೆ ಹಾಗೂ ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುತ್ತ ಈ ಭಾಗದ ಹಲವಡೆಗಳಲ್ಲಿ ಧರ್ಮ ಜಾಗೃತಿ ಕಾರ್ಯ ಮಾಡಿದಂತ ಮಹಾನ್ ಪುರುಷರಾಗಿದ್ದಾರೆ. ಶ್ರೀಮಠದ ಪೀಠ ಮತ್ತು ಭಕ್ತರನ್ನು ಸಹ ಪ್ರೀತಿ ಗೌರವದಿಂದ ಸಮಾನರಾಗಿ ನೋಡಿಕೊಂಡು ಹೋದ ಕೀರ್ತಿ ಅವರದ್ದಾಗಿದ್ದು ಅವರ ಅಗಲಿಕೆಯಿಂದ ಈ ಭಾಗದ ಧಾರ್ಮಿಕ ಕ್ಷೇತ್ರಕ್ಕೆ ತುಂಬಲಾರದ ನಷ್ಟವಾಗಿದೆ. ಆದರೆ ಕಾಲನ ಕರೆ ಮುಂದೆ ಎಲ್ಲರೂ ಕ್ಷಣಿಕವಾಗಿದ್ದು ಭಗವಂತನ ಇಚ್ಛೆಯಂತೆ ಸಾಗಬೇಕಾದ್ದು ನಮ್ಮೆಲ್ಲರ ಕರ್ತವ್ಯವಾಗಿದೆ. ಆದರೆ ಶ್ರೀಗಳು ಸದಾಚಾರ ಮತ್ತು ಸದ್ ವಿಚಾರದೊಂದಿಗೆ ನಗುನಗುತ್ತಾ ಜೀವನ ಪಾಲನೆಯಿಂದ ಈ ಭಾಗದ ಭಕ್ತರ ಮನದಲ್ಲಿ ಮಹಾತ್ಮರಾಗಿ ಶಾಶ್ವತ ನೆಲೆಯೂರಿದ್ದಾರೆ ಎಂದು ಹೇಳಿದರು.

ಏನು ಇಲ್ಲದ ಶ್ರೀಮಠಕ್ಕೆ ಪೀಠಾಧಿಪತಿಯಾಗಿ ಆಯ್ಕೆಯಾಗಿ ಗಂಧದ ಕಡ್ಡಿಯಂತೆ ಮಠದ ಏಳಿಗೆ ಹಾಗೂ ಭಕ್ತರ ಅಭಿವೃದ್ಧಿಗಾಗಿ ತಮ್ಮನ್ನು ತಾವೇ ಸವಿಸಿಕೊಂಡು ಪ್ರತಿಯೊಬ್ಬರಿಗೂ ಆದರ್ಶ ಪುರುಷರಾಗಿ ಜೀವನ ಸಾಗಿಸಿ ವಿವಿಧ ಧಾರ್ಮಿಕ ಕಾರ್ಯಗಳಿಂದ ಬೆದವಟ್ಟಿ ಗ್ರಾಮಕ್ಕೆ ಕೀರ್ತಿ ತಂದಿದ್ದು ಜೊತೆಗೆ ದಾಸೋಹಕ್ಕೆ ಬ್ಯಾರಲ್ ಗಟ್ಟಲೆ ತುಪ್ಪವನ್ನು ಸ್ವೀಕರಿಸಿ ಭಕ್ತರಿಗೆ ಹುಣಬಡಿಸಿದ ಅಪರೂಪದ ವ್ಯಕ್ತಿತ್ವ ಶ್ರೀಗಳದ್ದಾಗಿದ್ದು ಅವರ ಮೃತ್ಯು ಪತ್ರದಲ್ಲಿನ ಲಿಖಿತದಂತೆ ಅವರ ಆತ್ಮಕ್ಕೆ ಶಾಂತಿ ಸಿಗುವುದರೊಂದಿಗೆ ಮಠದ ಭವಿಷ್ಯವನ್ನು ಮುಂದಿಟ್ಟುಕೊಂಡು ಭವ್ಯ ಪರಂಪರೆಯ ಗತವೈಭವವನ್ನು ಮುಂದುವರಿಸಿಕೊಂಡು ಹೋಗುವ ನಿಟ್ಟಿನಲ್ಲಿ ಮಠದ ಭಕ್ತವೃಂದ, ಗ್ರಾಮಸ್ಥರು ಹಾಗೂ ಶ್ರೀ ಮಠದ ಜವಾಬ್ದಾರಿಯನ್ನು ಹೊತ್ತಿರುವ ಯಲಬುರ್ಗಾ ಸಂಸ್ಥಾನ ಹಿರೇಮಠದ ಶ್ರೀಗಳು ಜವಾಬ್ದಾರಿ ಹೊತ್ತುಕೊಂಡು ಮುಂದಿನ ಪೀಠಾಧಿಕಾರಿಯ ಪಟ್ಟಾಧಿಕಾರ ಮಾಡಿ ಮಠದ ಶ್ರೇಯೋಭಿವೃದ್ಧಿಗೆ ಸದಾ ದುಡಿಯೋದರೊಂದಿಗೆ ಲಿಂಗೈಕ್ಯ ಶ್ರೀ ಶಿವ ಸಂಗಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳ ಆತ್ಮಕ್ಕೆ ಶಾಂತಿ ತರಬೇಕೆಂದು ತಿಳಿಸಿದರು.

ಈ ವೇಳೆಯಲ್ಲಿ ಶ್ರೀ ಸಿದ್ದರಾಮೇಶ್ವರ ಶಿವಾಚಾರ್ಯರು ಹಿರೇಮಠ ಯಲಬುರ್ಗಾ, ಚಳಗೇರಿ ಮಠದ ಶ್ರೀ ವೀರ ಸಂಗಮೇಶ್ವರ ಶಿವಾಚಾರ್ಯರು, ಮಂಗಳೂರಿನ ಅರಳಲೇ ಮಠದ ಶ್ರೀ ಸಿದ್ದಲಿಂಗ ಶಿವಾಚಾರ್ಯರು, ಕುಕನೂರು ಪಟ್ಟಣದ ಅನ್ನದಾನೇಶ್ವರ ಶಾಖಾಮಠದ ಪೂಜ್ಯರಾದ ಶ್ರೀ ಮಹಾದೇವ ಮಹಾಸ್ವಾಮಿಗಳು, ಕುಷ್ಟಗಿ ಪಟ್ಟಣದ ಮದ್ದಾನೆ ಮಠ ಶ್ರೀಗಳು, ಅಂತೂರು ಬೆಂತೂರು ಶ್ರೀ ಕುಮಾರಸ್ವಾಮಿ ದೇವರು ಹಾಗೂ ಇನ್ನಿತರ ಮಠಾಧಿಪತಿಗಳು ಹಾಗೂ ಅಪಾರ ಭಕ್ತ ಸಮೂಹ ಪಾಲ್ಗೊಂಡಿದ್ದರು.

## ಪಟ್ಟಣದ ಅಭಿವೃದ್ಧಿಗೆ ವಾರ್ಡಿನ ಎಲ್ಲಾ ಸದಸ್ಯರು ಸಹಕರಿಸಿ : ರವೀಂದ್ರ ಬಾಗಲಕೋಟ

ಮಲ್ಲಮ್ಮ ನುಡಿ ವಾರ್ತೆ

ಕುಕನೂರು : ಪಟ್ಟಣದಲ್ಲಿ ಕೆಲ ಕಾಮಗಾರಿಗಳು ಕಳಪೆಮಟ್ಟದಿಂದ ಕೂಡಿದ ಕಾಮಗಾರಿಗಳಾಗಿವೆ ಎನ್ನುವ ಆರೋಪಗಳಿವೆ. ಈ ಕುರಿತು ಸಹಾಯಕ ಮುಖ್ಯ ಅಭಿಯಂತರರ ಗಮನಕ್ಕೆ ತಂದಿದ್ದು ಜೂನ್ 06ರಂದು ಎಲ್ಲಾ ಗುತ್ತಿಗೆದಾರರನ್ನು ಕರೆ ನೀಡಿ ಸಭೆ ಆಯೋಜನೆ ಮಾಡಲಾಗುವುದು ಆ ಸಭೆಯಲ್ಲಿ ಎಲ್ಲಾ ಸದಸ್ಯರು ಭಾಗವಹಿಸಿ ಪಟ್ಟಣದ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ರವೀಂದ್ರ ಬಾಗಲಕೋಟ್ ಹೇಳಿದರು. ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸೋಮವಾರದಂದು ಜರುಗಿದ ಪಟ್ಟಣ ಪಂಚಾಯತಿಯ ಸಾಮಾನ್ಯ ಸಭೆಯಲ್ಲಿ ಮಾತನಾಡಿ ಪಟ್ಟಣವನ್ನು ಮಾದರಿಯಾಗಿಸುವ ಉದ್ದೇಶವನ್ನು ಹೊಂದಿದ್ದು ಪ್ರತಿಯೊಬ್ಬರ ಸಹಕಾರ ಅಗತ್ಯ ಎಂದರು. ಹಿಂದಿನ ಸಭಾ ನಡಾವಳಿಯಂತೆ ಕಾರ್ಯನಿರ್ವಹಿಸಿದ್ದು ಸದರಿ ಸಭೆಯಲ್ಲಿ ಫೆಬ್ರವರಿ 2025ರಿಂದ ಮಾರ್ಚ್ ಹಾಗೂ ಏಪ್ರಿಲ್ 2025ರ ಜಮಾ ಖರ್ಚಿನ ವಿವರವನ್ನು ಅನುಮೋದಿಸಲಾಯಿತು.

ನಂತರ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಚರಂಡಿಗಳನ್ನು ಶುಚಿಗೊಳಿಸುವ ಕಾಮಗಾರಿಗೆ ಟೆಂಡರ್ ಕರೆಯುವ ಕುರಿತು ಚರ್ಚಿಸಲಾಯಿತು. ಈ ವೇಳೆ ಪಟ್ಟಣದ 6ನೇ ವಾರ್ಡಿನ ಸದಸ್ಯ ಮಲ್ಲಿಕಾರ್ಜುನ ಚೌದ್ರಿ ಮಾತನಾಡಿ ತಮ್ಮ ವಾರ್ಡನಲ್ಲಿ ಬೀದಿ ದೀಪ ಹಾಗೂ ಶೌಚಾಲಯ ಸಮಸ್ಯೆ ಹಾಗೇ ಉಳಿದಿದ್ದು ಇಲ್ಲಿಯವರೆಗೆ ಸುದಾರಣೆ ಮಾಡಿಲ್ಲ ಆದ್ದ–ರಿಂದ ಶೀಘ್ರದಲ್ಲಿ ಸಮಸ್ಯೆ ಇತ್ಯರ್ಥಗೊಳಿಸಬೇಕು ಇಲ್ಲವಾದಲ್ಲಿ ಪಟ್ಟಣ ಪಂಚಾಯಿತಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಹೇಳಿದರು. ಇದಕ್ಕೆ ಉತ್ತರಿಸಿದ ಮುಖ್ಯ ಅಧಿಕಾರಿ ಮೂರು ದಿನದ ಒಳಗಾಗಿ ಸಮಸ್ಯೆಯನ್ನು ಇತ್ಯರ್ಥಗೊಳಿಸಲಾಗುವುದು ಎಂದು ಭರವಸೆ ನೀಡಿದರು. ಇನ್ನೂ ಕೆಲ ಸದಸ್ಯರು ತಮ್ಮ ವಾರ್ಡಿನ ಅಭಿವೃದ್ಧಿಗೆ ಯಾವುದೇ ತರಹದ ಅನುದಾನವನ್ನು ನೀಡಿರುವುದಿಲ್ಲ. ಅನುದಾನ ನೀಡುವಲ್ಲಿಯೂ ಸಹ ತಾರತಮ್ಯ ಮಾಡಲಾಗುತ್ತಿದೆ ಎಂದು ಆರೋಪ ಮಾಡಿದರು.



ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಾಧಿಕಾರಿಗಳು ಸರ್ವ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದು–ಕೊಂಡಿದ್ದು, ಅನುದಾನದ ಆಧಾರದ ಮೇಲೆ ಎಲ್ಲಾ ವಾರ್ಡಿನ ಸದಸ್ಯರ ಸಮಸ್ಯೆಗಳಿಗೂ ಸ್ಪಂದಿಸುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ವಿಕಲಚೇತನ ಮಗುವಿಗೆ ಗಾಲಿ ಕುರ್ಚಿಯನ್ನು ಪಟ್ಟಣ ಪಂಚಾಯತಿ ಅನುದಾನದಿಂದ ನೀಡಲಾಯಿತು. ಈ ಸಂದರ್ಭದಲ್ಲಿ ಅಧ್ಯಕ್ಷೆ ಲಲಿತಮ್ಮ ಯಡಿಯಾಪುರ, ಉಪಾಧ್ಯಕ್ಷ ಪ್ರಶಾಂತ ಆರಬೆರಳಿನ, ಸ್ಥಾಯಿ ಸಮಿತಿ ಅಧ್ಯಕ್ಷ ನೂರುದ್ದೀನ್ ಸಾಬ್ ಗುಡಿಹಿಂದಲ, ಬಾಲರಾಜ ಗಾಳಿ, ಸಿದ್ದು ಉಳ್ಳಾಗಡ್ಡಿ, ಜಗನ್ನಾಥ ಭೋವಿ, ಲಕ್ಷ್ಮೀ ಸಬರದ, ಕವಿತಾ ಹೂಗಾರ, ರಾಧಾ ದೊಡ್ಮನಿ, ಹಾಗೂ ಸರ್ವ ಸದಸ್ಯರು, ಸಿಬ್ಬಂದಿಗಳು ಪಾಲ್ಗೊಂಡಿದ್ದರು.

# ಗುರುವಂದನಾ ಕಾರ್ಯಕ್ರಮದಿಂದ ಗುರು-ಶಿಷ್ಯರ ಸಂಬಂಧ ಗಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.2-ಕಲಿತ ಶಾಲೆಯಲ್ಲಿನ ನೆನಪು ಮೆಲುಕು ಹಾಕುವ,ವಿದ್ಯೆನೀಡಿದಗುರುಗಳನ್ನು ಗೌರವಿಸಿಗುರು-ಶಿಷ್ಯರಸಂಬಂಧವನ್ನು ಗಟ್ಟಿಗೊಳಿಸುವಲ್ಲಿಗುರುವಂದನಾ ಕಾರ್ಯಕ್ರಮ ಅರ್ಥಪೂರ್ಣವಾಗಿದೆ ಎಂದು ಶಿಕ್ಷಕ ಬಿ.ಎಸ್.ಹಂಚಲಿ ಹೇಳಿದರು.

ತಾಲೂಕಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶನಿವಾರ ಜರುಗಿದ ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದ ಮುಖ್ಯಅತಿಥಿಗಳಾಗಿ ಮಾತನಾಡಿದ ಅವರು,ಇಂತಹ ಕಾರ್ಯಕ್ರಮಗಳು ಶಾಲೆಯ ಅಭಿವೃದ್ಧಿ ಹಾಗೂ ಬೆಳವಣಿಗೆಗೆ ಸಹಕಾರಿಯಾಗುತ್ತವೆ ಎಂದರು.

ಶಿಕ್ಷಕ ಪಿ.ಜಿ. ಬಂದಿಕೇರಿ ಮಾತನಾಡಿ, ಶಿಕ್ಷಕನಿಗೆ ಆಸ್ತಿ, ಅಂತಸ್ತುಗಳಿಸುವುದು ಮುಖ್ಯವಲ್ಲ. ಮಕ್ಕಳಿಗೆ ಗುಣಮಟ್ಟದ ವಿದ್ಯೆ, ಒಳ್ಳೆಯ ಸಂಸ್ಕಾರ ನೀಡಿ ವಿದ್ಯಾರ್ಥಿಗಳ ಪ್ರೀತಿ, ವಿಶ್ವಾಸ, ಗೌರವಕ್ಕೆ ಪಾತ್ರರಾಗುವುದೇ ದೊಡ್ಡ ಆಸ್ತಿ ಎಂದರು.

ಹಳೆಯ ವಿದ್ಯಾರ್ಥಿಗಳಾದ ಅರುಣ ಬಾಗೇವಾಡಿ,ಗಂಗಾಧರ ಕೊಣ್ಣೂರ,ಮಂಗಳಾ ಟೆಂಕಪ್ಪನವರ, ವೀರೇಶ ಹಿರೇಮಠ, ಪ್ರಶಾಂತ ಪತ್ತಾರ ಕಲಿಕಾ ದಿನಗಳನ್ನು ಮೆಲುಕು ಹಾಕಿ ತಮ್ಮ ಸಾಧನೆ, ಬೆಳವಣಿಗೆಗೆ ಗುರುಗಳ ಕಳಕಳಿಯ ಕಲಿಸುವಿಕೆ, ಮಾರ್ಗದರ್ಶನ ಕಾರಣ ಎಂದರು. ನಿವೃತ್ತ ಶಿಕ್ಷಕರಾದ ತಿಪ್ಪಣ್ಣ ಕೊಣ್ಣೂರ, ಕೆ.ಎಸ್. ಪರಾಂಡೆ, ಎಸ್. ಎಲ್.ಸನ್ನಪ್ಪನವರ,ಬಿ.ಎನ್.ಗುಲಗಂಜಿ, ಎಸ್.ಜಿ.ಹುದ್ದಾರ,ಆರ್.ಜಿ.ಅಂಗಡಿ, ಡಿ.ವಾಯ್.ಸಂಗಾಪೂರ, ಎಸ್. ಎಸ್.ಹಳ್ಳದ,ಎ.ವಾಯ್.ಪದರಾ, ಬಿ.ಎಸ್.ಬೆಳಗಲ್, ಎಂ.ವ್ಹಿ. ಗೊರವರ, ಆರ್.ಎಸ್.ಇಂಡಿ, ರೂಪಾ ಹೊಳೆಸಾಲಿ, ಶಿಲ್ಪಾ ಎಸ್ ಅವರನ್ನು ಸನ್ಮಾನಿಸಿ, ಗೌರವಿಸಲಾಯಿತು.

ಕಸ್ತೂರಿ ಮಠದ ಓಹಿಲೇಶ್ವರ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಎಸ್.ಎಸ್.ಮಜ್ಜಗಿ ಅಧ್ಯಕ್ಷತೆ ವಹಿಸಿದ್ದರು. ಅಶೋಕ ಭಜಂತ್ರಿ ಸ್ವಾಗತಿಸಿದರು. ಎಂ.ಬಿ.ಬಾದಾಮಿ ನಿರೂಪಿಸಿದರು. ಬಸವರಾಜ ಕೊಣ್ಣೂರ ವಂದಿಸಿದರು.

# ಶೈಕ್ಷಣಿಕ ಕ್ಷೇತ್ರಕ್ಕೆ ನಂದನೂರ ಕೊಡುಗೆ ಅಪಾರ :ಸಿದ್ದರಾಮ ಮನಹಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.2-ಶೈಕ್ಷಣಿಕ ಕ್ಷೇತ್ರಕ್ಕೆಬಿ.ಕೆ.ನಂದನೂರ ಕೊಡುಗೆ ಅಪಾರವಾಗಿದ್ದು, ಅವರ ಸೇವೆ ಅನನ್ಯ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ವಿಶ್ರಾಂತ ನಿರ್ದೇಶಕ ಸಿದ್ಧರಾಮ ಮನಹಳ್ಳಿ ಹೇಳಿದರು. ಕನ್ನಡ ಸಾಹಿತ್ಯ ಪರಿಷತ್ ಬಾಗಲಕೋಟೆ ಹಾಗೂ ಬಿ.ಕೆ.ನಂದನೂರ ಗ್ರಂಥ ಪ್ರಕಟಣಾ ಸಮಿತಿ ಸಂಯುಕ್ತಾಶ್ರಯದಲ್ಲಿ ನವನಗರದ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ರವಿವಾರ ಬಿ.ಕೆ.ನಂದನೂರ ಸೇವಾ ನಿವೃತ್ತಿ ನಿಮಿತ್ತಹಮ್ಮಿಕೊಂಡಿದ್ದ 'ನೂರ್ಬೆಳಕು' ಅಭಿನಂದನಾ ಗ್ರಂಥ ಲೋಕಾರ್ಪಣೆ ಮತ್ತು ಷಷ್ಟಬ್ದಿ ಸಮಾರಂಭದಲ್ಲಿ ಅವರು ಮಾತನಾಡಿದರು.

ಅಧಿಕಾರಿಗಳು ಎಷ್ಟು ಸೇವೆ ಸಲ್ಲಿಸಿದರೂ ಕಡಿಮೆಯೇ. ಹೆಚ್ಚಚ್ಚು ಸಮಯವನ್ನು ಬಳಸಿಕೊಂಡು ಕಾರ್ಯನಿರ್ವಹಿಸಿಶೈಕ್ಷಣಿಕಅಭಿವೃದ್ಧಿಗೆ ಅಧಿಕಾರಿಗಳುಶ್ರಮಿಸಬೇಕು. ಅಂತಹ ಅಧಿಕಾರಿಗಳಲ್ಲಿ ಬಿ.ಕೆ.ನಂದನೂರ ಒಬ್ಬರಾಗಿದ್ದು, ಶಿಕ್ಷಣ ಕ್ಷೇತ್ರದಲ್ಲಿನ ಅವರ ಸೇವೆ ಸ್ಮರಣೀಯವಾಗಿದೆ ಎಂದು ಅವರು ಹೇಳಿದರು.

ಉಪನಿರ್ದೇಶಕರಾಗಿನಂದನೂರ ಅವರುಸಲ್ಲಿಸಿದಸೇವೆಅನನ್ಯವಾಗಿದೆ. ಸಮಯಪಾಲನೆ, ಶಿಸ್ತು, ಸಂಯಮ, ಇಲಾಖೆಯ ನಿಯಮ ಪಾಲನೆ ಇವೆಲ್ಲವುಗಳಿಗೂನಂದನೂರನೀಡಿದ ಸಮಯ ಅಪಾರವಾಗಿದೆ. ಅವರ ಕರ್ತವ್ಯಪಾಲನೆಗೆ ಇಂದು ಷಷ್ಟಬ್ದಿ ಸಮಾರಂಭ ನಡೆದಿದೆ ಎಂದರು. ಗ್ರಂಥ ಲೋಕಾರ್ಪಣೆಗೊಳಿಸಿದ ವಿಶ್ರಾಂತ ಉಪನಿರ್ದೇಶಕ ಎಂ.ಜಿ.ದಾಸರ ಮಾತನಾಡಿ, ಬಿ.ಕೆ.ನಂದನೂರ ಅವರ ಕುರಿತಾದ ನೂರ್ಬೆಳಕು ಅಭಿನಂದನಾ ಗ್ರಂಥ 360 ಪುಟಗಳನ್ನು ಒಳಗೊಂಡಿದ್ದು, ನಂದನೂರ ಅವರ ಬದುಕು, ಕಾರ್ಯ ಚಟುವಟಿಕೆಗಳ ಕುರಿತಾಗಿ ಸಮಗ್ರಮಾಹಿತಿಯನ್ನುಹಿಡಿದಿಟ್ಟಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಿಕ್ಷಣ ಕ್ಷೇತ್ರದ ಕಾರ್ಯಚಟುವಟಿಕೆಗಳನ್ನುನಿರ್ವಹಿಸಿ ದಕ್ಷ ಶೈಕ್ಷಣಿಕ ಅಧಿಕಾರಿಯಾಗಿ, ಶಾಲಾ ಆಡಳಿತ ವಿಭಾಗದಲ್ಲಿ ಶಿಕ್ಷಕರಿಗೆ ಸಾಕಷ್ಟು ತರಬೇತಿಗಳನ್ನು ನೀಡಿ, ಜಿಲ್ಲೆಯ ಶಿಕ್ಷಣ ಕ್ಷೇತ್ರವನ್ನು ಸದೃಢ ಮಾಡಿದವರು ನಂದನೂರ ಎಂದರು. ಗ್ರಂಥ ಕುರಿತು ವಿಮರ್ಶೆ ಮಾಡಿದ ಡಾ.ವಿ.ಎ.ಬೆನಕನಾಳ, ಕೃತಿಯಲ್ಲಿ ನಂದನೂರ ಅವರ ಕುರಿತು ಲೇಖನಗಳು, ಕವಿತೆಗಳು ಸಾಕಷ್ಟು ವಾಸ್ತವ ಬದುಕನ್ನು ಕಟ್ಟಿಕೊಟ್ಟಿವೆ. ಗ್ರಂಥದಲ್ಲಿ ನಂದನೂರ ಅವರ ನಿಷ್ಠೆ, ಕರ್ತವ್ಯಪಾಲನೆ, ಸಮಯಪಾಲನೆ ಕುರಿತಾಗಿ ಲೇಖನಗಳು ಮಾರ್ಮಿಕವಾಗಿ ಮೂಡಿ ಬಂದಿವೆ ಎಂದರು.

ಬಿ.ಕೆ.ನಂದನೂರ ಮಾತನಾಡಿ, ನನ್ನಸುದೀರ್ಘ ಸೇವಾ ಅವಧಿಯಲ್ಲಿ ಮಕ್ಕಳ ಶೈಕ್ಷಣಿಕ ಬೆಳವಣಿಗೆಗೆ ಸಮಯ ಕಳೆದಿದ್ದೇನೆ. ಕೌಟುಂಬಿಕ ಬದುಕಿಗಿಂತ ನನಗೆ ನನ್ನ ಇಲಾಖೆಯ ಚಟುವಟಿಕೆಗಳೇ ಮುಖ್ಯವೆಂದು ಕರ್ತವ್ಯ ನಿರ್ವಹಿದ್ದೇನೆ ಎಂದರು.

ಮುಖ್ಯ ಅತಿಥಿಗಳಾಗಿ ಪ್ರಭಾರಿ ಉಪನಿರ್ದೇಶಕ ಎಚ್.ಜಿ.ಮಿಜಿ, ಜಮಖಂಡಿ ಬಿಇಓ ಅಶೋಕ ಬಸಣ್ಣವರ, ಕ್ಷೇತ್ರಸಮನ್ವಯಾಧಿಕಾರಿ ಎಚ್.ಕೆ.ಗುಡೂರ ಮಾತನಾಡಿದರು. ಗ್ರಂಥ ಸಂಪಾದಕ ಡಾ.ಸಿ.ಎಂ.ಜೋಶಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಹುನಗುಂದ ಬಿಇಓ ಜಾಸ್ಮೀನ್ ಕಿಲ್ಲೇದಾರ ಸ್ವಾಗತಿಸಿದರು. ಸನ್ಮಾನಿತರ ಪರವಾಗಿ ಡಾ.ಲಲಿತಾ ಹೊಸಪ್ಯಾಟಿ, ಪರಶುರಾಮ ಚಲವಾದಿ ಮಾತನಾಡಿದರು. ಸಂಗಮೇಶ ಸಣ್ಣತಂಗಿ ಹಾಗೂ ಶಿವಾನಂದ ಪೂಜಾರ ನಿರೂಪಿಸಿದರು. ಆರ್. ಎಂ.ಬಾಗವಾನ ವಂದಿಸಿದರು.

ಈಜು ಬರದ ಬಾಲಕರನ್ನು ಕಾಪಾಡಿದ ಸುನಿಲ್ ಸ್ನೇಹಿತರಿಗೆ ಶ್ಲಾಘನೀಯ.

# ಇಬ್ಬರ ಪ್ರಾಣ ರಕ್ಷಿಸಿದ ಕನ್ನಕೋಳೂರುಗ್ರಾಮದ ಸ್ನೇಹಿತರು





ಮಲ್ಲಮ್ಮ ನುಡಿ ವಾರ್ತೆ

ಶಹಾಪುರ್ ಈಜುಬರದಯುವಕರು ಬಾವಿಯಲ್ಲಿಬಿದ್ದಾಗರಕ್ಷಣೆಮಾಡಿದ ಸುನಿಲ್ ಹನುಮಂತ ಅನಿಲ್ ಕನ್ಯಕೋಳೋರ್ ಯುವಕರು.

ಇಲ್ಲಿನ ಕನ್ನ ಕೋಳೂರು ಗ್ರಾಮದ ತಾಂಡಾದ ಪಕ್ಕದಲ್ಲಿರುವ ಬಾವಿಯಲ್ಲಿ ಈಜು ಬರದೆ ಹುಡುಗರಾದ ವಿಕ್ಕಿ 8 ವರ್ಷದ ಬಾಲಕ ಹಾಗೂ ಕುನಾಲ್ 9 ವರ್ಷದ ಬಾಲಕ ಇಬ್ಬರು ಈಜಲು ಹೋಗಿ ಬಾವಿಯಲ್ಲಿ ಬಿದ್ದು ಈಜು ಬರದೇ ಚಿರಾಡುತ್ತಿದ್ದರು. ದಾರಿಯಲ್ಲಿ ಹೋಗುತ್ತಿರುವ ಸುನಿಲ್ ಯುವಕರ ಏನೋ ಶಬ್ದವಾಗುತ್ತದೆ ನೋಡೋಣ ಬನ್ನಿ ಎಂದು ಸ್ಥಳಕ್ಕೆ ಧಾವಿಸಿ, ನೀರಲ್ಲಿ ತೇಲಾಡುತ್ತಿರುವ ಯುವಕರನ್ನು ಕೂಡಲೇ ಹೊರ ತೆಗೆದು. ಇಬ್ಬರ ಯುವಕರ ರಕ್ಷಣೆ ಮಾಡಿದ್ದಾರೆ.

ತಾಲೂಕ ಆಸ್ಪತ್ರೆ ಶಹಪುರ್ ಚಿಕಿತ್ಸೆ ಪಡೆಯುತ್ತಿದ್ದಾರೆ.

ಸುನಿಲ್ ಹಾಗೂ ಸ್ನೇಹಿತರು ಕೂಡಲೇ ಹೊರತೆಗೆದು ಪ್ರಾಣ ರಕ್ಷಿಸಿದ ಯುವಕರಿಗೆ ತಾಲೂಕಿನ ಅತ್ಯಂತ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

# ಬೀಳಗಿ ತಾಲೂಕಿನಲ್ಲಿ ಜೆಜೆಎಂ ಕಾಮಗಾರಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.2-ಕೇಂದ್ರ ಸರ್ಕಾರ ನಿಯೋಜಿಸಿದ ತಂಡದ ಮುಖ್ಯಸ್ಥರಾದ ಐಶ್ವರ್ಯಸಿಂಗ್ ಜಿಲ್ಲೆಯ ಬೀಳಗಿ ತಾಲೂಕಿನಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಮಹತ್ವಕಾಂಕ್ಷಿ ಯೋಜನೆ ಜಲ ಜೀವನ ಮಿಷನ್ ಯೋಜನೆಯ ಜಾಕ್‌ವೆಲ್ ಡಬ್ಲ್ಯೂ.ಟಿ.ಪಿ ಪೈಪ್‌ಲೈನ್ ಸಂಪರ್ಕ ಕಾಮಗಾರಿಗಳನ್ನು ಪರಿಶೀಲಿಸಿದರು.

ಭೇಟಿ ಸಮಯದಲ್ಲಿ ಅನಗವಾಡಿ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಗ್ರಾಮ ನೀರು ನೈರ್ಮಲ್ಯ ಸಮಿತಿಯೊಂದಿಗೆ ಸಭೆ ನಡೆಸಿ ನೀರಿನ ಗುಣಮಟ್ಟ, ಸಮಿತಿಯ ಸಭೆ, ಯೋಜನೆಗಳ ಅನುಷ್ಠಾನ ಕುರಿತ ಮಾಹಿತಿ ಪಡೆದು ಸೂಕ್ತ ಸಲಹೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಬೆಂಗಳೂರು ಗ್ರಾಮೀಣಾಭಿವೃದ್ಧಿ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧೀಕ್ಷಕ ಅಭಿಯಂತರರಾದ ಸುನಂದ, ಜಿ.ಪಂ ಉಪಕಾರ್ಯದರ್ಶಿ ಎನ್. ವೈ.ಬಸರಿಗಿಡದ, ಗ್ರಾ.ಪಂ ಅಧ್ಯಕ್ಷೆ ಹುಚ್ಚವ್ವ ಮಾದರ, ಗ್ರಾಮೀಣ ಕುಡಿಯುವ ನೀರು ಯೋಜನೆಯ ಕಾರ್ಯನಿರ್ವಾಹಕ ಅಭಿಯಂತರ ಆಕಾಶ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ರವಿಕಿರಣ್ ಡಂಬಳ, ಜಿಲ್ಲಾ ಯೋಜನಾ ವ್ಯವಸ್ಥಾಪಕ ಪರಶುರಾಮ ಗಾಣಿಗೇರ ಸೇರಿದಂತೆ ಇತರರು ಇದ್ದರು.

# ಗುರುವಂದನೆ-ಹಳೆಯ ನೆನಪುಗಳನ್ನು ಮೆಲುಕು ಹಾಕಿದ ಸ್ನೇಹಿತರು




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.2-ನಗರದ ಬಿ.ವಿ.ವಿ.ಸಂಘದ ಬಸವೇಶ್ವರ ಇಂಜಿನಿಯರಿಂಗ್ ಕಾಲೇಜಿನಲ್ಲಿ 1996 ರಿಂದ 2000 ರವರೆಗೆ ವಿವಿಧ ವಿಭಾಗಗಳಲ್ಲಿ ಅಧ್ಯಯನ ಮಾಡಿದ್ದ ಬಿಇ ವಿದ್ಯಾರ್ಥಿಗಳು ಗುರುವಂದನಾ ಕಾರ್ಯಕ್ರಮ ಹಮ್ಮಿಕೊಂಡು ಕಲಿಸಿದ ಗುರುಗಳನ್ನು ಸನ್ಮಾನಿಸಿ,ಅಂದಿನ ಸವಿನೆನಪುಗಳನ್ನು ಹಂಚಿಕೊಂಡರು. ಶಿಷ್ಯಂದಿರ ಸಾಧನೆ ಕಂಡು ಬೆರಗಾದ ಶಿಕ್ಷಕರು, ಇದು ವೃತ್ತಿ ಬದುಕಿನ ಸಾರ್ಥಕ ಭಾವ ಎಂದು ಮನಸಾರೆ ಹೇಳಿದರೆ, ತಮ್ಮ ಉಜ್ವಲ ಭವಿಷ್ಯಕ್ಕಾಗಿ ಮಾರ್ಗ ತೋರಿದ ಗುರುಗಳನ್ನು ಸಮ್ವೇತ-2025 ಎಂಬ ಶೀರ್ಷಿಕೆ ಅಡಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಸನ್ಮಾನಿಸಿ ಗೌರವಿಸಿದರು.

ಬಿವಿವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ ಅಧ್ಯಕ್ಷತೆ ವಹಿಸಿ ಮಾತನಾಡಿ, ತಮ್ಮೆಲ್ಲರ ಸಾಧನೆ ನಮ್ಮ ಸಂಘದ ಹೆಮ್ಮೆ ಎಂದರು. ತಾಂತ್ರಿಕ ಶಿಕ್ಷಣ ಸಂಸ್ಥೆಗಳ ನಿರ್ದೇಶಕ ಡಾ.ಆರ್. ಎನ್.ಹೆರಕಲ್ ಮಾತನಾಡಿ, ಇಂಜಿನಿಯರಿಂಗ್ ಕಾಲೇಜಿನ ಬೆಳವಣಿಗೆ, ಅಭಿವೃದ್ಧಿ ಹಾಗೂ ಮುನ್ನೋಟದ ಕುರಿತು ಮಾಹಿತಿ ನೀಡಿದರು. ಪ್ರಾಚಾರ್ಯ ಡಾ.ಬಿ.ಆರ್.ಹಿರೇಮಠ ಕಾಲೇಜಿನ ಸಾಧನೆಗಳ ನೋಟವನ್ನು ವಿವರಿಸಿದರು. ಶಾಲಾ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಹಾಂತೇಶ ಶೆಟ್ಟರ ಪ್ರಾಸ್ತಾವಿಕವಾಗಿ ಮಾತನಾಡಿ ಕಾಲೇಜು ಹಾಗೂ ಸ್ನೇಹಿತರ ಮತ್ತು ಗುರುಗಳ ಜೊತೆಗಿನ ಸಂಬಂಧವನ್ನು ಮೆಲುಕು ಹಾಕಿದರು.

ಹಳೆ ವಿದ್ಯಾರ್ಥಿ ಸಂಘದ ಕಾರ್ಯದರ್ಶಿ ಪ್ರೊ. ಬಿ.ಆರ್. ಯಂಡಿಗೇರಿ ಸ್ವಾಗತಿಸಿದರು., ಕಾಲೇಜಿನಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಡಾ.ಬಿ.ಎಂ.ಹಿರೇಮಠ, ಪಿ.ಬಿ.ಕೋಟೂರ, ಡಾ.ಬಿ.ಎಸ್. ಅನಾಮಿ, ಡಾ.ಹೊನ್ನುಟಗಿ, ಡಾ.ಬಿ.ಜಿ.ಕಟಗೇರಿ,ಡಾ.ಸಿ.ಬಿ.ಅಕ್ಕಿ, ವಿನಾಯಕ ಹೆಗಡೆ ಇದ್ದರು. ಅಂಗಡಿ ವಂದಿಸಿದರು. ಅಮೆರಿಕಾ, ಜಾರ್ಜಿಯಾ, ಆಸ್ಟ್ರೇಲಿಯಾ ಕೆನಡಾ, ಮುಂಬೈ, ದೆಹಲಿ, ಬೆಂಗಳೂರು, ಹೈದರಾಬಾದ್ ನಗರಗಳಲ್ಲಿ ಉನ್ನತ ಹುದ್ದೆಯಲ್ಲಿ ಕೆಲಸ ಮಾಡುತ್ತಿರುವ ಕಾಲೇಜಿನ 200 ಹಳೇ ವಿದ್ಯಾರ್ಥಿಗಳು 25 ವರ್ಷಗಳ ನಂತರ ಒಂದಡೆ ಸೇರಿ ಅಪರೂಪದ ಕ್ಷಣಕ್ಕೆ ಸಾಕ್ಷಿಯಾಗಿದರು.

# ಯೋಜನೆಗಳ ಲಾಭ ಪಡೆದುಕೊಳ್ಳಲು ರೈತರಿಗೆ ಸಲಹೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ರೈತಾಪಿ ಜನರನ್ನು ಆರ್ಥಿಕವಾಗಿ ಸಬಲೀಕರಿಸುವ ಉದ್ದೇಶದಿಂದ ಸರ್ಕಾರ ಹಲವಾರು ಯೋಜನೆಗಳನ್ನು ಹೊರ ತಂದಿದೆ ಅವುಗಳ ಸದುಪಯೋಗವನ್ನು ಮಾಡಿಕೊಳ್ಳಬೇಕು ಎಂದು ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ಸಿದ್ದನಗೌಡ ಪಾಟೀಲ(ನಾವದಗಿ) ಹೇಳಿದರು. ಸ್ಥಳೀಯ ರೈತ ಸಂಪರ್ಕ ಕೇಂದ್ರದಲ್ಲಿ ಜಿಪಂ, ಕೃಷಿ ಇಲಾಖೆ ವಿಜಯಪುರ ಹಾಗೂ ತಾಳಿಕೋಟಿ ಇವರ ಆಶ್ರಯದಲ್ಲಿ ಹಮ್ಮಿಕೊಂಡಿದ್ದ 2025-26ನೇ ಸಾಲಿನ ಮುಂಗಾರು ಹಂಗಾಮಿನ ರಿಯಾಯಿತಿ ದರದಲ್ಲಿ ರೈತರ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಪುರಸಭೆ ಮಾಜಿ ಸದಸ್ಯ ಪ್ರಭುಗೌಡ ಮದರಕಲ್ಲ ಸೈಕಲ್ ಎಡಿ ವಿತರಣೆಗೆ ಚಾಲನೆ ನೀಡಿ ಮಾತನಾಡಿ ರೈತ ಸಂಪರ್ಕ ಕೇಂದ್ರದಲ್ಲಿ ರಿಯಾಯಿತಿ ದರದಲ್ಲಿ ಬೀಜ ದೊರೆಯುತ್ತವೆ. ಸರ್ಕಾರ ಬೀಜಕ್ಕೆ ಸಬ್ಸಿಡಿ ಸಹ ನೀಡುತ್ತದೆ ಆದ್ದರಿಂದ ನಮ್ಮ ರೈತರು ಇದರ ಲಾಭ ಪಡೆದುಕೊಳ್ಳಬೇಕು ಎಂದು ತಿಳಿಸಿದರು. ಕೃಷಿ ಅಧಿಕಾರಿ ಮಹೇಶ ಜೋಷಿ ಮಾತನಾಡಿ ಬಿತ್ತನೆ ಚಟುವಟಿಕೆ ಪ್ರಾರಂಭವಾಗಿದ್ದು ರೈತರು ಬಿತ್ತನೆ ಬೀಜ ಖರೀದಿಗೆ ಮುಂದಾಗುತ್ತಿದ್ದಾರೆ ನಮ್ಮ ರೈತ ಸಂಪರ್ಕ ಕೇಂದ್ರದಲ್ಲಿ ರೈತರ ಬಿತ್ತನೆ ಬೀಜಗಳಾದ ತೊಗರಿ ಟಿಎಸ್ 3 ಆರ್(ಪಿಂಕ್) 252 ಕ್ವಿಂಟಲ್ ಹಾಗೂ ಹೆಸರು (ಬಿಜಿಎಸ್-9)2 ಕ್ವಿಂಟಲ್ ದಾಸ್ತಾನುವಿದೆ,ಇದರ ಜೊತೆಗೆ ರಿಯಾಯಿತಿ ದರದಲ್ಲಿ ಕುಂಟಿ ದಿಂಡು,ಎಡೆ ದಿಂಡು( ಸೈಕಲ್ ಎಡಿ) ಲಭ್ಯ ಇದ್ದು ರೈತರು ಇದರ ಲಾಭವನ್ನು ಪಡೆದುಕೊಳ್ಳಬೇಕು. ಡಿಎಪಿ ಗೊಬ್ಬರದ ಕೊರತೆವಿದ್ದು ರೈತರು ಇದಕ್ಕೆ ಪರ್ಯಾಯವಾಗಿ ಗಂಧಕ ಒದಗಿಸುವ 20:20:0:13 ಹಾಗೂ ಪೊಟ್ಯಾಷ್ ಒದಗಿಸುವ ಇತರೆ ಸಂಯುಕ್ತ ರಸಗೊಬ್ಬರಗಳಾದ 15:15:15,10:26:26,12:32:16,22:22:11,14:35:14,17:17:17,14:28:14,19:19:19,20:10:10 ಇತ್ಯಾದಿ ಪರ್ಯಾಯ ರ ಸಗೊಬ್ಬರುಗಳನ್ನು ಸಹ ಬಳಸಬಹುದಾಗಿದೆ, ರೈತರು ಬೀಜ ಖರೀದಿಯ ಬಿಲ್ ಕಡ್ಡಾಯವಾಗಿ ಪಡೆದುಕೊಳ್ಳಬೇಕು ಎಂದರು. ಈ ಸಮಯದಲ್ಲಿ ಮುಖಂಡರಾದ ಶರಣಗೌಡ ದೇಶಮುಖ, ಸಂಗನಗೌಡ ಅಸ್ಕಿ, ಇಲಾಖೆಯ ನಿವೃತ್ತ ಕೃಷಿ ಅಧಿಕಾರಿ ಎಂ.ಎಚ್.ಬೀಳಗಿ, ಸಂಗಮೇಶ ಪಾಟೀಲ, ರುಕ್ಸಾನಾ ಫಿರೋಜ ತಾಳಿಕೋಟಿ, ಕಿರಣ ಬೊಮ್ಮನಹಳ್ಳಿ, ಹಣಮಂತ್ರಾಯ ಕುಂಟರೆಡ್ಡಿ, ವೀರಪಾಕ್ಷಯ್ಯ ನಂದಿಕೋಲ ಹಾಗೂ ರೈತರು ಮತ್ತಿತರರು ಇದ್ದರು.

# ಮುಖ್ಯಮಂತ್ರಿಗಳಿಂದ ಡಿ.ಸಿ.ಗೆ ಪ್ರಜಾ ಸೌಧ ಕಟ್ಟಡ ಮಂಜೂರಾತಿ ಪತ್ರ ಹಸ್ತಾಂತರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ-ಇತ್ತೀಚೆಗೆಬೆಂಗಳೂರಿನ ವಿಧಾನಸೌಧದಲ್ಲಿನಡೆದಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಸಿ.ಇ.ಓ ಗಳ ಎರಡು ದಿನದ ಸಮ್ಮೇಳನದಲ್ಲಿ ಯಾದಗಿರಿ ಜಿಲ್ಲೆಯ ನೂತನ ತಾಲೂಕುಗಳಾದ ವಡಗೇರಾ, ಹುಣಸಗಿ, ಗುರುಮಠಕಲ್ ಹಾಗೂ ಶಹಾಪುರ ತಾಲೂಕಿನಲ್ಲಿ ಪ್ರಜಾ ಸೌಧ ಕಟ್ಟಡ ನಿರ್ಮಾಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯಾದಗಿರಿ ಡಿ.ಸಿ. ಡಾ. ಬಿ.ಸುಶೀಲಾ ಅವರಿಗೆ ಮಂಜೂರಾತಿ ಪತ್ರ ಹಸ್ತಾಂತರಿಸಿದರು.

ಅದರಂತೆ ವಿವಿಧ ಇಲಾಖೆಗಳ ಸೇವೆ ಒಂದೇ ಸೂರಿನಡಿ ಸಿಗಲು ಮುಂದಿನ ದಿನದಲ್ಲಿ ವಡಗೇರಾ, ಹುಣಸಗಿ, ಗುರುಮಠಕಲ್ ಹಾಗೂ ಶಹಾಪುರ ತಾಲೂಕಿನಲ್ಲಿ ಪ್ರಜಾ ಸೌಧ ಕಟ್ಟಡ ಅನುಷ್ಠಾನಗೊಳಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# 'ಭಾರತ ಸಿಂಧು ರಶ್ಮಿ' ಮಹತ್ವದ ಕೊಡುಗೆ-ಡಾ.ನರೋಡೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.2-ವಿನಾಯಕ ಕಾವ್ಯನಾಮದ ವಿ.ಕೃ.ಗೋಕಾಕ ಅವರ ಜ್ಞಾನಪೀಠ ಪ್ರಶಸ್ತಿ ಪಡೆದ 'ಭಾರತ ಸಿಂಧು ರಶ್ಮಿ' 20 ನೇ ಶತಮಾನದ ಮಹತ್ವದ ಕೊಡುಗೆ ಎಂದು ಸಾಹಿತಿ ಡಾ.ಅಶೋಕ ನರೋಡೆ ಹೇಳಿದರು.

ನಗರದ ಶಿವಾನುಭವ ಸಮಿತಿ ಹಾಗೂ ಸಾಹಿತ್ಯ-ಸಂಸ್ಕೃತಿ ಸಂವಹನ ವೇದಿಕೆಯಡಿಯಲ್ಲಿ ಭಾರತೀಯ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ವಿ.ಕೃ. ಗೋಕಾಕರ ಭಾರತ ಸಿಂಧೂರ ರಶ್ಮಿ ಕುರಿತು ಚರಂತಿಮಠದ ಸಭಾಂಗಣದಲ್ಲಿ ನಡೆದ ಆರನೇ ಉಪನ್ಯಾಸ ಮಾಲಿಕೆಯಲ್ಲಿ ಅವರು ಮಾತನಾಡಿದರು.

ವಿ.ಕೃ.ಗೋಕಾಕ್ರ ಭಾರತ ಸಿಂಧು ರಶ್ಮಿ ಕುಮಾರ ಕಾವ್ಯದ 2ನೇ ಭಾಗವಾಗಿದೆ. ಭಾರತದ ಪ್ರಾಚೀನ ಭವ್ಯ ಇತಿಹಾಸ ಹಾಗೂ ವೇದಕಾಲಿನ ಭಾರತವನ್ನು ವಿಹಂಗಮವಾಗಿ ವಿಶ್ಲೇಷಿಸುತ್ತದೆ. ಈ ಮಹಾಕಾವ್ಯದಲ್ಲಿ 12 ಖಂಡಗಳು, 35 ಸಾವಿರ ಸಾಲುಗಳಿವೆ. ಋಗ್ವೇದ ಕಾಲದ ಜನಜೀವನವನ್ನು ವಿವರಿಸುತ್ತದೆ. ವಿಶೇಷವಾಗಿ ಮಹರ್ಷಿ ವಿಶ್ವಾಮಿತ್ರನ ವ್ಯಕ್ತಿತ್ವ ವಿವಿಧ ಆಯಾಮಗಳನ್ನು ಚರ್ಚಿಸುತ್ತದೆ. ಮಹರ್ಷಿ ವಿಶ್ವಾಮಿತ್ರನೇ ಈ ಮಹಾಕಾವ್ಯದ ನಾಯಕ ಎಂದು ಹೇಳಿದರು.

ಸಾನಿಧ್ಯ ವಹಿಸಿದ್ದ ಚರಂತಿಮಠದ ಪೂಜ್ಯ ಪ್ರಭುಸ್ವಾಮಿಗಳು ಮಾತನಾಡಿ, ಸಾಕಷ್ಟು ಕಾವ್ಯಗಳು ರಾಮಾಯಣ ಮಹಾಭಾರತ ಕುರಿತ ವಸ್ತುಗಳನ್ನು ಆಯ್ದುಕೊಂಡು ರಚಿತವಾದರೆ ವಿ.ಕೃ.ಗೋಕಾಕರು ಋಗ್ವೇದದ ಹಿನ್ನೆಲೆಯಲ್ಲಿ ಭಾರತ ಸಿಂಧೂರಶ್ಮಿ ರಚನೆ ಮಾಡಿದ್ದು ವಿಶೇಷ. ಋಗ್ವೇದದ ತತ್ವಗಳು, ಪೌರಾಣಿಕ ಕಾಲ್ಪನಿಕ ಸಾಮರ್ಥ್ಯ, ಆರ್ಯ-ದ್ರಾವಿಡ ಸಂಸ್ಕೃತಿಯ ಮಿಶ್ರಣ ಹಾಗೂ ಅದರಿಂದ ಉಂಟಾದ ಸಂಘರ್ಷ ಇತ್ಯಾದಿ ಭಾರತ ಸಿಂಧು ರಶ್ಮಿಯ ವಿಶೇಷ ವಸ್ತುವಾಗಿದೆ ಎಂದರು.

ಸಾಹಿತ್ಯ ಮತ್ತು ಸಂಸ್ಕೃತಿ ಸಂವಹಣ ವೇದಿಕೆಯ ಸಂಯೋಜಕ ಡಾ.ವಿಜಯಕುಮಾರ ಕಟಗಿಹಳ್ಳಿಮಠ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಅಶೋಕ ನರೋಡೆ ಅವರನ್ನು ಚರಂತಿಮಠದ ಶಿವಾನುಭವ ಸಮಿತಿ ಪರವಾಗಿ ಹಾಗೂ ಬಸವೇಶ್ವರ ವಿದ್ಯಾವರ್ಧಕ ಸಂಘದ ಕನ್ನಡ ಅಧ್ಯಾಪಕರ ಪರವಾಗಿ ಸನ್ಮಾನಿಸಲಾಯಿತು.

ಸಾಹಿತ್ಯ ಮತ್ತು ಸಂಸ್ಕೃತಿ ಸಂವಹಣ ವೇದಿಕೆಯ ಸಂಚಾಲಕ ಎಂ.ನಂಜುಂಡಸ್ವಾಮಿ ಸ್ವಾಗತಿಸಿದರು. ಡಾ.ಎಸ್. ಡಿ.ಕೆಂಗಲಗುತ್ತಿ ಪರಿಚಯಿಸಿದರು. ಶ್ರೀಮತಿ ನಂದಿನಿ ದೊಡ್ಡಮನಿ ವಂದಿಸಿದರು ಆಯ್. ಕೆ.ಮಠದ ನಿರೂಪಿಸಿದರು, ಎಸ್. ಆರ್.ಮನಹಳ್ಳಿ, ಜಿ.ಎನ್.ಪಾಟೀಲ, ಎಸ್.ಜಿ.ಕೋಟಿ, ಬಸವರಾಜ ತಿಪಶೆಟ್ಟಿ, ಡಾ.ಜಗನ್ನಾಥ ವ್ಹಿ. ಚವ್ಹಾಣ, ಬಸವರಾಜ ಖೋತ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ನಿವೃತ್ತ ಶಿಕ್ಷಕರಿಗೆ ಬೀಳ್ಕೊಡುಗೆ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ: ನಮ್ಮ ಸಂಸ್ಥೆಯಲ್ಲಿ ಸೇವೆಸಲ್ಲಿಸಿ ತಮ್ಮ ಜೀವನ ರೂಪಿಸಿಕೊಂಡು ತೃಪ್ತಿಕರವಾಗಿ ಸೇವೆಯಿಂದ ನಿವೃತ್ತರಾಗಿರುವದು ನಮಗೆ ಹೆಮ್ಮೆ ಇದೆ. ಅವರ ನಿವೃತ್ತ ಜೀವನ ಸುಖಮಯವಾಗಿರಲಿ ಎಂದು ವ್ಹಿ.ಸಿ.ಹಿರೇಮಠ ಹಾರೈಸದರು. ಅವರು ಪಟ್ಟಣದ ವೀರಶೈವ ವಿದ್ಯಾವರ್ಧಕ ಸಂಘದ ವಿರಕ್ತ ಶ್ರೀ ಸಭಾಭವನದಲ್ಲಿ ನಡೆದ ಸನ್ಮಾನ ಸಮಾರಂಭ ದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರೌಢಶಾಲೆಗಳಲ್ಲಿ ಸೇವೆ ಸಲ್ಲಸಿ ನಿವೃತ್ತರಾದ ಶಿಕ್ಷಕರಾದ ವಾಯ್. ಎಸ್.ನಾದ, ಶ್ರೀಮತಿ. ಬಿ.ಟಿ.ಸಜ್ಜನ ಮತ್ತು ಶ್ರೀಮತಿ ಎಮ್.ಆರ್.ಕುಲಕರ್ಣಿ ಅವರಿಗೆ ಶುಭಹಾರೈಸಿದರು. ನಿವೃತ್ತ ಶಿಕ್ಷಕರು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು, ಶ್ರೀಮತಿ.

# ಸರಕಾರಿ ಶಾಲೆಯಲ್ಲಿ ಡೆಂಗ್ಯೂ ಜಾಗೃತಿ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ಪಟ್ಟಣ ವ್ಯಾಪ್ತಿಯ ಕಸಬಾ ಲಿಂಗಸುಗೂರ ಸರಕಾರಿ ಶಾಲೆಯಲ್ಲಿ ಡೆಂಗ್ಯೂ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಮಕ್ಕಳು ಹಾಗೂ ಶಿಕ್ಷಕರಿಗೆ ಮಾಹಿತಿ ನೀಡಿ ಈಡಿಸ್ ಈಜಿಪ್ಟ್ ಸೊಳ್ಳೆಯು ಸ್ವಚ್ಛ ಇರುವ ಸಂಗ್ರಹಿತ ನೀರಿನಲ್ಲಿ ಮೊಟ್ಟೆಗಳು ಇಡುತ್ತದೆ. ಲಾರ್ವಾ ಇದ್ದಲ್ಲಿ ನಾಶಪಡಿಸುವಂತೆ ತಿಳಿಸಿ. ಶಾಲಾ ಆವರಣ ಮತ್ತು ಮೇಲ್ಛಾವಣಿ ಯಲ್ಲಿ ನೀರು ಸಂಗ್ರಹ ತೊಟ್ಟಿಗಳನ್ನು ವೀಕ್ಷಿಸಿ ಲಾರ್ವಾ ಆಗದಂತೆ ನೀರಿನ ಟ್ಯಾಂಕ್ ಇತರ ಪರಿಕರಗಳನ್ನು ಭದ್ರವಾಗಿ ಮುಚ್ಚಿಡಲು ಹಾಗೂ ವಾರಕ್ಕೊಮ್ಮೆ ಸ್ವಚ್ಛಗೊಳಿಸುವಂತೆ ಅಲ್ಲದೇ ವಿದ್ಯಾರ್ಥಿಗಳು ತಮ್ಮ ಮನೆ ಹಾಗೂ ನೆರೆ ಹೊರೆಯವರಿಗೂ ಮಾಹಿತಿ ನೀಡಲು ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ್ ಜೋಶಿ ಕೋರಿದರು.

ಸಾಂಕ್ರಾಮಿಕ ರೋಗಗಳ ಶಾಸ್ತ್ರಜ್ಞ ಅಶೋಕ ಮಡ್ಡಿಕರ್ ಅವರು ಡೆಂಗ್ಯೂ ಜ್ವರ ಲಕ್ಷಣಗಳು ತೀವ್ರ ಜ್ವರ. ತಲೆನೋವು. ಕಣ್ಣಿನ ಹಿಂಭಾಗ ದಲ್ಲಿ ಸೆಳೆತ. ವಾಂತಿ. ಹೊಟ್ಟೆಯ ಭಾಗದಲ್ಲಿ ನೋವು. ಚರ್ಮದಿಂದ ರಕ್ತ ಸ್ರಾವ ಕಂಡು ಬರಬಹುದು. ಅಲಕ್ಷಮಾಡದೇ ರಕ್ತ ಪರೀಕ್ಷೆ ಮತ್ತು ಚಿಕಿತ್ಸೆ ಪಡೆಯಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಶಾಲಾ ಮುಖ್ಯೋಪಾಧ್ಯಾಯಿನಿ ದ್ರಾಕ್ಷಾಯಣಿ. ಶಿಕ್ಷಕರಾದ ಈರಮ್ಮ.ಸವಿತಾ.ಲಲಿತಾ. ಗೀತಾ.ಜಯಶ್ರೀ.ಗುರುಸಂಗಯ್ಯ. ಮಲ್ಲಿಕಾರ್ಜುನ. ಸಿದ್ದಪ್ಪ .ಶಾಲಾ ವಿದ್ಯಾರ್ಥಿಗಳು ಹಾಜರಿದ್ದರು.

